VOLUME: 16 | 18 JULY 2026 | ಶನಿವಾರ | RS: 2 | PAGE: 06 ISSUE: 156 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಗೆಳೆಯ ವೈಶಾಕ್ ಸಾವಿನ ಬಳಿಕ ನಟಿ ಕೃಷಿ ತಾಪಂಡ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಭಾವುಕ ಮಾತುಗಳ ನ್ನಾಡಿದ್ದಾರೆ. ನನ್ನ ಜೀವನದಲ್ಲಿ ಏನು ನಡೆಯುತ್ತಿದೆ ಎಂದು ನನಗೆ ಅರ್ಥವಾಗುತ್ತಿಲ್ಲ. ನಿಮಗೆ ಅದು ಒಂದು ಘಟನೆ ಆಗಿರಬಹುದು. ಆದರೆ ನನಗೆ ಒಂದು ಲಾಸ್. ಯಾರಾದರೂ 'ಹೇಗಿದ್ದೀರಾ?' ಎಂದು ಕೇಳಿದರೆ ಏನೂ ತೋಚುವುದಿಲ್ಲ. ನಾನು ಒಳಗಿನಿಂದ ಸಂಪೂರ್ಣವಾಗಿ ಒಡೆದು ಹೋಗಿದ್ದೇನೆ ಎಂದು ನೊಂದು ಪೋಸ್ಟ್ ಮಾಡಿದ್ದಾರೆ.



BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಎರಡನೇ ವಿಮಾನ ನಿಲ್ದಾಣದ ಸ್ಥಳ ಆಯ್ಕೆ ವಿಚಾರದಲ್ಲೂ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ರಾಜ್ಯದ ಪೂರ್ವ ಭಾಗದಲ್ಲಿ ವಿಮಾನ ನಿಲ್ದಾಣ ನಿರ್ಮಿಸಿದರೆ ಮಧ್ಯ ಹಾಗೂ ಉತ್ತರ ಕರ್ನಾಟಕದ ಜನರಿಗೆ ಅನುಕೂಲವಾಗುತ್ತದೆ. ಅಲ್ಲಿಯೇ ಸರ್ಕಾರಿ ಜಮೀನು ಲಭ್ಯವಿದ್ದರೂ ರಿಯಲ್ ಎಸ್ಟೇಟ್ ಲಾಭಕ್ಕಾಗಿ ಯೋಜನೆಯನ್ನು ಕನಕಪುರ ಭಾಗದತ್ತ ಕೊಂಡೊಯ್ಯುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು. ರಾಜ್ಯದಲ್ಲಿ ಜಲಾಶಯಗಳು ಬತ್ತಿ ಹೋಗಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದರೂ ಮುಖ್ಯಮಂತ್ರಿ ಹಾಗೂ ಸಚಿವರು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಮಂತ್ರಿಮಂಡಲ ವಿಸ್ತರಣೆಯ ವಿಚಾರವಾಗಿ ದೆಹಲಿಗೆ ಓಡಾಡುತ್ತಿದ್ದಾರೆ ಎಂದು ಟೀಕಿಸಿದರು.

# ಟೌನ್‌ಶಿಪ್ ವಿರುದ್ಧ ಸಿಡಿದ ಬಿಜೆಪಿ..!: ಪ್ರತಿಭಟನೆ

ಬೆಂಗಳೂರು: ರಾಜ್ಯ ಸರ್ಕಾರ ರೈತರ ಹಿತಾಸಕ್ತಿಯನ್ನು ನಿರ್ಲಕ್ಷಿಸಿ ಅಧಿಕಾರದ ದುರುಪಯೋಗ ಮಾಡುತ್ತಿದೆ ಎಂದು ಆರೋಪಿಸಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ರೈತರ ಫಲವತ್ತಾದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ನಿರ್ಧಾರವನ್ನು ತಕ್ಷಣ ಹಿಂಪಡೆಯುವಂತೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಭೀಕರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದರೂ ಜನರ ಸಂಕಷ್ಟಗಳಿಗೆ ಸ್ಪಂದಿಸುವ ಬದಲು ಸರ್ಕಾರ ಅಧಿಕಾರದ ಮದದಲ್ಲಿ ತೊಡಗಿದೆ ಎಂದು ಟೀಕಿಸಿದರು.

ಬಿಡದಿ ಭಾಗದಲ್ಲಿ ರೈತರ ಫಲವತ್ತಾದ ಜಮೀನನ್ನು ಸ್ವಾಧೀನಪಡಿಸಿಕೊಂಡು



ಟೌನ್‌ಶಿಪ್ ನಿರ್ಮಿಸಲು ಸರ್ಕಾರ ಮುಂದಾಗಿರುವುದನ್ನು ತೀವ್ರವಾಗಿ ವಿರೋಧಿಸಿದ ಯಡಿಯೂರಪ್ಪ, ಸರ್ಕಾರಿ ಜಮೀನುಗಳು ಲಭ್ಯವಿದ್ದರೂ ರೈತರ ಭೂಮಿಯನ್ನೇ ಗುರಿಯಾಗಿ ಸಿರುವುದು ರಿಯಲ್ ಎಸ್ಟೇಟ್ ಹಿತಾಸಕ್ತಿ ಹಾಗೂ ರಾಜಕೀಯ ಉದ್ದೇಶಗಳಿಗಾಗಿ ಎಂದು ಆರೋಪಿಸಿದರು. ಈ ಯೋಜನೆಯನ್ನು ಕೂಡಲೇ ಕೈಬಿಡಬೇಕು ಎಂದು ಆಗ್ರಹಿಸಿದರು.

ಎರಡನೇ ವಿಮಾನ ನಿಲ್ದಾಣದ ಸ್ಥಳ ಆಯ್ಕೆ ವಿಚಾರದಲ್ಲೂ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ರಾಜ್ಯದ ಪೂರ್ವ ಭಾಗದಲ್ಲಿ ವಿಮಾನ ನಿಲ್ದಾಣ ನಿರ್ಮಿಸಿದರೆ ಮಧ್ಯ ಹಾಗೂ ಉತ್ತರ ಕರ್ನಾಟಕದ ಜನರಿಗೆ ಅನುಕೂಲವಾಗುತ್ತದೆ. ಅಲ್ಲಿಯೇ ಸರ್ಕಾರಿ ಜಮೀನು ಲಭ್ಯವಿದ್ದರೂ ರಿಯಲ್ ಎಸ್ಟೇಟ್ ಲಾಭಕ್ಕಾಗಿ ಯೋಜನೆಯನ್ನು ಕನಕಪುರ ಭಾಗದತ್ತ ಕೊಂಡೊಯ್ಯುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಜಲಾಶಯಗಳು ಬತ್ತಿ ಹೋಗಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದರೂ ಮುಖ್ಯಮಂತ್ರಿ ಹಾಗೂ ಸಚಿವರು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಮಂತ್ರಿಮಂಡಲ ವಿಸ್ತರಣೆಯ ವಿಚಾರವಾಗಿ ದೆಹಲಿಗೆ ಓಡಾಡುತ್ತಿದ್ದಾರೆ ಎಂದು ಟೀಕಿಸಿದರು.

ಪ್ರತಿಭಟನೆ ನಡೆಸಿದ ರೈತರು ಹಾಗೂ ಮಹಿಳೆಯರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ಮುಂದಿನ 24 ಗಂಟೆಗಳೊಳಗೆ ಹಿಂಪಡೆಯಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಭಾರತೀಯ ಜನತಾ ಪಕ್ಷ ಹಾಗೂ ಜನತಾ ದಳ (ಜಾತ್ಯತೀತ) ಒಟ್ಟಾಗಿ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ನಡೆಸಲಿದ್ದು, ಈ ಪ್ರತಿಭಟನೆ ಬೆಂಗಳೂರಿಗೆ ಮಾತ್ರ ಸೀಮಿತವಾಗದೆ ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದು ಎಂದು ಯಡಿಯೂರಪ್ಪ ತಿಳಿಸಿದರು.

ಕೇಂದ್ರದ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಆಡಳಿತವನ್ನು ಶ್ಲಾಘಿಸಿದ ಅವರು, ರಾಜ್ಯ ಸರ್ಕಾರ ಜನರ ಹಿತಾಸಕ್ತಿಯನ್ನು ಮರೆತು ಆಡಳಿತ ನಡೆಸುತ್ತಿದೆ ಎಂದು ಆರೋಪಿಸಿ, ಸರ್ಕಾರಕ್ಕೆ ಸಾರ್ವಜನಿಕರು ತಕ್ಕ ಉತ್ತರ ನೀಡಲಿದ್ದಾರೆ ಎಂದು ಹೇಳಿದರು.

## ಸಂಪುಟ ವಿಸ್ತರಣೆ ಪಟ್ಟಿ ಒಪ್ಪದ ಹೈಕಮಾಂಡ್

ನವದೆಹಲಿ: ರಾಜ್ಯ ಸಚಿವ ಸಂಪುಟ ವಿಸ್ತರಣೆ ಸಂಬಂಧ ಕಾಂಗ್ರೆಸ್ ಹೈಕಮಾಂಡ್ ರಾಜ್ಯ ನಾಯಕರಿಗೆ ಅಸಮಾಧಾನ ವ್ಯಕ್ತಪಡಿಸಿದ್ದು, ಅವರು ಸಲ್ಲಿಸಿದ್ದ ಶಾಸಕರ ಪಟ್ಟಿಗೆ ಸದ್ಯ ಅನುಮತಿ ನೀಡಿಲ್ಲ ಎಂದು ತಿಳಿದುಬಂದಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉಳಿದಿರುವ ಸಚಿವ ಸ್ಥಾನಗಳಿಗೆ ಒಟ್ಟು 43 ಶಾಸಕರ ಹೆಸರುಗಳ ಪಟ್ಟಿಯನ್ನು ಹೈಕಮಾಂಡ್ ಮುಂದೆ ಇಟ್ಟಿದ್ದರು ಎನ್ನಲಾಗಿದೆ. ಆದರೆ ಈ ಪಟ್ಟಿಯಲ್ಲಿ ಈಗಾಗಲೇ ಸಿದ್ದರಾಮಯ್ಯ ಅವರ ಹಿಂದಿನ ಸರ್ಕಾರದ ಅವಧಿಯಲ್ಲಿ ಸಚಿವರಾಗಿದ್ದ 11 ಮಂದಿಯ ಹೆಸರುಗಳು ಸೇರಿದ್ದರಿಂದ ಹೈಕಮಾಂಡ್ ಅಸಮಾಧಾನಗೊಂಡಿದೆ ಎಂದು ಮೂಲಗಳು ತಿಳಿಸಿವೆ. ಸಂಪುಟದಲ್ಲಿ ಖಾಲಿ ಇರುವ ಸುಮಾರು 20 ಸ್ಥಾನಗಳಿಗೆ 43 ಶಾಸಕರ ಹೆಸರುಗಳನ್ನು ಶಿಫಾರಸು ಮಾಡಲಾಗಿತ್ತು.

ಆದರೆ ಹೊಸ ಮುಖಗಳಿಗೆ ಹಾಗೂ ಪಕ್ಷದ ಸಂಘಟನೆಗೆ ಕೊಡುಗೆ ನೀಡಿರುವ ಶಾಸಕರಿಗೆ ಆದ್ಯತೆ ನೀಡುವ ಅಗತ್ಯವಿದೆ ಎಂಬ ಅಭಿಪ್ರಾಯವನ್ನು ಹೈಕಮಾಂಡ್ ವ್ಯಕ್ತಪಡಿಸಿದೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ನಾಯಕರು ಹೊಸ ಪಟ್ಟಿಯನ್ನು ಸಿದ್ಧಪಡಿಸಿ ಮತ್ತೊಮ್ಮೆ ಹೈಕಮಾಂಡ್ ಮುಂದೆ ಮಂಡಿಸುವ ಅನಿವಾರ್ಯತೆ ಎದುರಾಗಿದೆ.

ರಾಜ್ಯ ನಾಯಕರು ಸಲ್ಲಿಸಿದ್ದ ಪಟ್ಟಿಯಲ್ಲಿ ಮಾಜಿ ಸಚಿವರಾದ ಹೆಚ್.ಕೆ. ಪಾಟೀಲ್, ಜಮೀರ್ ಅಹಮದ್ ಖಾನ್, ಚಲುವರಾಯಸ್ವಾಮಿ, ಎಸ್.ಎಸ್. ಮಲ್ಲಿಕಾರ್ಜುನ, ಸಂತೋಷ್ ಲಾಡ್, ಶಿವರಾಜ್ ತಂಗಡಗಿ, ಲಕ್ಷ್ಮೀ ಹೆಬ್ಬಾಳ್ಕರ್, ಮಂಕಾಳು ವೈದ್ಯ, ಮಧು ಬಂಗಾರಪ್ಪ, ನಾಗೇಂದ್ರ ಹಾಗೂ ಶಿವಾನಂದ ಪಾಟೀಲ್ ಅವರ ಹೆಸರುಗಳು ಇದ್ದವು ಎಂದು ತಿಳಿದುಬಂದಿದೆ.

ಸಂಪುಟ ವಿಸ್ತರಣೆ ವಿಚಾರ ಇದೀಗ ಕಾಂಗ್ರೆಸ್‌ನಲ್ಲಿ ಮತ್ತೊಂದು ಸುತ್ತಿನ ಚರ್ಚೆಗೆ ಕಾರಣವಾಗಿದ್ದು, ಹೈಕಮಾಂಡ್ ಸೂಚನೆಯಂತೆ ಅಂತಿಮ ಪಟ್ಟಿಯಲ್ಲಿ ಯಾವ ಶಾಸಕರಿಗೆ ಅವಕಾಶ ಸಿಗಲಿದೆ ಎಂಬುದು ಕುತೂಹಲ ಮೂಡಿಸಿದೆ.

## ಬೆಂಗಳೂರು ಉತ್ತರ ನಗರ ಪಾಲಿಕೆ ಫೋನ್–ಇನ್‌ಗೆ 62 ಅಹವಾಲುಗಳು; ತ್ವರಿತ ಪರಿಹಾರಕ್ಕೆ ಆಯುಕ್ತರ ಸೂಚನೆ

ಬೆಂಗಳೂರು: ಬೆಂಗಳೂರು ಉತ್ತರ ನಗರ ಪಾಲಿಕೆ (ಬಿಎನ್‌ಸಿಸಿ) ವ್ಯಾಪ್ತಿಯ ನಾಗರಿಕರ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಶೀಘ್ರ ಪರಿಹಾರ ಕಲ್ಪಿಸುವ ಉದ್ದೇಶದಿಂದ ಶುಕ್ರವಾರ ಆಯೋಜಿಸಲಾದ ಫೋನ್–ಇನ್ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಒಟ್ಟು 62 ಅಹವಾಲುಗಳು ದಾಖಲಾಗಿವೆ.

ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ 49 ಕರೆಗಳನ್ನು ಸ್ವೀಕರಿಸಲಾಗಿದ್ದು, ಅವುಗಳ ಮೂಲಕ ಒಟ್ಟು 62 ಅಹವಾಲುಗಳು ದಾಖಲಾದವು. ದಾಖಲಾದ ಪ್ರತಿಯೊಂದು ಅಹವಾಲನ್ನೂ ಆದ್ಯತೆಯ ಮೇರೆಗೆ ಪರಿಶೀಲಿಸಿ ತ್ವರಿತವಾಗಿ ಇತ್ಯರ್ಥಪಡಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಆಯುಕ್ತರು ಸೂಚನೆ ನೀಡಿದರು.

ಇಂದಿನ ಕಾರ್ಯಕ್ರಮದಲ್ಲಿ ರಸ್ತೆ ನಿರ್ವಹಣೆಗೆ ಸಂಬಂಧಿಸಿದ ಅತಿ ಹೆಚ್ಚು 32 ಅಹವಾಲುಗಳು ದಾಖಲಾಗಿವೆ. ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ 8, ಇ–ಖಾತಾ ಹಾಗೂ ಖಾತಾ ಸೇವೆಗಳ ಕುರಿತು 5, ಅರಣ್ಯ ಇಲಾಖೆಗೆ ಸಂಬಂಧಿಸಿದ 4, ಆರೋಗ್ಯ ಇಲಾಖೆಗೆ 3, ವಿದ್ಯುತ್, ಉದ್ಯಾನವನ ಮತ್ತು ಆಟದ ಮೈದಾನಗಳು, ಟ್ರಾಫಿಕ್ ಎಂಜಿನಿಯರ್ ಸೆಲ್ ಹಾಗೂ ಪಶುವೈದ್ಯಕೀಯ ಇಲಾಖೆಗೆ ತಲಾ 2 ಹಾಗೂ ಜಾಹೀರಾತು ಮತ್ತು ಚುನಾವಣಾ ಶಾಖೆಗೆ ತಲಾ 1 ಅಹವಾಲು ದಾಖಲಾಗಿದೆ.

2025ರ ಸೆಪ್ಟೆಂಬರ್ 26ರಿಂದ ಆರಂಭಗೊಂಡಿರುವ ಈ ಫೋನ್–ಇನ್ ಕಾರ್ಯಕ್ರಮದ ಮೂಲಕ ಜುಲೈ 17, 2026ರವರೆಗೆ ಒಟ್ಟು 1,999 ಕರೆಗಳನ್ನು ಸ್ವೀಕರಿಸಲಾಗಿದ್ದು, 2,578 ಅಹವಾಲುಗಳು ದಾಖಲಾಗಿವೆ. ಇದರಲ್ಲಿ 2,204 ಅಹವಾಲುಗಳನ್ನು ಈಗಾಗಲೇ ಇತ್ಯರ್ಥಪಡಿಸಲಾಗಿದೆ. ದೀರ್ಘಾವಧಿ ಪರಿಹಾರಕ್ಕೆ ಸಂಬಂಧಿಸಿದ 8 ಅಹವಾಲುಗಳು, ಪ್ರಗತಿಯಲ್ಲಿರುವ 3, ಪಾಲಿಕೆಯ ವ್ಯಾಪ್ತಿಗೆ ಸಂಬಂಧಿಸದ 161, ಮರುತೆರೆಯಲಾದ 9 ಹಾಗೂ 193 ಅಹವಾಲುಗಳು ಇನ್ನೂ ಬಾಕಿ ಉಳಿದಿವೆ.

## 'ಅಗ್ನಿ ಸುರಕ್ಷತೆ ಇಲ್ಲದ ಕಟ್ಟಡಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ'

ಹೊಸದಾಗಿ ನಿರ್ಮಿಸಲಾಗುತ್ತಿರುವ ವೈಟ್ ಟಾಪಿಂಗ್ ರಸ್ತೆಗಳಲ್ಲಿ ಅಗ್ನಿ ಅವಘಡದ ಸಂದರ್ಭದಲ್ಲಿ ನೀರಿನ ಲಭ್ಯತೆ ಖಚಿತಪಡಿಸಲು ಅಗ್ನಿಶಾಮಕ ಹೈಡ್ರೆಂಟ್‌ಗಳನ್ನು ಅಳವಡಿಸಬೇಕು. ಅಳವಡಿಸಲಾದ ಹೈಡ್ರೆಂಟ್‌ಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಡೆಸಿ, ಪ್ರತಿ ತಿಂಗಳು ಪರಿಶೀಲನೆ ನಡೆಸಬೇಕು. ಯಾವುದೇ ದೋಷ ಕಂಡುಬಂದಲ್ಲಿ ಕೂಡಲೇ ದುರಸ್ತಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಪೇಟೆ ಪ್ರದೇಶ ಸೇರಿದಂತೆ ಸೂಕ್ಷ್ಮ ಪ್ರದೇಶಗಳಲ್ಲಿ ಅಗ್ನಿ ಸುರಕ್ಷತಾ ವ್ಯವಸ್ಥೆ ಇಲ್ಲದ ಕಟ್ಟಡಗಳ ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಜಿಬಿಎ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಸಮನ್ವಯ ಸಭೆಯಲ್ಲಿ ಮಾತನಾಡಿದ ಅವರು, ನಗರದಲ್ಲಿನ ಪೇಟೆ ಪ್ರದೇಶ ಹಾಗೂ ಅಗ್ನಿ ಅವಘಡದ ಅಪಾಯ ಹೆಚ್ಚಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಕಡ್ಡಾಯವಾಗಿ ಅಗ್ನಿ ಸುರಕ್ಷತಾ ತಪಾಸಣೆ ನಡೆಸಬೇಕು. ಸುರಕ್ಷತಾ ನಿಯಮಗಳನ್ನು ಪಾಲಿಸದ ಕಟ್ಟಡಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ನಿರ್ದೇಶನ ನೀಡಿದರು.

ಹೊಸದಾಗಿ ನಿರ್ಮಿಸಲಾಗುತ್ತಿರುವ ವೈಟ್ ಟಾಪಿಂಗ್ ರಸ್ತೆಗಳಲ್ಲಿ ಅಗ್ನಿ ಅವಘಡದ ಸಂದರ್ಭದಲ್ಲಿ ನೀರಿನ ಲಭ್ಯತೆ ಖಚಿತಪಡಿಸಲು ಅಗ್ನಿಶಾಮಕ ಹೈಡ್ರೆಂಟ್‌ಗಳನ್ನು ಅಳವಡಿಸಬೇಕು. ಅಳವಡಿಸಲಾದ ಹೈಡ್ರೆಂಟ್‌ಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಡೆಸಿ, ಪ್ರತಿ ತಿಂಗಳು ಪರಿಶೀಲನೆ ನಡೆಸಬೇಕು. ಯಾವುದೇ ದೋಷ ಕಂಡುಬಂದಲ್ಲಿ ಕೂಡಲೇ ದುರಸ್ತಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಜಲಮಂಡಳಿ ಕೈಗೆತ್ತಿಕೊಳ್ಳುವ ಪ್ರತಿಯೊಂದು ಕಾಮಗಾರಿ ನಡೆಯುವ ಸ್ಥಳದಲ್ಲಿ ಕಡ್ಡಾಯವಾಗಿ ಮಾಹಿತಿ ಒಳಗೊಂಡ ನಾಮಫಲಕ ಅಳವಡಿಸಬೇಕು ಎಂದು ಮಹೇಶ್ವರ್ ರಾವ್ ಸೂಚಿಸಿದರು. ರಸ್ತೆ ಕತ್ತರಿಸಲು ಅನುಮತಿ ಪಡೆದ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ, ಗುಣಮಟ್ಟ ಕಾಪಾಡಿಕೊಂಡು ರಸ್ತೆ ಪುನಶ್ಚೇತನ ಕಾರ್ಯವನ್ನು ಸಮರ್ಪಕವಾಗಿ ನಡೆಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಜುಲೈ 10ರಿಂದ ಬೀದಿಗಳಲ್ಲಿ ನಿಲ್ಲಿಸಿರುವ ಬಿಡಾಡಿ ವಾಹನಗಳಿಗೆ ಸ್ಟಿಕ್ಕರ್ ಮಾದರಿಯ ನೋಟಿಸ್ ಅಂಟಿಸಲಾಗುತ್ತಿದೆ. ಏಳು ದಿನಗಳ ನೋಟಿಸ್ ಅವಧಿ ಮುಗಿದ ಬಳಿಕವೂ ವಾಹನಗಳನ್ನು ತೆರವುಗೊಳಿಸದಿದ್ದರೆ ಅಂತಹ ವಾಹನಗಳನ್ನು ತಕ್ಷಣ ಟೋಯಿಂಗ್ ಮಾಡುವಂತೆ ಸಂಚಾರಿ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಪ್ರಮುಖ ಆರ್ಟೀರಿಯಲ್ ಹಾಗೂ ಸಬ್–ಆರ್ಟೀರಿಯಲ್ ರಸ್ತೆಗಳಲ್ಲಿ ಎಸ್.ಐ.ಪಿ.



ಅನುದಾನದಡಿ ನಡೆಯುತ್ತಿರುವ ಸಿವಿಲ್ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ ಡಾಂಬರೀಕರಣ ಕೈಗೊಳ್ಳಬೇಕು. ಕಾಮಗಾರಿ ವೇಳೆ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಸಂಚಾರಿ ಪೊಲೀಸರೊಂದಿಗೆ ಸಮನ್ವಯ ಸಾಧಿಸಿ ಗುಣಮಟ್ಟದ ಕಾಮಗಾರಿ ನಡೆಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಆಗಸ್ಟ್ ತಿಂಗಳ ಪೂರ್ತಿ ನಡೆಯಲಿರುವ "ತ್ಯಾಜ್ಯದಿಂದ ಸ್ವಾತಂತ್ರ್ಯ" ಅಭಿಯಾನವನ್ನು ಯಶಸ್ವಿಗೊಳಿಸಲು ನಗರ ಪಾಲಿಕೆಗಳು, ಕೆ–ರೈಡ್, ರೈಲ್ವೆ ಹಾಗೂ ಮೆಟ್ರೋ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕಟ್ಟಡ ತ್ಯಾಜ್ಯ, ಮಣ್ಣಿನ ರಾಶಿ, ಗಿಡಗಂಟಿಗಳು ಸೇರಿದಂತೆ ವಿವಿಧ ತ್ಯಾಜ್ಯ ಸಂಗ್ರಹವಾಗಿರುವ ಸ್ಥಳಗಳನ್ನು ಗುರುತಿಸುವಂತೆ ಸೂಚಿಸಿದರು.

ಜೊತೆಗೆ ಬಳಕೆಯಲ್ಲಿಲ್ಲದ ಕ್ವಾರಿಗಳ ಮಾಹಿತಿ, ನೋಂದಾಯಿತ ವಾಹನಗಳ ವಿವರ, ಅಗತ್ಯ ಸಿಬ್ಬಂದಿ ಸೇರಿದಂತೆ ಎಲ್ಲಾ ರೀತಿಯ ಪೂರ್ವಸಿದ್ಧತೆಗಳನ್ನು ಪೂರ್ಣಗೊಳಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ಕೊರೋನಾ ಆತಂಕ: ರಾಜ್ಯದಲ್ಲಿ ಕಟ್ಟೆಚ್ಚರ

ತುಮಕೂರು: ಪಕ್ಕದ ರಾಜ್ಯ ಆಂಧ್ರ ಪ್ರದೇಶದಲ್ಲಿ ಕೊರೋನಾ ಸೋಂಕು ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕದ ಗಡಿ ಭಾಗಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ. ಆಂಧ್ರ ಪ್ರದೇಶದಲ್ಲಿ ಸೋಂಕಿನಿಂದ ಸಾವಿನ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ತುಮಕೂರು ಜಿಲ್ಲೆಯ ಪಾವಗಡ ತಾಲೂಕಿನಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು ಎಚ್ಚೆತ್ತುಕೊಂಡಿದ್ದಾರೆ.

ಆಂಧ್ರ ಪ್ರದೇಶದ ಗಡಿ ಹೊಂದಿರುವ ಪಾವಗಡ ಭಾಗದಲ್ಲಿ ಸೋಂಕು ಹರಡುವುದನ್ನು ತಡೆಯುವ ಉದ್ದೇಶದಿಂದ ಗಡಿ ಮಾರ್ಗಗಳಲ್ಲಿ ಕಟ್ಟುನಿಟ್ಟಿನ ನಿಗಾ ವಹಿಸಲಾಗುತ್ತಿದೆ. ಪಾವಗಡ ಮತ್ತು ಆಂಧ್ರ ಪ್ರದೇಶ ಸಂಪರ್ಕಿಸುವ ಎಂಟು ಪ್ರಮುಖ ಮಾರ್ಗಗಳಲ್ಲಿ ಆರೋಗ್ಯ ಸಿಬ್ಬಂದಿಯನ್ನು ನಿಯೋಜಿಸಿ ಪ್ರಯಾಣಿಕರ ತಪಾಸಣೆ ನಡೆಸಲಾಗುತ್ತಿದೆ. ಆಂಧ್ರ ಪ್ರದೇಶದ ಆರೋಗ್ಯ ಇಲಾಖೆ ಮಾಹಿತಿ ಪ್ರಕಾರ, ಕೋವಿಡ್ ಸೋಂಕಿನಿಂದ ನಾಲ್ವರು ಮೃತಪಟ್ಟಿರುವ ವರದಿಯಾಗಿದೆ. ಕಡಬ ಪ್ರದೇಶದಲ್ಲೇ ಮೂವರು ಸಾವನ್ನಪ್ಪಿರುವುದು ಗಡಿ ಭಾಗದ ಜನರಲ್ಲಿ ಆತಂಕ ಹೆಚ್ಚಿಸಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದೆ.

ಪಾವಗಡ–ಆಂಧ್ರ ಗಡಿ ಭಾಗದ ನಾಗಲಮಡಿಕೆ, ಕೊಡಮಡುಗು, ವಳ್ಳೂರು ಸೇರಿದಂತೆ ಎಂಟು ಕಡೆಗಳಲ್ಲಿ ತಪಾಸಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

## 'ಸಚಿವ ಸಂಪುಟ ವಿಸ್ತರಣೆಗೆ ವರಿಷ್ಠರ ಮಾರ್ಗದರ್ಶನ'

ನವದೆಹಲಿ: ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷದ ವರಿಷ್ಠರೊಂದಿಗೆ ಚರ್ಚೆ ನಡೆಸಿದ್ದು, ಅವರ ಮಾರ್ಗದರ್ಶನದಂತೆ ಮುಂದಿನ ಸಿದ್ಧತೆಗಳನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.



ನವದೆಹಲಿಯಲ್ಲಿ ಕಾಂಗ್ರೆಸ್ ಪಕ್ಷದ ಹಳೆಯ ಕೇಂದ್ರ ಕಚೇರಿ ಬಳಿ ಶುಕ್ರವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಶುಕ್ರವಾರ ಭೇಟಿ ಮಾಡಲು ಸಾಧ್ಯವಾಗಿಲ್ಲ. ಶನಿವಾರ ಅವರನ್ನು ಭೇಟಿ ಮಾಡಿ ಸಚಿವ ಸಂಪುಟ ವಿಸ್ತರಣೆ ಕುರಿತು ಅಂತಿಮ ಮಾರ್ಗದರ್ಶನ ಪಡೆಯಲಾಗುವುದು ಎಂದು ಹೇಳಿದರು. ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ಮಹಾನಗರ ಪಾಲಿಕೆಗಳ ಚುನಾವಣೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಡಿಸೆಂಬರ್ 31ರವರೆಗೆ ಕಾಲಾವಕಾಶ ನೀಡಿರುವುದಾಗಿ ತಿಳಿಸಿದ ಅವರು, ಜಿಬಿಎ ಚುನಾವಣೆಗಳನ್ನು ಡಿಸೆಂಬರ್ ಅಂತ್ಯದೊಳಗೆ ನಡೆಸಲಾಗುವುದು ಎಂದು ಹೇಳಿದರು.

ಇದರ ಜೊತೆಗೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ನಗರಸಭೆ ಹಾಗೂ ಪುರಸಭೆ ಸೇರಿದಂತೆ ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು 2027ರ ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಈ ಬಾರಿಯ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಯುವಕರು ಮತ್ತು ಹೊಸ ಮುಖಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದ ಸಿಎಂ, ಗ್ರಾಮ ಪಂಚಾಯಿತಿಯಿಂದ ನಗರ ಪಾಲಿಕೆಗಳವರೆಗೆ ಹೊಸ ನಾಯಕತ್ವವನ್ನು ಬೆಳೆಸುವ ಉದ್ದೇಶ ಸರ್ಕಾರಕ್ಕಿದೆ ಎಂದರು.

ಸಚಿವ ಸಂಪುಟ ವಿಸ್ತರಣೆ, ಸ್ಥಳೀಯ ಸಂಸ್ಥೆಗಳ ಚುನಾವಣೆ ಹಾಗೂ ಪಕ್ಷದ ಸಂಘಟನೆಗೆ ಸಂಬಂಧಿಸಿದಂತೆ ಮುಂದಿನ ದಿನಗಳಲ್ಲಿ ವರಿಷ್ಠರ ನಿರ್ದೇಶನದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

## 'ರಾಜ್ಯದಲ್ಲಿ ಸರಕು ರಫ್ತು ಹೆಚ್ಚಳಕ್ಕೆ ಸರ್ಕಾರದ ದೃಢ ಸಂಕಲ್ಪ'

ಬೆಂಗಳೂರು: ರಾಜ್ಯದ ಸರಕು ರಫ್ತನ್ನು ಮತ್ತಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರ ಹಲವು ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ. ರಾಜ್ಯದ ರಫ್ತು ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳುವ ಉದ್ದೇಶದಿಂದ ರಾಜ್ಯ ಮಟ್ಟದ ರಫ್ತು ಉತ್ತೇಜನಾ ಸಮಿತಿ ಸಭೆ ವಿಧಾನಸೌಧದಲ್ಲಿ ನಡೆಯಿತು.


ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ರಾಜ್ಯದ ರಫ್ತು ವಲಯದ ಬೆಳವಣಿಗೆ, ಹೊಸ ಅವಕಾಶಗಳು ಹಾಗೂ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಕುರಿತು ಚರ್ಚಿಸಲಾಯಿತು.

ದೇಶದ ಒಟ್ಟು ತಂತ್ರಾಂಶ ರಫ್ತಿನಲ್ಲಿ ಕರ್ನಾಟಕವು ಶೇ.41ರಷ್ಟು ಪಾಲು ಹೊಂದುವ ಮೂಲಕ ಮೊದಲ ಸ್ಥಾನದಲ್ಲಿದೆ. ಅಲ್ಲದೆ, ದೇಶದ ಒಟ್ಟಾರೆ ರಫ್ತು ವಲಯದಲ್ಲಿ ಶೇ.24ರಷ್ಟು ಪಾಲು ಹೊಂದಿ ಮುಂಚೂಣಿಯಲ್ಲಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಲಾಯಿತು.

ಸರಕು ರಫ್ತಿನ ಕ್ಷೇತ್ರದಲ್ಲಿ ಕರ್ನಾಟಕವು ಶೇ.7.78ರಷ್ಟು ಪಾಲು ಹೊಂದಿದ್ದು, ಗುಜರಾತ್, ಮಹಾರಾಷ್ಟ್ರ ಮತ್ತು ತಮಿಳುನಾಡಿನ ನಂತರ ನಾಲ್ಕನೇ ಸ್ಥಾನದಲ್ಲಿದೆ. ಈ ಕ್ಷೇತ್ರದಲ್ಲಿ ಇನ್ನಷ್ಟು ಪ್ರಗತಿ ಸಾಧಿಸಲು ಸರ್ಕಾರ ವಿಶೇಷ ಯೋಜನೆಗಳನ್ನು ರೂಪಿಸುತ್ತಿದೆ.

ಸಭೆಯಲ್ಲಿ ಭಾಗವಹಿಸಿದ್ದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ದರ್ಪಣ್ ಜೈನ್ ಅವರು, ರಫ್ತು ಉತ್ತೇಜನಾ ಮಿಷನ್ ಮೂಲಕ ಕೇಂದ್ರ ಸರ್ಕಾರವು ರಾಜ್ಯಗಳಿಗೆ ನೀಡುತ್ತಿರುವ ನೆರವು ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ದೇಶದ 120 ಆದ್ಯತೆಯ ಜಿಲ್ಲೆಗಳನ್ನು ಒಳಗೊಂಡಿರುವ 'ಜಿಲ್ಲೆಯನ್ನು ರಫ್ತು ಕೇಂದ್ರವಾಗಿ ಅಭಿವೃದ್ಧಿಪಡಿಸುವ' ಯೋಜನೆಯಡಿ ಕರ್ನಾಟಕದ ಬೆಂಗಳೂರು ನಗರ, ಬೆಳಗಾವಿ, ಹಾಸನ, ಕೋಲಾರ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳನ್ನು ಮೊದಲ ಹಂತದಲ್ಲಿ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು. ಬೆಂಗಳೂರು ಹೊರತುಪಡಿಸಿ ರಾಜ್ಯದ ಇತರ ಜಿಲ್ಲೆಗಳಲ್ಲಿ ಜವಳಿ, ಉಡುಪು, ರೇಷ್ಮೆ, ಚರ್ಮದ ಉತ್ಪನ್ನಗಳು, ಕೃಷಿ ಮತ್ತು ಸಂಸ್ಕರಿತ ಆಹಾರ



ಉತ್ಪನ್ನಗಳ ರಫ್ತಿಗೆ ಹೆಚ್ಚಿನ ಅವಕಾಶಗಳಿವೆ ಎಂದು ದರ್ಪಣ್ ಜೈನ್ ಹೇಳಿದರು.

ಜಾಗತಿಕ ಮಟ್ಟದಲ್ಲಿ ಯಶಸ್ವಿಯಾಗಿರುವ ಮಾದರಿಗಳನ್ನು ಉಲ್ಲೇಖಿಸಿದ ಅವರು, ಪ್ರಮುಖ ಕಂಪನಿಗಳು ಹಾಗೂ ಬಹುರಾಷ್ಟ್ರೀಯ ಸಂಸ್ಥೆಗಳು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹೂಡಿಕೆ ಮತ್ತು ರಫ್ತು ಸಹಭಾಗಿತ್ವ ವಿಸ್ತರಿಸಲು ಆಸಕ್ತಿ ಹೊಂದಿವೆ ಎಂದು ತಿಳಿಸಿದರು.

ರಫ್ತು ಉತ್ತೇಜನಾ ಮಿಷನ್ ಅಡಿಯಲ್ಲಿ ಬ್ಯಾಂಕ್‌ಗಳಿಗೆ ಭದ್ರತಾ ನೆರವು, ಇ–ವಾಣಿಜ್ಯ ವೇದಿಕೆಗಳಿಗೆ ಆವರ್ತಕ ನಿಧಿ, ವಿಮಾನ ನಿಲ್ದಾಣಗಳಲ್ಲಿನ ಗೋದಾಮು ಸೌಲಭ್ಯ ಬಳಕೆಗೆ ಆರ್ಥಿಕ ನೆರವು ಹಾಗೂ ಬೆಂಗಳೂರಿನ ಹೊರಗಿನ ಜಿಲ್ಲೆಗಳ ರಫ್ತುದಾರರಿಗೆ ಸರಕು ಸಾಗಣೆ ವೆಚ್ಚದಲ್ಲಿ ಸಹಾಯಧನ ನೀಡುವ ಅವಕಾಶಗಳಿವೆ ಎಂದು ಮಾಹಿತಿ ನೀಡಲಾಯಿತು.

ರಾಜ್ಯದ ರಫ್ತು ಸಾಮರ್ಥ್ಯವನ್ನು ಹೆಚ್ಚಿಸಲು ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರವು ಹೆಚ್ಚಿನ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮಗಳು ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೂಚಿಸಿದರು.

ಉದಯೋನ್ಮುಖ ರಫ್ತುದಾರರು, ಕೈಗಾರಿಕೆಗಳು ಮತ್ತು ವ್ಯಾಪಾರಿಗಳಿಗೆ ಪ್ರಾಯೋಗಿಕ ತರಬೇತಿ ನೀಡುವ ಮೂಲಕ ರಫ್ತು ಚಟುವಟಿಕೆಗಳನ್ನು ಮತ್ತಷ್ಟು ವೇಗಗೊಳಿಸುವಂತೆ ಅವರು ನಿರ್ದೇಶನ ನೀಡಿದರು.

ಇತ್ತೀಚೆಗೆ ಭಾರತ ಮತ್ತು ಬ್ರಿಟನ್ ನಡುವೆ ನಡೆದ ಮುಕ್ತ ವ್ಯಾಪಾರ ಒಪ್ಪಂದ ಸೇರಿದಂತೆ ವಿವಿಧ ಅಂತಾರಾಷ್ಟ್ರೀಯ ವ್ಯಾಪಾರ ಒಪ್ಪಂದಗಳ ಅವಕಾಶಗಳನ್ನು ಬಳಸಿಕೊಂಡು ಎಲೆಕ್ಟ್ರಾನಿಕ್ಸ್, ಕೃಷಿ ಉತ್ಪನ್ನಗಳು, ಆಹಾರ ಸಂಸ್ಕರಣೆ, ಎಂಜಿನಿಯರಿಂಗ್, ಜವಳಿ, ಔಷಧ ಮತ್ತು ರೇಷ್ಮೆ ಉತ್ಪನ್ನಗಳ ರಫ್ತನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಸರ್ಕಾರದ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರದ ಪ್ರತಿನಿಧಿಗಳು, ಕೇಂದ್ರ ಸರ್ಕಾರದ ವಿದೇಶಿ ವ್ಯಾಪಾರ ಮಹಾನಿರ್ದೇಶನಾಲಯದ ಅಧಿಕಾರಿಗಳು, ಕೈಗಾರಿಕಾ ಸಂಸ್ಥೆಗಳು, ವಾಣಿಜ್ಯ ಮಂಡಳಿಗಳು ಹಾಗೂ ರಫ್ತು ಉತ್ತೇಜನಾ ಮಂಡಳಿಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

ಭಾರತ ಸಾರಥಿ
18/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 'ಸಮಯೋಚಿತ ತುರ್ತು ಚಿಕಿತ್ಸೆ ಜೀವ ಉಳಿಸುವಲ್ಲಿ ಮಹತ್ವದ್ದು'

ಮೈಸೂರು

ತುರ್ತು ಆರೋಗ್ಯ ಪರಿಸ್ಥಿತಿಗಳಲ್ಲಿ ಸಮಯಕ್ಕೆ ಸರಿಯಾದ ಚಿಕಿತ್ಸೆ ಪಡೆಯುವ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಮಣಿಪಾಲ್ ಆಸ್ಪತ್ರೆ ಮೈಸೂರು ವತಿಯಿಂದ ಮಾಧ್ಯಮ ಸಂವಾದ ಕಾರ್ಯಕ್ರಮ ಆಯೋಜಿಸಲಾಗಿತ್ತು.



ಕಾರ್ಯಕ್ರಮದಲ್ಲಿ ಹಿರಿಯ ಸಲಹೆಗಾರ ನರಶಸ್ತ್ರ ತಜ್ಞರಾದ ಡಾ. ಮಕ್ಸೂದ್ ಅಹ್ಮದ್ ಎ.ಆರ್., ಹಿರಿಯ ಸಲಹೆಗಾರ ಹೃದಯ ತಜ್ಞರಾದ ಡಾ. ಸಿ.ಬಿ. ಕೇಶವಮೂರ್ತಿ, ಮುಖ್ಯ ವೈದ್ಯಕೀಯ ಸೇವೆಗಳ ಮುಖ್ಯಸ್ಥರು ಹಾಗೂ ಹಿರಿಯ ಹೃದಯ ಮತ್ತು ರಕ್ತನಾಳ ಶಸ್ತ್ರಚಿಕಿತ್ಸಕರಾದ ಡಾ.ಉಪೇಂದ್ರ ಶೆಣೈ ಹಾಗೂ ಆಸ್ಪತ್ರೆ ನಿರ್ದೇಶಕ ಸಂದೀಪ್ ಪಟೇಲ್ ಬಿ.ಜೆ. ಭಾಗವಹಿಸಿ, ಮೆದುಳಿನ ತುರ್ತು ಪರಿಸ್ಥಿತಿಗಳು, ಪಾರ್ಶ್ವವಾಯು ಹಾಗೂ ಹೃದಯ ಸಂಬಂಧಿತ ತುರ್ತು ಸಂದರ್ಭಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾಹಿತಿ ನೀಡಿದರು.

ಪಾರ್ಶ್ವವಾಯು, ತಲೆಗೆ ಗಾಯ ಹಾಗೂ ಹಠಾತ್ ಹೃದಯ ತುರ್ತು ಪರಿಸ್ಥಿತಿಗಳ ಲಕ್ಷಣಗಳನ್ನು ತ್ವರಿತವಾಗಿ ಗುರುತಿಸಿ ಸೂಕ್ತ ಸಮಯದಲ್ಲಿ ಚಿಕಿತ್ಸೆ ಪಡೆಯುವುದು ಅತ್ಯಂತ ಮುಖ್ಯವಾಗಿದೆ ಎಂದು ವೈದ್ಯರು ತಿಳಿಸಿದರು. ಸಮಯಕ್ಕೆ ಸರಿಯಾದ ವೈದ್ಯಕೀಯ ನೆರವು ದೊರೆತರೆ ಅನೇಕ ಸಂದರ್ಭಗಳಲ್ಲಿ ಜೀವ ಉಳಿಸುವುದರ ಜೊತೆಗೆ ಶಾಶ್ವತ ಅಂಗವೈಕಲ್ಯವನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಮಣಿಪಾಲ್ ಆಸ್ಪತ್ರೆ ಮೈಸೂರು, ಮೈಸೂರು ಮಾತ್ರವಲ್ಲದೆ ಮಂಡ್ಯ, ಕೊಡಗು, ಚಾಮರಾಜನಗರ, ಹಾಸನ ಸೇರಿದಂತೆ ಸುತ್ತಮುತ್ತಲಿನ ಜಿಲ್ಲೆಗಳಿಂದ ಬರುವ ನರಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಅಪಘಾತ ಹಾಗೂ ಹೃದಯ ಸಂಬಂಧಿತ ತುರ್ತು ಪ್ರಕರಣಗಳಿಗೆ ತಜ್ಞ ವೈದ್ಯರ ಸೇವೆಗಳನ್ನು ಒದಗಿಸುತ್ತಿದೆ ಎಂದು ಆಸ್ಪತ್ರೆ ತಿಳಿಸಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಡಾ. ಮಕ್ಸೂದ್ ಅಹ್ಮದ್ ಅವರು, ರಸ್ತೆ ಅಪಘಾತಗಳಿಂದ ಉಂಟಾಗುವ ತಲೆಯ ಗಾಯಗಳ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು.

"ತಲೆಗೆ ಗಾಯವಾದ ಬಳಿಕ ವ್ಯಕ್ತಿ ಸಾಮಾನ್ಯವಾಗಿ ಮಾತನಾಡಬಹುದು, ನಡೆಯಬಹುದು ಅಥವಾ ತಾನು ಆರೋಗ್ಯವಾಗಿದ್ದೇನೆ ಎಂದು ಭಾವಿಸಬಹುದು. ಆದರೆ ಮೆದುಳಿನ ಒಳಗೆ ರಕ್ತಸ್ರಾವ ನಿಧಾನವಾಗಿ ಹೆಚ್ಚಾಗುವ ಸಾಧ್ಯತೆ ಇರುತ್ತದೆ.

ಲಕ್ಷಣಗಳು ಕಾಣಿಸಿಕೊಳ್ಳುವವರೆಗೆ ಕಾಯುವುದು ಅಪಾಯಕಾರಿ. ಆದ್ದರಿಂದ ತಲೆಗೆ ಗಾಯವಾದ ತಕ್ಷಣ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳುವುದು ಅತ್ಯಂತ ಅಗತ್ಯ" ಎಂದು ಅವರು ಹೇಳಿದರು.

# 'ಮೀನಾಬಜಾರ್' ಕಲಾ ಮತ್ತು ಕರಕುಶಲ ಪ್ರದರ್ಶನಕ್ಕೆ ಚಾಲನೆ

ಬೆಂಗಳೂರು

ನಗರದ ಕುಮಾರ ಕೃಪಾ ರಸ್ತೆಯ ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿ ಗ್ರ್ಯಾಂಡ್ ಫ್ಲಿಯಾ ಮಾರ್ಕೆಟ್ ಆಯೋಜಿಸಿರುವ 'ಮೀನಾ ಬಜಾರ್' ಕಲಾ, ಕರಕುಶಲ, ಕೈಮಗ್ಗ ಹಾಗೂ ಜೀವನಶೈಲಿ ವಸ್ತುಗಳ ಪ್ರದರ್ಶನಕ್ಕೆ ಶುಕ್ರವಾರ ಚಾಲನೆ ದೊರೆಯಿತು.



ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಉತ್ತರ ವಲಯ ಆಯುಕ್ತರಾದ ಡಾ. ಹರೀಶ್ ನಾಯಕ್, ನಟಿ ಜಾನ್ವಿ ರಾಜಶೇಖರ್ ಹಾಗೂ ಬಿಗ್ ಬಾಸ್ ಕನ್ನಡ ವಿಜೇತ ಪ್ರಥಮ್ ಅವರು ಪ್ರದರ್ಶನವನ್ನು ಉದ್ಘಾಟಿಸಿದರು.

ದೇಶದ ವಿವಿಧ ಭಾಗಗಳಿಂದ ಆಗಮಿಸಿರುವ ಕಲಾವಿದರು ಹಾಗೂ ವ್ಯಾಪಾರಿಗಳು ತಮ್ಮ ವಿಶಿಷ್ಟ ಉತ್ಪನ್ನಗಳನ್ನು ಪ್ರದರ್ಶನದಲ್ಲಿ ಇಟ್ಟಿದ್ದಾರೆ. ಕಲಾ ವಸ್ತುಗಳು, ಕರಕುಶಲ ಉತ್ಪನ್ನಗಳು, ಕೈಮಗ್ಗ ಉಡುಪುಗಳು, ಆಭರಣಗಳು, ಗೃಹ ಅಲಂಕಾರ ವಸ್ತುಗಳು ಹಾಗೂ ವಿವಿಧ ಜೀವನಶೈಲಿ ಉತ್ಪನ್ನಗಳು ಪ್ರದರ್ಶನದ ಪ್ರಮುಖ ಆಕರ್ಷಣೆಯಾಗಿವೆ. ಸ್ಥಳೀಯ ಕಲಾವಿದರು ಹಾಗೂ ಸಣ್ಣ ಉದ್ಯಮಿಗಳಿಗೆ ತಮ್ಮ ಉತ್ಪನ್ನಗಳನ್ನು ಪರಿಚಯಿಸಲು ಮತ್ತು ಗ್ರಾಹಕರಿಗೆ ವಿಭಿನ್ನ ಶೈಲಿಯ ವಸ್ತುಗಳನ್ನು ಖರೀದಿಸಲು ಈ ಪ್ರದರ್ಶನ ವೇದಿಕೆಯಾಗಿದೆ.

## ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರ

ತುಮಕೂರು

ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವವರಿಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್), ಜಿಲ್ಲಾ ಕೈಗಾರಿಕಾ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಜುಲೈ 22ರಂದು ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಬಳಿಯಿರುವ ಸಿಡಾಕ್ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸ ಬಯಸುವ ಆಸಕ್ತರಿಗೆ ಉದ್ಯಮಶೀಲತೆ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಯೋಜನೆಗಳ ಆಯ್ಕೆ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ಮತ್ತು ಮುಂದೆ ಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಬಗ್ಗೆ ಮಾಹಿತಿ ನೀಡಲಾಗುವುದು.

ಸ್ವಂತ ಉದ್ಯಮ ಸ್ಥಾಪಿಸಲು ಆಸಕ್ತಿ ಇರುವ ತುಮಕೂರು ಜಿಲ್ಲೆಯ ವಿದ್ಯಾವಂತ ಯುವಕ/ಯುವತಿಯರು ಹಾಗು ನಿರುದ್ಯೋಗಿಗಳು ಈ ಶಿಬಿರದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಬಹುದಾಗಿದೆ.

ಕನಿಷ್ಠ 18 ವರ್ಷ ಮೇಲ್ಪಟ್ಟ ಹಾಗೂ ಕನಿಷ್ಠ 10ನೇ ತರಗತಿ ವ್ಯಾಸಂಗ ಮಾಡಿರುವ ಆಸಕ್ತರು ಜುಲೈ 20ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ, 1ನೇ ಮಹಡಿ, ಕೈಗಾರಿಕಾ ಎಸ್ಟೇಟ್, ರಿಸರ್ವ್ ಪೋಲೀಸ್ ಮೈದಾನದ ಎದುರು, ಎಸ್.ಐ.ಟಿ., ತುಮಕೂರು ಅಥವಾ ದೂರವಾಣಿ ಸಂಖ್ಯೆ 7022746755/ 7760145784ನ್ನು ಸಂಪರ್ಕಿಸಬೇಕೆಂದು ಪ್ರಕಟಣೆ ತಿಳಿಸಿದೆ.

# 'ಸೃಜನಶೀಲ ಚಟುವಟಿಕೆಗಳು ಆತ್ಮಸಾಕ್ಷಾತ್ಕಾರದ ಅನುಭವ ನೀಡುತ್ತವೆ'



ಚಿಕ್ಕಬಳ್ಳಾಪುರ

ದೈನಂದಿನ ಜೀವನದಲ್ಲಿ ಸೃಜನಶೀಲತೆಯಿಂದ ಕೂಡಿದ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಾಗ ಆತ್ಮಸಾಕ್ಷಾತ್ಕಾರದ ಆಯಾಮವನ್ನು ಸ್ಪರ್ಶಿಸಿದ ಅನುಭವ ಪಡೆಯಬಹುದು ಎಂದು ಮುದ್ದೇನಹಳ್ಳಿ ಸತ್ಯಸಾಯಿ ಗ್ರಾಮದ ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.

ತಾಲ್ಲೂಕಿನ ಮುದ್ದೇನಹಳ್ಳಿಯಲ್ಲಿ ಆಯೋಜಿಸಿದ್ದ "ಸತ್ಯ ಸಂಗೀತ ಸಮ್ಮೇಳನ–2026" ರ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಸಂಗೀತ ಮತ್ತು ನೃತ್ಯದಂತಹ ಕಲೆಗಳ ಪರಿಚಯ ಪ್ರತಿಯೊಬ್ಬರಿಗೂ ಅಗತ್ಯವಾಗಿದೆ. ಮಕ್ಕಳಲ್ಲಿ ಬಾಲ್ಯದಿಂದಲೇ ಸಂಗೀತಾಸಕ್ತಿ ಬೆಳೆಸುವ ಉದ್ದೇಶದಿಂದ ನಮ್ಮ ಶಾಲೆಗಳಲ್ಲಿ ಆರನೇ ತರಗತಿಯಿಂದಲೇ ಭಜನೆಗಳನ್ನು ಕಲಿಸಲಾಗುತ್ತಿದೆ. ಜೊತೆಗೆ ಸಂಗೀತದ ಮೂಲ ರಾಗಗಳು ಹಾಗೂ ಭಜನೆಗಳು ಯಾವ ರಾಗಕ್ಕೆ ಸೇರಿವೆ ಎಂಬುದರ ಪರಿಚಯವನ್ನೂ ನೀಡಲಾಗುತ್ತಿದೆ. ಇಂತಹ ಕಲಿಕಾ ಪ್ರಕ್ರಿಯೆ ಪ್ರಾಥಮಿಕ ಹಂತದಿಂದಲೇ ಮಕ್ಕಳಿಗೆ ದೊರೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಖ್ಯಾತ ಸಂಗೀತ ಕಲಾವಿದರಾದ ಡಾ. ಎನ್. ರಾಜಮ್ ಹಾಗೂ ಪಂಡಿತ್ ಉಲ್ಲಾಸ್ ಕಾಶಲ್ಕರ್ ಅವರಿಗೆ "ಶ್ರೀ ಸತ್ಯ ಸಾಯಿ ಸಂಗೀತ ಶಿರೋಮಣಿ" ಪ್ರಶಸ್ತಿಯನ್ನು ಪ್ರದಾನ ಮಾಡಿ ಗೌರವಿಸಲಾಯಿತು.

ಸಮಾರೋಪ ಸಮಾರಂಭಕ್ಕೂ ಮುನ್ನ ನಡೆದ ವಿವಿಧ ಗೋಷ್ಠಿಗಳಲ್ಲಿ ಖ್ಯಾತ ಕಲಾವಿದರು ಹಾಗೂ ವಿದ್ವಾಂಸರಾದ ರಮಾ ಭಾರದ್ವಾಜ್, ಡಾ. ವೀಣಾ ಮೂರ್ತಿ ವಿಜಯ್, ತನೂಶ್ರೀ ಶಂಕರ್, ಮಧುಸೂದನ್ ಕಲೈಚೆಲ್ವನ್, ಹರ್ಷ ನಾರಾಯಣ್, ಡಾ. ಗಾಯತ್ರಿ ಗಿರೀಶ್ ಹಾಗೂ ಪ್ರೊ. ಲವ್ಲಿ ಶರ್ಮಾ ಅವರು ಸಂಗೀತ, ಸಂಸ್ಕೃತಿ ಮತ್ತು ಕಲಾ ಶಿಕ್ಷಣ ಕುರಿತಂತೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.ತಾಲ್ಲೂಕಿನ ಮುದ್ದೇನಹಳ್ಳಿಯಲ್ಲಿ ಆಯೋಜಿಸಿದ್ದ "ಸತ್ಯ ಸಂಗೀತ ಸಮ್ಮೇಳನ–2026" ರ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಸಂಗೀತ ಮತ್ತು ನೃತ್ಯದಂತಹ ಕಲೆಗಳ ಪರಿಚಯ ಪ್ರತಿಯೊಬ್ಬರಿಗೂ ಅಗತ್ಯವಾಗಿದೆ. ಮಕ್ಕಳಲ್ಲಿ ಬಾಲ್ಯದಿಂದಲೇ ಸಂಗೀತಾಸಕ್ತಿ ಬೆಳೆಸುವ ಉದ್ದೇಶದಿಂದ ನಮ್ಮ ಶಾಲೆಗಳಲ್ಲಿ ಆರನೇ ತರಗತಿಯಿಂದಲೇ ಭಜನೆಗಳನ್ನು ಕಲಿಸಲಾಗುತ್ತಿದೆ. ಜೊತೆಗೆ ಸಂಗೀತದ ಮೂಲ ರಾಗಗಳು ಹಾಗೂ ಭಜನೆಗಳು ಯಾವ ರಾಗಕ್ಕೆ ಸೇರಿವೆ ಎಂಬುದರ ಪರಿಚಯವನ್ನೂ ನೀಡಲಾಗುತ್ತಿದೆ. ಇಂತಹ ಕಲಿಕಾ ಪ್ರಕ್ರಿಯೆ ಪ್ರಾಥಮಿಕ ಹಂತದಿಂದಲೇ ಮಕ್ಕಳಿಗೆ ದೊರೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಖ್ಯಾತ ಸಂಗೀತ ಕಲಾವಿದರಾದ ಡಾ. ಎನ್. ರಾಜಮ್ ಹಾಗೂ ಪಂಡಿತ್ ಉಲ್ಲಾಸ್ ಕಾಶಲ್ಕರ್ ಅವರಿಗೆ "ಶ್ರೀ ಸತ್ಯ ಸಾಯಿ ಸಂಗೀತ ಶಿರೋಮಣಿ" ಪ್ರಶಸ್ತಿಯನ್ನು ಪ್ರದಾನ ಮಾಡಿ ಗೌರವಿಸಲಾಯಿತು.

ಸಮಾರೋಪ ಸಮಾರಂಭಕ್ಕೂ ಮುನ್ನ ನಡೆದ ವಿವಿಧ ಗೋಷ್ಠಿಗಳಲ್ಲಿ ಖ್ಯಾತ ಕಲಾವಿದರು ಹಾಗೂ ವಿದ್ವಾಂಸರಾದ ರಮಾ ಭಾರದ್ವಾಜ್, ಡಾ. ವೀಣಾ ಮೂರ್ತಿ ವಿಜಯ್, ತನೂಶ್ರೀ ಶಂಕರ್, ಮಧುಸೂದನ್ ಕಲೈಚೆಲ್ವನ್, ಹರ್ಷ ನಾರಾಯಣ್, ಡಾ. ಗಾಯತ್ರಿ ಗಿರೀಶ್ ಹಾಗೂ ಪ್ರೊ. ಲವ್ಲಿ ಶರ್ಮಾ ಅವರು ಸಂಗೀತ, ಸಂಸ್ಕೃತಿ ಮತ್ತು ಕಲಾ ಶಿಕ್ಷಣ ಕುರಿತಂತೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ನಾದ ಗುರುಕುಲಂ ನಿರ್ದೇಶಕಿ ರೇವತಿ ರಾಮಮಂದ್ರನ್, ಪ್ರಶಾಂತಿ ಬಾಲಮಂದಿರದ ಅಧ್ಯಕ್ಷ ಡಾ. ಬಿ.ಎನ್. ನರಸಿಂಹಮೂರ್ತಿ, ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ಆಡಳಿತ ವಿಭಾಗದ ರಿಜಿಸ್ಟ್ರಾರ್ ಹನುಮಂತ ರಾವ್ ನಾಯ್ಡು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಹೊಸ ವಿದ್ಯುತ್ ಕುಕ್‌ಟಾಪ್‌ಗಳ ಪರಿಚಯ

ಬೆಂಗಳೂರು

ಇಂಧನ ವೆಚ್ಚ ಹೆಚ್ಚಳ ಹಾಗೂ ಸಾಂಪ್ರದಾಯಿಕ ಇಂಧನಗಳ ಮೇಲಿನ ಅವಲಂಬನೆ ಕಡಿಮೆ ಮಾಡುವ ಉದ್ದೇಶದಿಂದ ವಾಣಿಜ್ಯ ಅಡುಗೆಮನೆಗಳಲ್ಲಿ ವಿದ್ಯುತ್ ಆಧಾರಿತ ಅಡುಗೆ ವ್ಯವಸ್ಥೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಸ್ಟೌಕ್ರಾಫ್ಟ್ ಲಿಮಿಟೆಡ್ ಸಂಸ್ಥೆ ಹೊಸ ಹೆವಿ-ಡ್ಯೂಟಿ ವಿದ್ಯುತ್ ಕುಕ್‌ಟಾಪ್‌ಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದೆ.

'ಗ್ಯಾಸ್-ಟು-ಗ್ರಿಡ್' ಉಪಕ್ರಮದ ಭಾಗವಾಗಿ ಸಂಸ್ಥೆಯು ಪಿಜನ್ ಎಂಡ್ಯೂರೋ ಹೆವಿ-ಡ್ಯೂಟಿ ಇಂಡಕ್ಷನ್ ಕುಕ್‌ಟಾಪ್ ಹಾಗೂ ಪಿಜನ್ ಇಗ್ನೈಟ್




ಹೆವಿ-ಡ್ಯೂಟಿ ಇನ್‌ಫ್ರಾರೆಡ್ ಕುಕ್‌ಟಾಪ್‌ಗಳನ್ನು ಪರಿಚಯಿಸಿದೆ.

ಸಣ್ಣ ಹೋಟೆಲ್‌ಗಳು, ದರ್ಶಿನಿಗಳು, ಕ್ಯಾಟರಿಂಗ್ ಸಂಸ್ಥೆಗಳು ಹಾಗೂ ದೊಡ್ಡ ಪ್ರಮಾಣದ ಸಮೂಹ ಅಡುಗೆಮನೆಗಳ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಈ ಉತ್ಪನ್ನಗಳನ್ನು ವಿನ್ಯಾಸಗೊಳಿಸಲಾಗಿದೆ. ವಿದ್ಯುತ್ ಆಧಾರಿತ ಈ ಕುಕ್‌ಟಾಪ್‌ಗಳು ಅಡುಗೆ ವೆಚ್ಚವನ್ನು ಕಡಿಮೆ ಮಾಡುವುದರ ಜೊತೆಗೆ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ನೆರವಾಗಲಿವೆ ಎಂದು ಸಂಸ್ಥೆ ತಿಳಿಸಿದೆ.

ಬಹು ಬರ್ನರ್‌ಗಳನ್ನು ಬಳಸುವ ರೆಸ್ಟೋರೆಂಟ್‌ಗಳು ಮತ್ತು ವಾಣಿಜ್ಯ ಅಡುಗೆಮನೆಗಳಿಗೆ ಈ ಹೊಸ ತಂತ್ರಜ್ಞಾನವು ಹೆಚ್ಚಿನ ಉಳಿತಾಯವನ್ನು ಒದಗಿಸಲಿದ್ದು, ಕಾರ್ಯಾಚರಣೆಯ ವೆಚ್ಚವನ್ನು ನಿಯಂತ್ರಿಸಲು ಸಹಕಾರಿಯಾಗಲಿದೆ. ಇದರೊಂದಿಗೆ ಪರಿಸರ ಸ್ನೇಹಿ ಅಡುಗೆ ವ್ಯವಸ್ಥೆಯತ್ತ ಸಾಗಲು ಸಹ ನೆರವಾಗಲಿದೆ.

# ರೋಬೋಟಿಕ್ ಕೀಲು ಬದಲಿ ಶಸ್ತ್ರಚಿಕಿತ್ಸೆ ಆರಂಭ

ಬೆಂಗಳೂರು

ಕರ್ನಾಟಕದ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯಲ್ಲಿ ಅತ್ಯಾಧುನಿಕ ವೈದ್ಯಕೀಯ ತಂತ್ರಜ್ಞಾನವನ್ನು ಅಳವಡಿಸುವ ಮಹತ್ವದ ಹೆಜ್ಜೆಯಾಗಿ ಬೆಂಗಳೂರಿನ ಸಂಜಯ್ ಗಾಂಧಿ ಟ್ರಾಮಾ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆ (ಎಸ್‌ಜಿಐಟಿಒ) ಯಲ್ಲಿ ರೋಬೋಟಿಕ್ ಶಸ್ತ್ರಚಿಕಿತ್ಸಾ ವ್ಯವಸ್ಥೆಗೆ ಚಾಲನೆ ನೀಡಲಾಗಿದೆ.



ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಇಲಾಖೆ ವತಿಯಿಂದ ಆರಂಭಿಸಲಾದ ಈ ವ್ಯವಸ್ಥೆಯೊಂದಿಗೆ ರೋಬೋಟಿಕ್ ನೆರವಿನ ಕೀಲು ಬದಲಿ ಶಸ್ತ್ರಚಿಕಿತ್ಸೆಯನ್ನು ಪರಿಚಯಿಸಿದ ರಾಜ್ಯದ ಮೊದಲ ಸರ್ಕಾರಿ ಆಸ್ಪತ್ರೆ ಎಂಬ ಹೆಗ್ಗಳಿಕೆಗೆ ಎಸ್‌ಜಿಐಟಿಒ ಪಾತ್ರವಾಗಿದೆ.

ಸಂಸ್ಥೆಯ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣ ಪ್ರಕಾಶ್ ಆರ್. ಪಾಟೀಲ್ ಅವರು ಅತ್ಯಾಧುನಿಕ ರೋಬೋಟಿಕ್ ಶಸ್ತ್ರಚಿಕಿತ್ಸಾ ವ್ಯವಸ್ಥೆಯನ್ನು ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಉದಯ್ ಬಿ. ಗರುಡಾಚಾರ್, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ, ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್, ವೈದ್ಯಕೀಯ ಶಿಕ್ಷಣ ನಿರ್ದೇಶಕಿ ಡಾ. ಬಿ.ಎಲ್. ಸುಜಾತಾ ರಾಥೋಡ್ ಹಾಗೂ ಎಸ್‌ಜಿಐಟಿಒ ನಿರ್ದೇಶಕ ಡಾ. ಮದನ್ ಬಲ್ಲಾಳ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ರೋಬೋಟಿಕ್ ನೆರವಿನ ಕೀಲು ಬದಲಿ ಶಸ್ತ್ರಚಿಕಿತ್ಸೆಯು ಅಸ್ಥಿ ಚಿಕಿತ್ಸಾ ಕ್ಷೇತ್ರದಲ್ಲಿ ಹೆಚ್ಚಿನ ನಿಖರತೆ ಮತ್ತು ಪರಿಣಾಮಕಾರಿ ಫಲಿತಾಂಶಗಳನ್ನು ಒದಗಿಸುವ ಆಧುನಿಕ ತಂತ್ರಜ್ಞಾನವಾಗಿದೆ. ಈ ವ್ಯವಸ್ಥೆಯ ನೆರವಿನಿಂದ ಕೃತಕ ಕೀಲುಗಳನ್ನು ಅತ್ಯಂತ ನಿಖರವಾಗಿ ಸರಿಯಾದ ಸ್ಥಾನದಲ್ಲಿ ಅಳವಡಿಸಲು ಸಾಧ್ಯವಾಗಲಿದೆ.

ಈ ತಂತ್ರಜ್ಞಾನದಿಂದ ಶಸ್ತ್ರಚಿಕಿತ್ಸೆಯ ವೇಳೆ ರಕ್ತಸ್ರಾವ ಕಡಿಮೆ ಮಾಡುವುದು, ಸುತ್ತಮುತ್ತಲಿನ ಅಂಗಾಂಶಗಳಿಗೆ ಉಂಟಾಗುವ ಹಾನಿಯನ್ನು ತಗ್ಗಿಸುವುದು, ರೋಗಿಗಳ ಚೇತರಿಕೆ ಅವಧಿಯನ್ನು ಕಡಿಮೆ ಮಾಡುವುದು ಹಾಗೂ ದೀರ್ಘಾವಧಿಯಲ್ಲಿ ಉತ್ತಮ ವೈದ್ಯಕೀಯ ಫಲಿತಾಂಶಗಳನ್ನು ಪಡೆಯಲು ಸಹಕಾರಿಯಾಗಲಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಸರ್ಕಾರಿ ಆಸ್ಪತ್ರೆಯಲ್ಲಿ ಇಂತಹ ಅತ್ಯಾಧುನಿಕ ತಂತ್ರಜ್ಞಾನವನ್ನು ಅಳವಡಿಸಿರುವುದು ರಾಜ್ಯದ ಆರೋಗ್ಯ ಸೇವೆಗಳ ಗುಣಮಟ್ಟವನ್ನು ಮತ್ತಷ್ಟು ಹೆಚ್ಚಿಸುವುದರ ಜೊತೆಗೆ ಸಾಮಾನ್ಯ ಜನರಿಗೂ ಉನ್ನತ ಮಟ್ಟದ ಚಿಕಿತ್ಸಾ ಸೌಲಭ್ಯಗಳನ್ನು ಲಭ್ಯವಾಗುವಂತೆ ಮಾಡಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಶಿಪ್‌ರಾಕೆಟ್‌ನ 'ಫಾಸ್ಟರ್' ಎಐ ಆಧಾರಿತ ವಾಣಿಜ್ಯ ವೇದಿಕೆ ಅನಾವರಣ

ಬೆಂಗಳೂರು

ಭಾರತದ ಪ್ರಮುಖ ಎಐ ಆಧಾರಿತ ಇ-ವಾಣಿಜ್ಯ ಸಬಲೀಕರಣ ಸಂಸ್ಥೆಯಾಗಿರುವ ಶಿಪ್‌ರಾಕೆಟ್ ತನ್ನ ಪ್ರಮುಖ ವಾಣಿಜ್ಯ ಶೃಂಗಸಭೆ 'ಶಿವಿರ್ 2026'ರ ಏಳನೇ ಆವೃತ್ತಿಯಲ್ಲಿ 'ಫಾಸ್ಟರ್' ಎಂಬ ಹೊಸ ಎಐ ಆಧಾರಿತ ಖರೀದಿ ಪೂರ್ಣಗೊಳಿಸುವ ವೇದಿಕೆಯನ್ನು ಅನಾವರಣಗೊಳಿಸಿದೆ.




ಗ್ರಾಹಕರ ಖರೀದಿ ಪ್ರಕ್ರಿಯೆಯಲ್ಲಿನ ಅಡೆತಡೆಗಳನ್ನು ಕಡಿಮೆ ಮಾಡಿ, ಖರೀದಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸುವ ಗ್ರಾಹಕರ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶದಿಂದ ಫಾಸ್ಟರ್ ವೇದಿಕೆಯನ್ನು ಅಭಿವೃದ್ಧಿಪಡಿಸಲಾಗಿದೆ. ಇದು ಭಾರತದ ಮೊದಲ ಎಐ ಆಧಾರಿತ ಮುಂಗಡ ಖರೀದಿ ವಾಣಿಜ್ಯ ವ್ಯವಸ್ಥೆಯಾಗಿದ್ದು, ಬ್ರ್ಯಾಂಡ್‌ಗಳಿಗೆ ಗ್ರಾಹಕರ ಖರೀದಿ ಆಸಕ್ತಿಯನ್ನು ಗುರುತಿಸಿ, ಅರ್ಥಮಾಡಿಕೊಂಡು ಅದನ್ನು ಯಶಸ್ವಿ ಮಾರಾಟವಾಗಿ ಪರಿವರ್ತಿಸಲು ನೆರವಾಗಲಿದೆ ಎಂದು ಸಂಸ್ಥೆ ತಿಳಿಸಿದೆ.

ಫಾಸ್ಟರ್ ವ್ಯವಸ್ಥೆಯಲ್ಲಿ ಹಲವು ಆಧುನಿಕ ಸೌಲಭ್ಯಗಳನ್ನು ಅಳವಡಿಸಲಾಗಿದ್ದು, ಒಂದೇ ಸ್ಪರ್ಶದಲ್ಲಿ ಖರೀದಿ ಪೂರ್ಣಗೊಳಿಸುವ ಫಾಸ್ಟರ್ ಖರೀದಿ ವ್ಯವಸ್ಥೆ, ಎಐ ಆಧಾರಿತ ಕಾರ್ಯಕ್ಷಮತೆ ಆಧಾರಿತ ಜಾಹೀರಾತು ಸೇವೆ, ಹೆಚ್ಚಿನ ಖರೀದಿ ಆಸಕ್ತಿ ಹೊಂದಿರುವ ಗ್ರಾಹಕರನ್ನು ಗುರುತಿಸುವ ಗ್ರಾಹಕ ಗುರುತು ವ್ಯವಸ್ಥೆ ಹಾಗೂ ಗ್ರಾಹಕರ ಅಗತ್ಯಗಳನ್ನು ತಕ್ಷಣ ಅರ್ಥಮಾಡಿಕೊಳ್ಳುವ ಎಐ ಸಹಾಯಕ ಸೇವೆಗಳು ಪ್ರಮುಖ ವೈಶಿಷ್ಟ್ಯಗಳಾಗಿವೆ.

ಮುಂಬೈನ ದಿ ವೆಸ್ಟಿನ್ ಮುಂಬೈ ಪೊವೈ ಲೇಕ್ ಹೋಟೆಲ್‌ನಲ್ಲಿ ನಡೆದ ಶಿವಿರ್ 2026 ಸಮಾವೇಶದಲ್ಲಿ 2,500ಕ್ಕೂ ಹೆಚ್ಚು ನವೋದ್ಯಮ ಸಂಸ್ಥಾಪಕರು, ಬ್ರ್ಯಾಂಡ್ ನಿರ್ವಾಹಕರು ಹಾಗೂ ತಂತ್ರಜ್ಞಾನ ಕ್ಷೇತ್ರದ ನಾಯಕರು ಭಾಗವಹಿಸಿದ್ದರು.

ಸಮಾವೇಶದಲ್ಲಿ ಕೃತಕ ಬುದ್ಧಿಮತ್ತೆ ಭವಿಷ್ಯದ ವಾಣಿಜ್ಯ ಕ್ಷೇತ್ರವನ್ನು ಹೇಗೆ ಬದಲಾಯಿಸುತ್ತಿದೆ ಎಂಬ ಕುರಿತು ಚರ್ಚೆಗಳು ನಡೆದವು. ಗ್ರಾಹಕರನ್ನು ಆಕರ್ಷಿಸುವುದು, ಖರೀದಿಗೆ ಪರಿವರ್ತಿಸುವುದು ಹಾಗೂ ಗ್ರಾಹಕರನ್ನು ದೀರ್ಘಕಾಲದವರೆಗೆ ಉಳಿಸಿಕೊಳ್ಳುವ ಪ್ರಕ್ರಿಯೆಗಳಲ್ಲಿ ಎಐ ತಂತ್ರಜ್ಞಾನದ ಬಳಕೆಯ ಕುರಿತು ಉದ್ಯಮ ತಜ್ಞರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಮುಖ್ಯ ಭಾಷಣಗಳು, ಉದ್ಯಮ ಪರಿಣಿತರ ಸಂವಾದಗಳು ಹಾಗೂ ನೇರ ಉತ್ಪನ್ನ ಪ್ರದರ್ಶನಗಳ ಮೂಲಕ ಎಐ ತಂತ್ರಜ್ಞಾನವನ್ನು ವ್ಯವಹಾರಿಕ ಸವಾಲುಗಳಿಗೆ ಪರಿಣಾಮಕಾರಿಯಾಗಿ ಬಳಸುವ ವಿಧಾನಗಳ ಕುರಿತು ಭಾಗವಹಿಸಿದವರಿಗೆ ಮಾಹಿತಿ ನೀಡಲಾಯಿತು.

ಫಾಸ್ಟರ್ ವೇದಿಕೆಯ ಮೂಲಕ ಆನ್‌ಲೈನ್ ವಾಣಿಜ್ಯ ಕ್ಷೇತ್ರದಲ್ಲಿ ಗ್ರಾಹಕರ ಅನುಭವವನ್ನು ಮತ್ತಷ್ಟು ಸುಧಾರಿಸುವುದರ ಜೊತೆಗೆ, ಬ್ರ್ಯಾಂಡ್‌ಗಳ ಮಾರಾಟ ಸಾಮರ್ಥ್ಯವನ್ನು ಹೆಚ್ಚಿಸುವ ಗುರಿಯನ್ನು ಶಿಪ್‌ರಾಕೆಟ್ ಹೊಂದಿದೆ ಎಂದು ಸಂಸ್ಥೆ ತಿಳಿಸಿದೆ.

# ಫೋನ್‌ಪೇನಲ್ಲಿ 'ಆಲ್-ಇನ್-ಒನ್ ತೆರಿಗೆ ಸಲ್ಲಿಕೆ' ಸೌಲಭ್ಯ ಆರಂಭ

ಬೆಂಗಳೂರು

ವ್ಯಕ್ತಿಗಳು, ಸ್ವತಂತ್ರ ವೃತ್ತಿಪರರು ಹಾಗೂ ಸಣ್ಣ ವ್ಯಾಪಾರಿಗಳಿಗೆ ತೆರಿಗೆ ಸಲ್ಲಿಕೆ ಪ್ರಕ್ರಿಯೆಯನ್ನು ಮತ್ತಷ್ಟು ಸರಳಗೊಳಿಸುವ ಉದ್ದೇಶದಿಂದ ಫೋನ್‌ಪೇ ತನ್ನ ವೇದಿಕೆಯಲ್ಲಿ ಸಮಗ್ರ 'ತೆರಿಗೆ ಸಲ್ಲಿಕೆ' ವೈಶಿಷ್ಟ್ಯವನ್ನು ಪರಿಚಯಿಸಿದೆ.




ಈ ಹೊಸ ಸೌಲಭ್ಯದ ಮೂಲಕ ಫೋನ್‌ಪೇ ಬಳಕೆದಾರರು ತಮ್ಮ ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಕೆ ಹಾಗೂ ಮಾಸಿಕ ಜಿಎಸ್‌ಟಿ ಅನುಸರಣೆ ಪ್ರಕ್ರಿಯೆಗಳನ್ನು ಆಪ್‌ನಲ್ಲಿಯೇ ಸುಲಭವಾಗಿ ಪೂರ್ಣಗೊಳಿಸಬಹುದಾಗಿದೆ.

ಭಾರತದ ಪ್ರಮುಖ ಡಿಜಿಟಲ್ ತೆರಿಗೆ ಅನುಸರಣೆ ವೇದಿಕೆಗಳಲ್ಲಿ ಒಂದಾದ ಟ್ಯಾಕ್ಸ್‌ಬಡ್ಡಿ ಸಹಯೋಗದೊಂದಿಗೆ ಈ ಸೇವೆಯನ್ನು ಪರಿಚಯಿಸಲಾಗಿದ್ದು, ಬಳಕೆದಾರರಿಗೆ ಸ್ವಯಂ ತೆರಿಗೆ ಸಲ್ಲಿಕೆ ಆಯ್ಕೆಯ ಜೊತೆಗೆ ಸಂಕೀರ್ಣ ತೆರಿಗೆ ಅಗತ್ಯಗಳಿಗೆ ತಜ್ಞರ ನೆರವಿನ ಸೇವೆಗಳನ್ನೂ ಒದಗಿಸಲಾಗುತ್ತಿದೆ.

ಕೇವಲ ರೂ.24ರಿಂದ ಆರಂಭವಾಗುವ ಸ್ವಯಂ ತೆರಿಗೆ ಸಲ್ಲಿಕೆ ಸೇವೆ, ತಜ್ಞರ ಸಲಹೆ, ಸಣ್ಣ ವ್ಯಾಪಾರಿಗಳಿಗಾಗಿ ಮಾಸಿಕ ಜಿಎಸ್‌ಟಿ ಸಲ್ಲಿಕೆ ಸೇರಿದಂತೆ ವಿವಿಧ ಸೌಲಭ್ಯಗಳು ಈ ವ್ಯವಸ್ಥೆಯಲ್ಲಿ ಲಭ್ಯವಿವೆ. ಇತರ ಜಾಲತಾಣಗಳಿಗೆ ಭೇಟಿ ನೀಡುವ ಅಗತ್ಯವಿಲ್ಲದೆ ಫೋನ್‌ಪೇ ಆಪ್‌ನಲ್ಲಿಯೇ ತೆರಿಗೆ ಸಂಬಂಧಿತ ಸೇವೆಗಳನ್ನು ಪೂರ್ಣಗೊಳಿಸಲು ಈ ವ್ಯವಸ್ಥೆ ನೆರವಾಗಲಿದೆ.

ಈ ಕುರಿತು ಮಾತನಾಡಿದ ಫೋನ್‌ಪೇನ ಆಪ್ ವಿಭಾಗಗಳ ಮುಖ್ಯಸ್ಥೆ ನಿಹಾರಿಕಾ ಸೈಗಲ್, "ಬಳಕೆದಾರರ ದೈನಂದಿನ ಹಣಕಾಸು ಅಗತ್ಯಗಳನ್ನು ಒಂದೇ ವೇದಿಕೆಯಲ್ಲಿ ಪೂರೈಸುವ ಸಮಗ್ರ ಹಣಕಾಸು ವ್ಯವಸ್ಥೆಯನ್ನು ನಿರ್ಮಿಸುವುದು ನಮ್ಮ ಗುರಿಯಾಗಿದೆ. ಕೈಗೆಟುಕುವ ದರದಲ್ಲಿ ತೆರಿಗೆ ಸಲ್ಲಿಕೆ ಪರಿಹಾರಗಳು ಹಾಗೂ ತಜ್ಞರ ಸಲಹೆಗಳನ್ನು ಒದಗಿಸುವ ಮೂಲಕ ಎಲ್ಲ ವರ್ಗದ ಬಳಕೆದಾರರು ತಮ್ಮ ತೆರಿಗೆ ನಿರ್ವಹಣೆಯನ್ನು ಸುಲಭವಾಗಿ ಕೈಗೊಳ್ಳಲು ಸಹಾಯ ಮಾಡಲಿದ್ದೇವೆ" ಎಂದು ಹೇಳಿದರು.

ಟ್ಯಾಕ್ಸ್‌ಬಡ್ಡಿ ಸಹ ಸಂಸ್ಥಾಪಕ ಹಾಗೂ ತಾಂತ್ರಿಕ ಮುಖ್ಯಸ್ಥ ಶ್ರೀನಿವಾಸ್ ರೆಡ್ಡಿ ಮಾತನಾಡಿ, "ಕೃತಕ ಬುದ್ಧಿಮತ್ತೆ ಆಧಾರಿತ ಹಾಗೂ ತಜ್ಞರ ನೆರವಿನ ತೆರಿಗೆ ಸೇವೆಗಳನ್ನು ದೇಶಾದ್ಯಂತದ ಬಳಕೆದಾರರಿಗೆ ತಲುಪಿಸಲು ಫೋನ್‌ಪೇ ಜೊತೆಗಿನ ಸಹಭಾಗಿತ್ವ ಸಹಕಾರಿಯಾಗಲಿದೆ. ಉತ್ತಮ ತೆರಿಗೆ ಮಾರ್ಗದರ್ಶನ ಮತ್ತು ಸಲ್ಲಿಕೆ ಬೆಂಬಲ ಒದಗಿಸುವ ನಮ್ಮ ಉದ್ದೇಶಕ್ಕೆ ಈ ಸಹಯೋಗ ಪೂರಕವಾಗಿದೆ" ಎಂದರು.

ಹೊಸ ಸೇವೆಯ ಮೂಲಕ ಸಂಬಳ ಪಡೆಯುವ ಉದ್ಯೋಗಿಗಳು, ಸ್ವತಂತ್ರ ವೃತ್ತಿಪರರು ಹಾಗೂ ಸಣ್ಣ ಉದ್ಯಮಿಗಳು ತಮ್ಮ ತೆರಿಗೆ ಪ್ರಕ್ರಿಯೆಗಳನ್ನು ಹೆಚ್ಚು ಸರಳ, ವೇಗದ ಹಾಗೂ ವಿಶ್ವಾಸಾರ್ಹ ರೀತಿಯಲ್ಲಿ ನಿರ್ವಹಿಸಲು ಸಾಧ್ಯವಾಗಲಿದೆ ಎಂದು ಫೋನ್‌ಪೇ ತಿಳಿಸಿದೆ.

# ಎಲೆನ್ ಬೆಂಗಳೂರು ವಿದ್ಯಾರ್ಥಿಗಳ ಅಮೋಘ ಸಾಧನೆ

ಬೆಂಗಳೂರು

ವೈದ್ಯಕೀಯ ಪ್ರವೇಶಕ್ಕಾಗಿ ನಡೆಯುವ ನೀಟ್ ಯುಜಿ ಪರೀಕ್ಷೆ 2026ರ ಫಲಿತಾಂಶದಲ್ಲಿ ಎಲೆನ್ ಬೆಂಗಳೂರು ಸಂಸ್ಥೆಯ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡುವ ಮೂಲಕ ಸಂಸ್ಥೆಯ ಕೀರ್ತಿಯನ್ನು ಮತ್ತಷ್ಟು ಹೆಚ್ಚಿಸಿದ್ದಾರೆ.



ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಪ್ರಕಟಿಸಿರುವ ನೀಟ್ ಯುಜಿ 2026ರ ಫಲಿತಾಂಶದಲ್ಲಿ ಎಲೆನ್ ಬೆಂಗಳೂರು ಕೇಂದ್ರದ ತರಗತಿ ವಿಭಾಗದ ವಿದ್ಯಾರ್ಥಿ ದಿಗಂತ್ ಬಿ.ಎಸ್. ಅವರು ಅಖಿಲ ಭಾರತ ಮಟ್ಟದಲ್ಲಿ 64ನೇ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ. ಶ್ರೇಯಾಂಕ್ ಜೆ. ಅವರು ಅಖಿಲ ಭಾರತ ಮಟ್ಟದಲ್ಲಿ 94ನೇ ಸ್ಥಾನ ಗಳಿಸಿದ್ದಾರೆ.

ಈ ಕುರಿತು ಮಾತನಾಡಿದ ಎಲೆನ್ ದಕ್ಷಿಣ ವಲಯದ ಮುಖ್ಯಸ್ಥ ಮಹೇಶ್ ಯಾದವ್ ಅವರು, "ಎಲೆನ್ ಸಂಸ್ಥೆಯು ಉತ್ತಮ ಫಲಿತಾಂಶಗಳ ಮೂಲಕ ತನ್ನದೇ ಆದ ಹೆಗ್ಗಳಿಕೆಯನ್ನು ಹೊಂದಿದೆ. ಈ ಬಾರಿಯೂ ನೀಟ್ ಯುಜಿ ಫಲಿತಾಂಶದಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದಾರೆ. ದಿಗಂತ್ ಬಿ.ಎಸ್. ಅವರು 64ನೇ ಸ್ಥಾನ ಹಾಗೂ ಶ್ರೇಯಾಂಕ್ ಜೆ. ಅವರು 94ನೇ ಸ್ಥಾನ ಪಡೆದಿರುವುದು ಹೆಮ್ಮೆಯ ಸಂಗತಿಯಾಗಿದೆ. ವಿದ್ಯಾರ್ಥಿಗಳು ಮತ್ತು ಪೋಷಕರು ಸಂಸ್ಥೆಯ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ಈ ಸಾಧನೆ ಸಾಕ್ಷಿಯಾಗಿದೆ" ಎಂದು ಹೇಳಿದರು.

ನೀಟ್ ಯುಜಿ 2026ರ ಫಲಿತಾಂಶದಲ್ಲಿ ಎಲೆನ್ ಕರಿಯರ್ ಸಂಸ್ಥೆಯ ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲಿಯೂ ಗಮನಾರ್ಹ ಸಾಧನೆ ಮಾಡಿದ್ದಾರೆ.

ಅಖಿಲ ಭಾರತ ಮಟ್ಟದ ಅಗ್ರ ಹತ್ತು ಸ್ಥಾನಗಳ ಪಟ್ಟಿಯಲ್ಲಿ ಎಲೆನ್ ಸಂಸ್ಥೆಯ ಐವರು ವಿದ್ಯಾರ್ಥಿಗಳು ಸ್ಥಾನ ಪಡೆದಿದ್ದಾರೆ.

ಇದುವರೆಗೆ ಲಭ್ಯವಾಗಿರುವ ಫಲಿತಾಂಶಗಳ ಪ್ರಕಾರ ಎಲೆನ್ ಸಂಸ್ಥೆಯ ಒಟ್ಟು 44 ವಿದ್ಯಾರ್ಥಿಗಳು ಅಖಿಲ ಭಾರತ ಮಟ್ಟದ ಅಗ್ರ ನೂರು ಸ್ಥಾನಗಳಲ್ಲಿ ಸ್ಥಾನ ಪಡೆದುಕೊಂಡಿದ್ದಾರೆ.

ದೇಶದ ಅತಿ ದೊಡ್ಡ ವೈದ್ಯಕೀಯ ಪ್ರವೇಶ ಪರೀಕ್ಷೆಯಾಗಿರುವ ನೀಟ್ ಯುಜಿ ಫಲಿತಾಂಶದಲ್ಲಿ ಎಲೆನ್ ವಿದ್ಯಾರ್ಥಿಗಳ ಈ ಸಾಧನೆಯು ಅವರ ಪರಿಶ್ರಮ, ಬೋಧಕರ ಮಾರ್ಗದರ್ಶನ ಹಾಗೂ ಸಂಸ್ಥೆಯ ಶೈಕ್ಷಣಿಕ ವ್ಯವಸ್ಥೆಯ ಪರಿಣಾಮವಾಗಿದೆ ಎಂದು ಸಂಸ್ಥೆ ತಿಳಿಸಿದೆ.

# ನೇಕಾರ ಸಂಘದಿಂದ ಕೈಮಗ್ಗ ಉತ್ಪನ್ನ ಪ್ರದರ್ಶನ, ಮಾರಾಟ

ತುಮಕೂರು

ತಮ್ಮ ಸಮುದಾಯದ ಕುಲಕಸುಬು ಕೈಮಗ್ಗದ ನೇಕಾರಿಕೆಯನ್ನು ಪ್ರೋತ್ಸಾಹಿಸಲು, ನೇಕಾರ ಸಂಘಗಳು ನೇಯ್ದ ಬಟ್ಟೆಗಳಿಗೆ ಮಾರುಕಟ್ಟೆ ಒದಗಿಸುವ ಸಲುವಾಗಿ ನೇಕಾರರ ಸಂಘ, ನೀಲಕಂಠೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್‌ನ ಸಹಯೋಗದಲ್ಲಿ ನಗರದ ಹೊರಪೇಟೆ ರಸ್ತೆಯ ನೀಲಕಂಠೇಶ್ವರ ದೇವಸ್ಥಾನ ಸಮುದಾಯ ಭವನದಲ್ಲಿ ಕೈಮಗ್ಗ ನೇಕಾರರ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮೇಳ ಹಮ್ಮಿಕೊಳ್ಳಲಾಗಿದೆ.

ಇದೇ ತಿಂಗಳ 17ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಶಾಸಕ ಜಿ.ಬಿ. ಜ್ಯೋತಿಗಣೇಶ್ ಕೈಮಗ್ಗ ನೇಕಾರರ ಉತ್ಪನ್ನಗಳ ಮಾರಾಟ ಮೇಳ ಉದ್ಘಾಟಿಸುವರು. ಜವಳಿ ಇಲಾಖೆ ಉಪ ನಿರ್ದೇಶಕ ಸಂತೋಷ್ ಮತ್ತಿತರರು ಭಾಗವಹಿಸುವರು ಎಂದು ಆಯೋಜನರಾದ ನೇಕಾರಿಕೆಯಲ್ಲಿ ರಾಜ್ಯ ಪ್ರಶಸ್ತಿ ಪಡೆದಿರುವ ಆರ್. ಮಂಜುನಾಥ್ ಹೇಳಿದ್ದಾರೆ.

ನೇಕಾರರಿಂದ ನೇರ ಗ್ರಾಹಕರಿಗೆ ಕೈಮಗ್ಗದ ತಪುಪಿಸುವ ಆಶಯದ ಈ ಮೇಳದಲ್ಲಿ ಆಕರ್ಷಕ ರಿಯಾಯಿತಿ ವ್ಯವಸ್ಥೆ ಇದೆ. ಕೈಮಗ್ಗ ನೇಕಾರರಿಂದ ತಯಾರಿಸಲ್ಪಟ್ಟ ಅಪ್ಪಟ ರೇಷ್ಮೆ ಸೀರೆಗಳು, ಮೈಸೂರು ಸಿಲ್ಕ್, ಮೊಳಕಾಲ್ಮೂರು ಸೀರೆ, ಕಂಚಿ ಸೀರೆಗಳು, ರೇಷ್ಮೆ ಶರ್ಟ್ ಪೀಸ್, ಕುರ್ತಿಸ್ ಟಾಪ್, ಧರ್ಮಾವರಂ ಸೀರೆಗಳು, ಜೈಪುರ್ ಸೀರೆಗಳು, ಕೊಲ್ಕತ್ತ ಸೀರೆಗಳು, ದೆಹಲಿ ಸೀರೆಗಳು, ಬಾಗಲ್‌ಕೂರ್ ಸೀರೆಗಳು ಕಾಟನ್ ಸೀರೆಗಳು, ಕಾಶ್ಮೀರ್ ಶಾಲುಗಳ ಪ್ರದರ್ಶನ ಮಾರಾಟ ವ್ಯವಸ್ಥೆ ಮಾಡಲಾಗಿದೆ ಎಂದು ಆರ್. ಮಂಜುನಾಥ್ ತಿಳಿಸಿದ್ದಾರೆ.

# ಕೋಲಾರ ಜಿಲ್ಲೆಯಲ್ಲಿ ಶೇ.56ರಷ್ಟು ಮತದಾರರ ನಮೂನೆಗಳ ಡಿಜಿಟಲೀಕರಣ ಪೂರ್ಣ

ಕೋಲಾರ

ಕೋಲಾರ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿ ಕೈಗೊಂಡಿರುವ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ನಮೂನೆಗಳ ಡಿಜಿಟಲೀಕರಣ ಕಾರ್ಯ ವೇಗವಾಗಿ ಸಾಗುತ್ತಿದ್ದು, ಜುಲೈ 16ರ ವೇಳೆಗೆ ಜಿಲ್ಲೆಯಲ್ಲಿ ಶೇ.56ರಷ್ಟು ಮತದಾರರ ನಮೂನೆಗಳ ಡಿಜಿಟಲೀಕರಣ ಪೂರ್ಣಗೊಂಡಿದೆ.

ಜಿಲ್ಲೆಯ ಒಟ್ಟು 12,95,265 ಮತದಾರರಿಗೆ ಸಂಬಂಧಿಸಿದಂತೆ ಶೇ.100ರಷ್ಟು ನಮೂನೆಗಳನ್ನು ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಈಗಾಗಲೇ ವಿತರಿಸಲಾಗಿದೆ. ಈ ಪೈಕಿ 7,25,325 ನಮೂನೆಗಳನ್ನು ಯಶಸ್ವಿಯಾಗಿ ಡಿಜಿಟಲೀಕರಣಗೊಳಿಸಲಾಗಿದೆ. ಇದರೊಂದಿಗೆ 2,188 ಮಂದಿ ಮತದಾರರು ಆನ್‌ಲೈನ್ ಮೂಲಕವೇ ತಮ್ಮ ನಮೂನೆಗಳನ್ನು ಸಲ್ಲಿಸುವ ಮೂಲಕ ಡಿಜಿಟಲ್ ಪ್ರಕ್ರಿಯೆಗೆ ಸಹಕಾರ ನೀಡಿದ್ದಾರೆ.

ವಿಧಾನಸಭಾ ಕ್ಷೇತ್ರವಾರು ಪ್ರಗತಿಯನ್ನು ಪರಿಶೀಲಿಸಿದಾಗ ಮುಳಬಾಗಿಲು ಕ್ಷೇತ್ರ 1,42,881 ನಮೂನೆಗಳ ಡಿಜಿಟಲೀಕರಣದೊಂದಿಗೆ ಮೊದಲ ಸ್ಥಾನದಲ್ಲಿದ್ದು, ಕೋಲಾರ ಕ್ಷೇತ್ರದಲ್ಲಿ 1,40,423 ನಮೂನೆಗಳು ಡಿಜಿಟಲೀಕರಣಗೊಂಡಿವೆ. ಶ್ರೀನಿವಾಸಪುರ ಕ್ಷೇತ್ರದಲ್ಲಿ 1,23,110, ಬಂಗಾರಪೇಟೆ ಕ್ಷೇತ್ರದಲ್ಲಿ 1,17,243, ಮಾಲೂರು ಕ್ಷೇತ್ರದಲ್ಲಿ 1,05,847 ಹಾಗೂ ಕೋಲಾರ ಚಿನ್ನದ ಗಣಿ (ಕೆಜಿಎಫ್) ಕ್ಷೇತ್ರದಲ್ಲಿ 95,821 ನಮೂನೆಗಳ ಡಿಜಿಟಲೀಕರಣ ಪೂರ್ಣಗೊಂಡಿದೆ.

ಇದರ ನಡುವೆ ಮರಣ ಹೊಂದಿದ, ಶಾಶ್ವತವಾಗಿ ಸ್ಥಳಾಂತರಗೊಂಡ ಹಾಗೂ ಅಲಭ್ಯರಾಗಿರುವ ಮತದಾರರಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಒಟ್ಟು 31,191 ನಮೂನೆಗಳನ್ನು 'ಸಂಗ್ರಹಿಸಲಾಗದ ನಮೂನೆಗಳು' ಎಂದು ಪ್ರತ್ಯೇಕವಾಗಿ ಗುರುತಿಸಲಾಗಿದೆ. ಈ ಪೈಕಿ 11,976 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡವರಾಗಿದ್ದು, 10,250 ಮಂದಿ ಮರಣ ಹೊಂದಿದ ಮತದಾರರಾಗಿದ್ದಾರೆ.

ಉಳಿದ ನಮೂನೆಗಳ ಡಿಜಿಟಲೀಕರಣ ಕಾರ್ಯ ಪ್ರಗತಿಯಲ್ಲಿದ್ದು, ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಬೂದಿಕೋಟೆ

ಮಡಿವಾಳ ಸಮುದಾಯದ ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ವಿವಿಧ ಉನ್ನತ ವ್ಯಾಸಂಗಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ತಾಲೂಕು ಮಡಿವಾಳರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ವೈ.ಸಿ.ಗೋವಿಂದಪ್ಪ ತಿಳಿಸಿದ್ದಾರೆ.

ನಗರದ ಮಡಿವಾಳರ ಕ್ಷೇಮಾಭಿವೃದ್ಧಿ ಸಂಘದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜುಲೈ 19ರಂದು ಬೆಳಿಗ್ಗೆ 10 ಗಂಟೆಗೆ ನಗರದ ಅಕ್ಕಚಮ್ಮ ಕಲ್ಯಾಣ ಮಂಟಪದಲ್ಲಿ ತಾಲೂಕು ಮಡಿವಾಳರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಮಡಿವಾಳರ ನೌಕರರ ಬಳಗದ ಸಂಯುಕ್ತ ಆಶ್ರಯದಲ್ಲಿ ಪ್ರತಿಭಾ ಪುರಸ್ಕಾರ ಹಾಗೂ ಹಿರಿಯ ನಾಗರಿಕರ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಮಡಿವಾಳ ಸಮುದಾಯದ ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ವಿವಿಧ ಉನ್ನತ ಶಿಕ್ಷಣ ಕೋರ್ಸ್‌ಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಇದೇ ಸಂದರ್ಭದಲ್ಲಿ ಸಮುದಾಯದ ಹಿರಿಯ ನಾಗರಿಕರನ್ನು ಗೌರವಿಸಿ ಸನ್ಮಾನಿಸಲಾಗುವುದು ಎಂದು ಹೇಳಿದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪರೀಕ್ಷೆಯ ಅಂಕಪಟ್ಟಿಯ ಪ್ರತಿ, ಆಧಾರ್ ಕಾರ್ಡ್‌ನ ಪ್ರತಿ ಹಾಗೂ ಒಂದು ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರವನ್ನು ಸಲ್ಲಿಸಬೇಕು ಎಂದು ತಿಳಿಸಿದರು.

ಹೆಚ್ಚಿನ ಮಾಹಿತಿಗಾಗಿ 98450 27582, 91418 22186, 89716 68519 ಹಾಗೂ 94492 38445 ಸಂಖ್ಯೆಗಳ ಮೂಲಕ ಸಂಪರ್ಕಿಸಬಹುದಾಗಿದೆ.

# ಸಂಭ್ರಮದ ಸ್ವಾತಂತ್ರ್ಯೋತ್ಸವಕ್ಕೆ ಸಿದ್ಧತೆಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ



ತುಮಕೂರು

ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಆಗಸ್ಟ್ 15ರಂದು ಸ್ವಾತಂತ್ರ್ಯ ದಿನಾಚರಣೆಯ ಸಂಭ್ರಮಾಚರಣೆಗೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ದಿನಾಚರಣೆಯಲ್ಲಿ ನಾವೆಲ್ಲರೂ ಸಂತಸದಿಂದ ಭಾಗವಹಿಸಿ ಅರ್ಥಪೂರ್ಣವಾಗಿ ಹಬ್ಬದ ರೀತಿಯಲ್ಲಿ ಆಚರಿಸಬೇಕು. ಅದಕ್ಕೆ ಪೂರಕ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು.

ವಿವಿಧ ಶಾಲಾ-ಕಾಲೇಜು, ವಸತಿ ನಿಲಯಗಳ ಮಕ್ಕಳಿಂದ ದೇಶಭಕ್ತಿ ಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಬೇಕು. ಸಾಂಸ್ಕೃತಿಕ ಕಾರ್ಯಕ್ರಮವು ಸ್ವಚ್ಛತೆ, ಪರಿಸರ ಸಂರಕ್ಷಣೆ, ರಸ್ತೆ ಸುರಕ್ಷತೆ, ಜೀವಜಲ ಸಂರಕ್ಷಣೆಯಂತಹ ವಿಷಯಾಧಾರಿತವಾಗಿರಬೇಕು ಸೂಚಿಸಿದರು.

ಬೆಳಿಗ್ಗೆ 9 ಗಂಟೆಗೆ ಉಪ ಮುಖ್ಯಮಂತ್ರಿಗಳಿಂದ ಧ್ವಜಾರೋಹಣ:

ಜಿಲ್ಲಾಡಳಿತ ವಿವಿಧ ಇಲಾಖೆ ಹಾಗೂ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಆಗಸ್ಟ್ 15ರಂದು ಬೆಳಿಗ್ಗೆ 9 ಗಂಟೆಗೆ ಉಪ ಮುಖ್ಯಮಂತ್ರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಂದ ಧ್ವಜಾರೋಹಣ, ಗೌರವ ರಕ್ಷೆ ಸ್ವೀಕಾರ, ಸ್ವಾತಂತ್ರ್ಯೋತ್ಸವದ ಸಂದೇಶ ನೀಡುವ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮ ನಡೆಯಲಿರುವ ಜಿಲ್ಲಾ ಕ್ರೀಡಾಂಗಣದ ಸುತ್ತ-ಮುತ್ತ ಸ್ವಚ್ಛತಾ ಕಾರ್ಯ, ಕಾರ್ಯಕ್ರಮ ದಿನದಂದು ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು. ನಗರದ ಚರ್ಚ್ ಸರ್ಕಲ್, ಲಕ್ಕಪ್ಪ ಸರ್ಕಲ್, ಕೋಟೆ ಶ್ರೀ ಆಂಜನೇಯ ಸ್ವಾಮಿ ಸರ್ಕಲ್, ಟೌನ್ ಹಾಲ್ ಸರ್ಕಲ್ ಸೇರಿದಂತೆ ಪ್ರಮುಖ ವೃತ್ತಗಳನ್ನು ತಳಿರು-ತೋರಣಗಳೊಂದಿಗೆ ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಮಾಡಬೇಕು. ಲೋಕೋಪಯೋಗಿ ಇಲಾಖೆ ವತಿಯಿಂದ ವೇದಿಕೆ ನಿರ್ಮಾಣ, ಧ್ವಜ ಸ್ಥಂಭ ನಿರ್ಮಾಣ ವ್ಯವಸ್ಥೆ, ಬ್ಯಾರಿಕೇಡ್ ವ್ಯವಸ್ಥೆ ಮಾಡಬೇಕು. ವೇದಿಕೆ ಸುತ್ತ-ಮುತ್ತ ಹೂಕುಂಡಗಳಿಂದ ಅಲಂಕರಿಸಬೇಕು. ವಿದ್ಯುತ್ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಸಭೆಯಲ್ಲಿ ಸ್ವಾಗತ ಸಮಿತಿ, ಪೆರೇಡ್ ಸಮಿತಿ, ಸನ್ಮಾನ ಸಮಿತಿ, ಸಿಹಿ ವಿತರಣೆ ಸಮಿತಿ, ಸಾಂಸ್ಕೃತಿಕ ಕಾರ್ಯಕ್ರಮ ಸಮಿತಿಗಳನ್ನು ರಚಿಸಿ ವಿವಿಧ ಕೆಲಸ-ಕಾರ್ಯಗಳನ್ನು ಹಂಚಿಕೆ ಮಾಡಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಪಾಲಿಕೆ ಆಯುಕ್ತೆ ಬಿ.ಶುಭ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಘುಚಂದ್ರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಬಿ.ಎಂ. ಚಂದ್ರಶೇಖರ್, ಉಪವಿಭಾಗಾಧಿಕಾರಿ ನಾಹಿದಾ ಜ಼ಂ ಜ಼ಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಯೋಗಾನಂದ, ತಹಶೀಲ್ದಾರ್ ರಾಜೇಶ್ವರಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕಿ ಶಾರದಮ್ಮ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಸೋನಿಯಾ ವರ್ಣೇಕರ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಸ್‌ಐಆರ್ ಪ್ರಕ್ರಿಯೆ ಗೊಂದಲ ನಿವಾರಣೆಗೆ ಕ್ರಮ ಕೈಗೊಳ್ಳಿ: ಸಿ.ಬಿ. ಶಶಿಧರ್

ತಿಪಟೂರು

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಉಂಟಾಗಿರುವ ಗೊಂದಲಗಳನ್ನು ನಿವಾರಿಸಲು ಲಿಖಿತ ಮಾರ್ಗಸೂಚಿ ಬಿಡುಗಡೆ ಮಾಡಬೇಕು, ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಸಮರ್ಪಕ ತರಬೇತಿ ನೀಡಬೇಕು ಹಾಗೂ ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಜನಸ್ಪಂದನ ಟ್ರಸ್ಟ್ ವತಿಯಿಂದ ನಗರಸಭೆ ಪೌರಾಯುಕ್ತ ವಿಶ್ವೇಶ್ವರ ಬದರಗಡೆ ಅವರಿಗೆ ಮನವಿ ಸಲ್ಲಿಸಲಾಯಿತು.



ನಗರಸಭೆ ಕಚೇರಿಯಲ್ಲಿ ಮನವಿ ಸಲ್ಲಿಸಿ ಮಾತನಾಡಿದ ಜನಸ್ಪಂದನ ಟ್ರಸ್ಟ್ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಸಿ.ಬಿ. ಶಶಿಧರ್ (ಟೂಡಾ), ನಗರ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಸಾರ್ವಜನಿಕರು ಹಾಗೂ ವಿವಿಧ ಬಿಎಲ್‌ಒಗಳ ಕಾರ್ಯವೈಖರಿ ಕುರಿತು ಹಲವು ದೂರುಗಳು ಮತ್ತು ಗೊಂದಲಗಳು ಕೇಳಿಬರುತ್ತಿವೆ ಎಂದು ಹೇಳಿದರು.

ಮತದಾರರ ಪಟ್ಟಿಯು ಪ್ರಜಾಪ್ರಭುತ್ವದ ಮೂಲಾಧಾರವಾಗಿದ್ದು, ಮಾಹಿತಿ ಕೊರತೆ, ಆಡಳಿತಾತ್ಮಕ ದೋಷ ಅಥವಾ ಸಮರ್ಪಕ ಮಾರ್ಗದರ್ಶನದ ಅಭಾವದಿಂದ ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ತಕ್ಷಣ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಎನ್ಯುಮರೇಷನ್ ನಮೂನೆ ಭರ್ತಿ ಮಾಡುವ ಕುರಿತು ಹಲವಾರು ಮತದಾರರಿಗೆ ಸಮರ್ಪಕ ಮಾಹಿತಿ ನೀಡಲಾಗುತ್ತಿಲ್ಲ. ಪರಿಣಾಮವಾಗಿ ತಪ್ಪಾಗಿ ಭರ್ತಿ ಮಾಡಿದ ನಮೂನೆಗಳನ್ನು ಪರಿಶೀಲಿಸದೆ ಸ್ವೀಕರಿಸಲಾಗುತ್ತಿದ್ದು, ಇದರಿಂದ ಮುಂದಿನ ದಿನಗಳಲ್ಲಿ ಮತದಾರರಿಗೆ ಅನಗತ್ಯ ನೋಟಿಸ್‌ಗಳು ಬರುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ಮಾಹಿತಿ ಕೊರತೆಯಿಂದ ನಮೂನೆಯಲ್ಲಿ ತಪ್ಪುಗಳಾದರೆ ಅವುಗಳನ್ನು ಯಾವ ಹಂತದಲ್ಲಿ ಮತ್ತು ಹೇಗೆ ತಿದ್ದುಪಡಿ ಮಾಡಿಕೊಳ್ಳಬಹುದು ಎಂಬ ಬಗ್ಗೆ ಸಾರ್ವಜನಿಕರಿಗೆ ಸ್ಪಷ್ಟ ಮಾರ್ಗದರ್ಶನ ನೀಡಬೇಕು. ಜೊತೆಗೆ ಎಲ್ಲಾ ಬಿಎಲ್‌ಒಗಳಿಗೆ ಎಸ್‌ಐಆರ್ ಮಾರ್ಗಸೂಚಿಗಳ ಕುರಿತು ಪುನಃ ತರಬೇತಿ ನೀಡಿ, ತಪ್ಪಾಗಿ ಭರ್ತಿ ಮಾಡಲಾದ ನಮೂನೆಗಳನ್ನು ತಿದ್ದುಪಡಿ ಮಾಡಿಕೊಂಡು ಸ್ವೀಕರಿಸುವಂತೆ ನಿರ್ದೇಶನ ನೀಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ವಿವಾಹದ ನಂತರ ಹೆಸರು ಬದಲಿಸಿಕೊಂಡಿರುವ ಮಹಿಳೆಯರು, ಅಂತರ್ಧರ್ಮೀಯ ವಿವಾಹವಾದವರು ಹಾಗೂ ಕಾನೂನುಬದ್ಧವಾಗಿ ಹೆಸರು ಬದಲಾವಣೆ ಮಾಡಿಕೊಂಡಿರುವ ಮತದಾರರು ಎನ್ಯುಮರೇಷನ್ ನಮೂನೆಯನ್ನು ಹೇಗೆ ಭರ್ತಿ ಮಾಡಬೇಕು ಮತ್ತು ಯಾವ ದಾಖಲೆಗಳನ್ನು ಸಲ್ಲಿಸಬೇಕು ಎಂಬ ಕುರಿತು ಲಿಖಿತ ಮಾರ್ಗಸೂಚಿ ಪ್ರಕಟಿಸಬೇಕು ಎಂದು ಮನವಿ ಮಾಡಲಾಗಿದೆ.

ಎಸ್‌ಐಆರ್ ಕುರಿತು ಸಾರ್ವಜನಿಕರಲ್ಲಿ ಉಂಟಾಗಿರುವ ಸಾಮಾನ್ಯ ಪ್ರಶ್ನೆಗಳು ಹಾಗೂ ಗೊಂದಲಗಳಿಗೆ ಸಂಬಂಧಿಸಿದಂತೆ ಕನ್ನಡದಲ್ಲಿ ಅಧಿಕೃತ ಪ್ರಶ್ನೋತ್ತರ ಅಥವಾ ಮಾರ್ಗಸೂಚಿ ಪ್ರಕಟಿಸಿ ವ್ಯಾಪಕವಾಗಿ ಹಂಚಬೇಕು. ಮಾಹಿತಿ ಕೊರತೆ, ತಾಂತ್ರಿಕ ದೋಷ ಅಥವಾ ಆಡಳಿತಾತ್ಮಕ ಕಾರಣಗಳಿಂದ ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಎಲ್ಲ ಅರ್ಜಿಗಳನ್ನು ನ್ಯಾಯಸಮ್ಮತವಾಗಿ ಪರಿಶೀಲಿಸಿ ಅಗತ್ಯ ಸಹಕಾರ ನೀಡಬೇಕು ಎಂದು ಒತ್ತಾಯಿಸಲಾಗಿದೆ.

"ಪ್ರಜಾಪ್ರಭುತ್ವದಲ್ಲಿ ಮತದಾನದ ಹಕ್ಕು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕಾಗಿದ್ದು, ಯಾವುದೇ ಅರ್ಹ ಮತದಾರರು ತಮ್ಮ ಹಕ್ಕಿನಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಈ ಮನವಿ ಸಲ್ಲಿಸಲಾಗಿದೆ" ಎಂದು ಸಿ.ಬಿ. ಶಶಿಧರ್ ಹೇಳಿದರು.

ಈ ಸಂದರ್ಭದಲ್ಲಿ ಬೆಲೆ ಕಾವಲು ಸಮಿತಿ ರಾಜ್ಯ ಕಾರ್ಯದರ್ಶಿ ಶ್ರೀಕಾಂತ್ ಕೆಳಹಟ್ಟಿ, ಸೌಹಾರ್ದದ ಅಲ್ಲಾಬಕಾಶ್, ಶರತ್, ಕೈಫ್ ಹಾಗೂ ಷಫಿ ಉಪಸ್ಥಿತರಿದ್ದರು.

# 'ಸರ್ಕಾರಿ ಖರಾಬು ಜಮೀನು ಒತ್ತುವರಿ'

ಚಿಂತಾಮಣಿ

ತಾಲ್ಲೂಕಿನ ಕಸಬಾ ಹೋಬಳಿ ವ್ಯಾಪ್ತಿಯ ಮಾಡಿಕೆರೆ ಗ್ರಾಮದ ಸರ್ಕಾರಿ ಖರಾಬು ಜಮೀನನ್ನು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಅಕ್ರಮವಾಗಿ ಒತ್ತುವರಿ ಮಾಡಲಾಗಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ನೀಲಿ ಸೇನೆ) ರಾಜ್ಯ ಉಪಾಧ್ಯಕ್ಷ ಸಿ. ಜನಾರ್ಧನಬಾಬು ಆರೋಪಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಡಿಕೆರೆ ಗ್ರಾಮದ ಸರ್ವೆ ಸಂಖ್ಯೆ 48ರಲ್ಲಿ 4.23 ಎಕರೆ ಸರ್ಕಾರಿ ಖರಾಬು ಜಮೀನಿದ್ದು, ಗ್ರಾಮದ ಕೆಲ ಪ್ರಭಾವಿ ವ್ಯಕ್ತಿಗಳು ನಕಲಿ ದಾಖಲೆಗಳನ್ನು ಸೃಷ್ಟಿಸಿ ಜಮೀನನ್ನು ಅಕ್ರಮವಾಗಿ ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ದೂರಿದರು.

ಈ ಸಂಬಂಧ ಈಗಾಗಲೇ ತಾಲೂಕು ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದ್ದು, ಒತ್ತುವರಿಯಾಗಿರುವ ಜಮೀನಿನಲ್ಲಿ ಭವ್ಯ ಬಂಗಲೆಗಳು ಹಾಗೂ ಇಟ್ಟಿಗೆ ಕಾರ್ಖಾನೆಗಳನ್ನು ನಿರ್ಮಿಸಲಾಗಿದೆ ಎಂದು ಆರೋಪಿಸಿದರು.



ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿ, ಒತ್ತುವರಿಯಾಗಿರುವ ಸರ್ಕಾರಿ ಜಮೀನನ್ನು ಗುರುತಿಸಿ ಸರ್ಕಾರದ ವಶಕ್ಕೆ ಪಡೆಯಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ ಎಂದು ಅವರು ತಿಳಿಸಿದರು.

ಈ ಕುರಿತು ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ ತಾಲೂಕು ಆಡಳಿತದ ವಿರುದ್ಧ ಕರ್ನಾಟಕ ದಲಿತ ಸಂಘರ್ಷ ಸಮಿತಿ (ನೀಲಿ ಸೇನೆ) ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಮನವಿಯಲ್ಲಿ ಎಚ್ಚರಿಕೆ ನೀಡಲಾಗಿದೆ ಎಂದು ಸಿ. ಜನಾರ್ಧನಬಾಬು ಹೇಳಿದ್ದಾರೆ.

# ವಿಜಯಪುರದಲ್ಲಿ ಕಂಬಿ ಮುಕ್ತ ವಿದ್ಯುತ್ ಯೋಜನೆಗೆ ವೇಗ

ವಿಜಯಪುರ

ವಿಜಯಪುರ ಪಟ್ಟಣದಲ್ಲಿ ಕಂಬಿ ಮುಕ್ತ ವಿದ್ಯುತ್ ಪೂರೈಕೆ ಯೋಜನೆಯಡಿ ವಿದ್ಯುತ್ ಕಂಬಗಳಲ್ಲಿ ಹೊಸ ಕೇಬಲ್ ಅಳವಡಿಸುವ ಕಾಮಗಾರಿ ಭರದಿಂದ ಸಾಗಿದ್ದು, ಇದರ ಪರಿಣಾಮವಾಗಿ ಪಟ್ಟಣದ ವಿವಿಧ ಬಡಾವಣೆಗಳಲ್ಲಿ ತಾತ್ಕಾಲಿಕ ವಿದ್ಯುತ್ ವ್ಯತ್ಯಯ ಉಂಟಾಗುತ್ತಿದೆ. ಕಾಮಗಾರಿ ಪೂರ್ಣಗೊಳ್ಳುವವರೆಗೆ ಸಾರ್ವಜನಿಕರು ಸಹಕರಿಸುವಂತೆ ಬೆಸ್ಕಾಂ ಇಂಜಿನಿಯರ್ ಹರೀಶ್ ಮನವಿ ಮಾಡಿದ್ದಾರೆ.

ಪಟ್ಟಣದ ಸೌಂದರ್ಯವರ್ಧನೆ ಹಾಗೂ ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಜೋತು ಬಿದ್ದಿರುವ ಹಳೆಯ ವಿದ್ಯುತ್ ತಂತಿಗಳನ್ನು ತೆರವುಗೊಳಿಸಿ, ಅವುಗಳ ಬದಲಿಗೆ ಗುಣಮಟ್ಟದ ಕೇಬಲ್‌ಗಳನ್ನು ಅಳವಡಿಸುವ ಕಾರ್ಯವನ್ನು ಕೈಗೊಳ್ಳಲಾಗಿದೆ. ಕಳೆದ ಒಂದು ವಾರದಿಂದ ನಡೆಯುತ್ತಿರುವ ಕಾಮಗಾರಿಯಲ್ಲಿ ಕೇಬಲ್ ಎಳೆಯುವ ಹಾಗೂ ಜೋಡಿಸುವ ವೇಳೆ ಸುರಕ್ಷತಾ ಕ್ರಮವಾಗಿ ವಿದ್ಯುತ್ ಸಂಪರ್ಕವನ್ನು ಕೆಲ ಗಂಟೆಗಳ ಕಾಲ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗುತ್ತಿದೆ.



ಈ ಕುರಿತು ಮಾತನಾಡಿದ ಬೆಸ್ಕಾಂ ಇಂಜಿನಿಯರ್ ಹರೀಶ್, ವಿಜಯಪುರವನ್ನು ಸಂಪೂರ್ಣ ಕಂಬಿ ಮುಕ್ತ ಹಾಗೂ ಅಪಾಯ ಮುಕ್ತ ಪಟ್ಟಣವನ್ನಾಗಿ ರೂಪಿಸುವ ಉದ್ದೇಶದಿಂದ ಈ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ.

ತೂಗಾಡುತ್ತಿರುವ ವಿದ್ಯುತ್ ತಂತಿಗಳಿಂದ ಉಂಟಾಗುವ ಅಪಾಯ ಮತ್ತು ಸಾರ್ವಜನಿಕರ ತೊಂದರೆಗಳನ್ನು ತಪ್ಪಿಸಲು ಈ ಕೇಬಲ್ ವ್ಯವಸ್ಥೆ ಅಗತ್ಯವಾಗಿದೆ. ಕಾಮಗಾರಿ ಸಂದರ್ಭದಲ್ಲಿ ತಾತ್ಕಾಲಿಕ ವಿದ್ಯುತ್ ವ್ಯತ್ಯಯ ಅನಿವಾರ್ಯವಾಗಿದ್ದು, ಸಾರ್ವಜನಿಕರು ಸಹನೆ ಮತ್ತು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಕಾಮಗಾರಿ ಪೂರ್ಣಗೊಂಡ ಬಳಿಕ ಪಟ್ಟಣದಲ್ಲಿ ವಿದ್ಯುತ್ ಕಳ್ಳತನ, ಶಾರ್ಟ್ ಸರ್ಕ್ಯೂಟ್ ಸಮಸ್ಯೆಗಳು ಹಾಗೂ ಆಗಾಗ ಉಂಟಾಗುವ ವಿದ್ಯುತ್ ಕಡಿತಕ್ಕೆ ಶಾಶ್ವತ ಪರಿಹಾರ ದೊರೆಯಲಿದ್ದು, ನಿರಂತರ ಹಾಗೂ ಸುರಕ್ಷಿತ ವಿದ್ಯುತ್ ಪೂರೈಕೆ ಸಾಧ್ಯವಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

# ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ

ಕೋಲಾರ

ಸ್ಥಳೀಯ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕೋಲಾರ ವತಿಯಿಂದ ಜುಲೈ 18ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 2 ಗಂಟೆಯವರೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ.

ಈ ನೇರ ಸಂದರ್ಶನದಲ್ಲಿ ಬೆಂಗಳೂರು ಹಾಗೂ ಕೋಲಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಖಾಸಗಿ ಸಂಸ್ಥೆಗಳು ಭಾಗವಹಿಸಿ, ವಿವಿಧ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಿವೆ. ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ, ಐಟಿಐ, ಡಿಪ್ಲೊಮಾ, ಪದವಿ, ಸ್ನಾತಕೋತ್ತರ ಪದವಿ ಸೇರಿದಂತೆ ವಿವಿಧ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತಾ ಪ್ರಮಾಣಪತ್ರಗಳ ಮೂಲ ಹಾಗೂ ಝೆರಾಕ್ಸ್ ಪ್ರತಿಗಳು, ಆಧಾರ್ ಕಾರ್ಡ್, ಇತ್ತೀಚಿನ ನಾಲ್ಕು ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರಗಳು ಹಾಗೂ ಹಲವು ಪ್ರತಿಗಳ ಜೀವನ ಚರಿತ್ರೆ (ರೆಸ್ಯೂಮ್)ಯೊಂದಿಗೆ ಸಂದರ್ಶನಕ್ಕೆ ಹಾಜರಾಗುವಂತೆ ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 7353232456 ಹಾಗೂ 9740154413 ಮೊಬೈಲ್ ಸಂಖ್ಯೆಗಳ ಮೂಲಕ ಅಥವಾ ಕಚೇರಿ ವೇಳೆಯಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕೋಲಾರವನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಹುದ್ದೆಗಳಿಗೆ ಅರ್ಜಿಆಹ್ವಾನ

ಕೋಲಾರ

ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆಯನ್ನು ಕೋಲಾರ ಜಿಲ್ಲೆಯ ಜಿಲ್ಲಾ ಎಸ್.ಎನ್.ಆರ್. ಆಸ್ಪತ್ರೆ ಆವರಣದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಕೋಲಾರ ವತಿಯಿಂದ 2026-27 ನೇ ಸಾಲಿನಲ್ಲಿ ಅನುಷ್ಠಾನಗೊಂಡಿದ್ದು, ಈ ಯೋಜನೆಯಡಿ ಸ್ವಯಂ ಸೇವಾ ಸಂಸ್ಥೆಗೆ ಸಿಬ್ಬಂದಿಯನ್ನು ಗೌರವಧನದ ಆಧಾರದ ಮೇರೆಗೆ ಆಯ್ಕೆ ಮಾಡಲು ಕೃತಕಾಂಗ ಜೋಡಣೆ(ಪಿ&ಒ) ಅಭಿಯಂತರರು, ಲೆದರ್‌ವರ್ಕರ್ / ಶೂಮೇಕರ್, ಕ್ಲಿನಿಕಲ್ ಸೈಕಾಲಿಜಿಸ್ಟ್ (ಪೂರ್ಣಾವಧಿ), ಸ್ಪೀಚ್ ಥೆರಪಿಸ್ಟ್ & ಅಡಿಯಾಲಜಿಸ್ಟ್ (ಪೂರ್ಣಾವಧಿ), ಫಿಸಿಯೋಥೆರಪಿಸ್ಟ್/ ಆಕ್ಯೂಪೇಶನಲ್ ಥೆರಪಿಸ್ಟ್ (ಪೂರ್ಣಾವಧಿ), ಮೊಬಲಿಟಿ ಇನ್ಸ್‌ಟ್ರಕ್ಟರ್, ಇಯರ್ ಮೋಲ್ಡ್ ಟೆಕ್ನಿಷಿಯನ್ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಜುಲೈ 27ರ ಸಂಜೆ 5.30 ವರೆಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂರವಾಣಿ ಸಂಖ್ಯೆ:085152-200010 ಅನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೋತಾಪುರಿ ಮಾವು ಬೆಳೆಗಾರರ ರೈತರು ನೋಂದಣಿಮಾಡಿಸಿಕೊಳ್ಳಲು ಮನವಿ

ಕೋಲಾರ

2026-27ನೇ ಸಾಲಿನ ಮಾವು ಬೆಂಬಲ ಬೆಲೆ ಯೋಜನೆಯಡಿ ತೋತಾಪುರಿ ಮಾವು ಮಾರಾಟ ಮಾಡುತ್ತಿರುವ ಹಾಗೂ ಈಗಾಗಲೇ ಮಾರಾಟ ಮಾಡಿರುವ ಎಲ್ಲಾ ರೈತರು, ವ್ಯಾಪಾರಿಯಿಂದ ಮಾರಾಟ ಬಿಲ್ ಕಡ್ಡಾಯವಾಗಿ ಪಡೆದು, ಗೇಟ್ ಎಂಟ್ರಿ ಚೀಟಿ, ತೂಕದ ಚೀಟಿ, ಆನ್ ಲೈನ್ ನೋಂದಣಿ ಪ್ರತಿಯೊಂದಿಗೆ ಅದೇ ದಿನ ಅಥವಾ ಮರುದಿನವೇ ಸಂಬಂಧಿಸಿದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಛೇರಿಗೆ ಸಲ್ಲಿಸಬಹುದು.

ಮಾರಾಟ ಬಿಲ್ಲುಗಳನ್ನು ಅದೇ ದಿನ ಅಥವಾ ಮರುದಿನವೇ ಸಲ್ಲಿಸಿದಲ್ಲಿ ಮಾತ್ರ ಖಜಒಖ ಪೋರ್ಟಲ್ ನಲ್ಲಿ ದಾಖಲಾತಿ ಮಾಡಿ, ಯೋಜನೆಯಡಿ ಮುಂದಿನ ಪ್ರಕ್ರಿಯೆ ಕೈಗೊಳ್ಳಲು ಸಾಧ್ಯವಾಗುತ್ತದೆ. ಆದ್ದರಿಂದ ರೈತರು ಯಾವುದೇ ಕಾರಣಕ್ಕೂ ಮಾರಾಟ ಬಿಲ್ಲು ಸಲ್ಲಿಕೆಯನ್ನು ವಿಳಂಬ ಮಾಡದೇ, ತಕ್ಷಣವೇ ಂಕಿಒಅ ಕಛೇರಿಗೆ ಸಲ್ಲಿಸುಬೇಕು.

ಮಾವು ವ್ಯಾಪಾರಿಗಳು ಹಾಗೂ ಕಮಿಷನ್ ಏಜೆಂಟರು ಮಾವು ಖರೀದಿಸಿದ ತಕ್ಷಣ ರೈತರಿಗೆ ಮಾರಾಟ ಬಿಲ್ಲನ್ನು ಕಡ್ಡಯವಾಗಿ ನೀಡಿ, ಅದನ್ನು ಅದೇ ದಿನ ಅಥವಾ ಮರುದಿನವೇ ಕಛೇರಿಗೆ ಸಲ್ಲಿಸಬೇಕು. ರೈತರು ಹಾಗೂ ವ್ಯಾಪಾರಿಗಳು ಸಹಕರಿಸಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕೆ ಕೈಜೋಡಿಸುವಂತೆ ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆ.ವಿ.ಕಂ ಗ್ರಾಹಕರ ಸಂವಾದ ಸಭೆ

ಕೋಲಾರ

ಕೋಲಾರ ನಗರ ಉಪ-ವಿಭಾಗದ ಕಛೇರಿಯಲ್ಲಿ ಜುಲೈ 18 ರಂದು ಮೂರನೇ ಶನಿವಾರದಂದು ಮಧ್ಯಾಹ್ನ 3.00 ರಿಂದ 5.30 ಗಂಟೆಯವರೆಗೆ ಬೆವಿಕಂ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗುತ್ತಿದೆ.

ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಕೊಳ್ಳಬೇಕೆಂದು ನಗರ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಅರ್ಜಿ ಆಹ್ವಾನ

ಕೋಲಾರ

2026-27ನೇ ಸಾಲಿನ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದಲ್ಲಿ ಒದಗಿಸುವಂತೆ ಹೈಟೆಕ್ ಹಾರ್ವೆಸ್ಟರ್ ಹಬ್‌ನ್ನು ಸ್ಥಾಪಿಸಲು ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ವೈಯಕ್ತಿಕ ಫಲಾನುಭವಿಗಳಿಗೆ ಕಂಬೈನ್ಡ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಅವಕಾಶವಿರುತ್ತದೆ.

ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಕಡ್ಡಾಯವಾಗಿ ಕಂಬೈನ್ ಹಾರ್ವೆಸ್ಟರ್, ಟ್ರಾಕ್ಟರ್ ಚಾಲಿತ ಬೇಲರ್ ಕಡ್ಡಾಯವಾಗಿದ್ದು, ಇತರೆ ಕೃಷಿ ಯಂತ್ರೋಪಕರಣಗಳನ್ನು ಹಬ್‌ನಲ್ಲಿ ಪಡೆಯಲು ಅವಕಾಶವಿರುತ್ತದೆ. ವೈಯಕ್ತಿಕ ಫಲಾನುಭವಿಗಳಿಗೆ -ಶೇ 50 ರ ಸಹಾಯಧನದಲ್ಲಿ ಗರಿಷ್ಠ ರೂ.40.00 ಲಕ್ಷ ಸಹಾಯಧನವನ್ನು "Credited Linked Back Ended Subsidy" ಮುಖಾಂತರ ಪಡೆಯಲು ಅವಕಾಶವಿರುತ್ತದೆ ಹಾಗೂ ಕೃಷಿ ಮೂಲಭೂತ ಸೌಕರ್ಯ ನಿಧಿ ಯೋಜನೆಯಡಿ ಸಾಲದ ನೆರವನ್ನು ಪಡೆಯಲು ಸಹ ಅವಕಾಶವಿರುತ್ತದೆ.

ಆಸಕ್ತ ರೈತರು ತಮ್ಮ ಅರ್ಜಿಯನ್ನು ಉಪಕೃಷಿ ನಿರ್ದೇಶಕರು/ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಸಲ್ಲಿಸಬೇಕು. ಈ ಯೋಜನೆಯ ಬಗ್ಗೆ ಆಸಕ್ತರು ಹತ್ತಿರದ ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಅಥವಾ ಉಪ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ವಿಬಿ-ಜಿ ರಾಮ್ ಜಿ ಯೋಜನೆ ಸದುಪಯೋಗಪಡೆದುಕೊಳ್ಳಿ'

ರಾಮನಗರ

ಕುಟುಂಬಗಳಿಗೆ ಹೆಚ್ಚಿನ ಉದ್ಯೋಗಾವಕಾಶ ಗ್ರಾಮೀಣಾಭಿವೃದ್ಧಿ ಹಾಗೂ ಜೀವನೋಪಾಯ ಕಲ್ಪಿಸುವ ಉದ್ದೇಶದಿಂದ ಹಲವು ಮಹತ್ವದ ಬದಲಾವಣೆಗಳ ಮೂಲಕ ಜಾರಿಗೊಂಡಿರುವ ವಿಬಿ-ಜಿ ರಾಮ್ ಜಿ ಯೋಜನೆಯ ಸೌಲಭ್ಯಗಳನ್ನು ಪ್ರತಿಯೊಬ್ಬ ಅರ್ಹ ಕುಟುಂಬವು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜೆ. ಬ್ಯಾಡರಹಳ್ಳಿ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಶ್ರೀನಿವಾಸ್ ಅವರು ತಿಳಿಸಿದರು.

ಭಾರತ ಸಾರಥಿ
18/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಜನಸೇವೆಗೆ ಬದಲಾಗಿ ಕಸದ ತೊಟ್ಟಿಯಾದ ಬೆಂಗನೂರು ಹಳೆಯ ಗ್ರಾ.ಪಂ.ಕಟ್ಟಡ

ಬಂಗಾರಪೇಟೆ

ಬಂಗಾರಪೇಟೆ ಕಸಬಾ ವ್ಯಾಪ್ತಿಯ ಬೆಂಗನೂರು ಗ್ರಾಮದ ಹಳೆಯ ಗ್ರಾಮ ಪಂಚಾಯಿತಿ ಕಟ್ಟಡವು ಇಂದು ಸಂಪೂರ್ಣ ನಿರ್ಲಕ್ಷ್ಯಕ್ಕೆ ಒಳಗಾಗಿ ಕಸದ ತೊಟ್ಟಿಯಂತಾಗಿರುವುದು ಗ್ರಾಮಸ್ಥರ ಅಸಮಾಧಾನಕ್ಕೆ ಕಾರಣವಾಗಿದೆ. ಒಂದು ಕಾಲದಲ್ಲಿ ಜನಸೇವೆಯ ಕೇಂದ್ರವಾಗಿದ್ದ ಈ ಕಟ್ಟಡ, ಗ್ರಾಮ ಪಂಚಾಯಿತಿಯ ಮರುವಿಂಗಡಣೆಯ ಬಳಿಕ ಬಳಕೆಯಿಲ್ಲದೆ ಬೀಗ ಬಿದ್ದ ಸ್ಥಿತಿಯಲ್ಲಿ ಉಳಿದಿದೆ.

ಕೆಸರನಹಳ್ಳಿ ಪ್ರತ್ಯೇಕ ಗ್ರಾಮ ಪಂಚಾಯಿತಿಯಾಗಿ ರಚನೆಯಾದ ನಂತರ ಪಂಚಾಯಿತಿ ಆಡಳಿತವನ್ನು ಅಲ್ಲಿಗೆ ಸ್ಥಳಾಂತರಿಸಲಾಯಿತು. ಇದರ ಪರಿಣಾಮವಾಗಿ ಬೆಂಗನೂರಿನ ಹಳೆಯ ಪಂಚಾಯಿತಿ ಕಟ್ಟಡ ಹಲವು ವರ್ಷಗಳಿಂದ ಯಾವುದೇ ಸಾರ್ವಜನಿಕ ಉಪಯೋಗವಿಲ್ಲದೆ ಖಾಲಿ ಬಿದ್ದಿದೆ. ವಿಶಾಲವಾದ ಆವರಣ, ಮೂರು ನಾಲ್ಕು ಕೊಠಡಿಗಳು ಹಾಗೂ ಸಭಾಂಗಣ ಸೇರಿದಂತೆ ಉತ್ತಮ ಮೂಲಸೌಕರ್ಯಗಳನ್ನು ಹೊಂದಿರುವ ಈ ಕಟ್ಟಡವನ್ನು ಸಾರ್ವಜನಿಕ ಸೇವೆಗಳಿಗೆ ಬಳಸುವ ಅವಕಾಶವಿದ್ದರೂ ಸಂಬಂಧಪಟ್ಟ ಇಲಾಖೆಯ ನಿರ್ಲಕ್ಷ್ಯದಿಂದ ಅದು ಸಾಧ್ಯವಾಗಿಲ್ಲ.

ಪ್ರಸ್ತುತ ಕಟ್ಟಡದ ಆವರಣವನ್ನು ಕೆಲವರು ಕಸದ ತೊಟ್ಟಿಯಂತೆ ಬಳಸುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಖಾಲಿ ನೀರಿನ



ಬಾಟಲಿಗಳು, ಪ್ಲಾಸ್ಟಿಕ್ ತ್ಯಾಜ್ಯ ಸೇರಿದಂತೆ ವಿವಿಧ ರೀತಿಯ ಕಸವನ್ನು ಕಟ್ಟಡದ ಆವರಣದಲ್ಲಿ ಎಸೆಯಲಾಗುತ್ತಿದ್ದು, ಸರ್ಕಾರಿ ಆಸ್ತಿಯ ಸ್ವಚ್ಛತೆ ಮತ್ತು ಗೌರವಕ್ಕೆ ಧಕ್ಕೆ ಉಂಟಾಗಿದೆ. ನಿರ್ವಹಣೆಯ ಕೊರತೆಯಿಂದ ಕಟ್ಟಡ ದಿನದಿಂದ ದಿನಕ್ಕೆ ಹಾಳಾಗುತ್ತಿದ್ದು, ಶೀಘ್ರದಲ್ಲೇ ದುರಸ್ತಿಗೂ ಯೋಗ್ಯವಲ್ಲದ ಸ್ಥಿತಿಗೆ ತಲುಪುವ ಭೀತಿ ವ್ಯಕ್ತವಾಗಿದೆ.

ಈ ಕಟ್ಟಡವನ್ನು ಸಾರ್ವಜನಿಕ ಗ್ರಂಥಾಲಯವಾಗಿ ಪರಿವರ್ತಿಸಬೇಕು ಎಂಬುದು ಗ್ರಾಮಸ್ಥರ ಹಲವು ವರ್ಷಗಳ ಬೇಡಿಕೆಯಾಗಿದೆ. ವಿದ್ಯಾರ್ಥಿಗಳು, ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳು ಹಾಗೂ ಓದುಗರಿಗೆ ಅನುಕೂಲವಾಗುವಂತೆ ಗ್ರಂಥಾಲಯ ಆರಂಭಿಸಿದರೆ ಗ್ರಾಮದಲ್ಲಿ ಶೈಕ್ಷಣಿಕ ವಾತಾವರಣ ಮತ್ತಷ್ಟು ಬಲಗೊಳ್ಳಲಿದೆ ಎಂದು ಸ್ಥಳೀಯರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಜೊತೆಗೆ ಮಹಿಳಾ ಸ್ವಸಹಾಯ ಸಂಘಗಳ ಸಭೆಗಳು, ಯುವಕರ ಕೌಶಲಾಭಿವೃದ್ಧಿ ತರಬೇತಿ, ಡಿಜಿಟಲ್ ಸೇವಾ ಕೇಂದ್ರ ಹಾಗೂ ವಿವಿಧ ಸರ್ಕಾರಿ ಕಾರ್ಯಕ್ರಮಗಳಿಗಾಗಿ ಈ ಕಟ್ಟಡವನ್ನು ಬಳಸಬಹುದಾಗಿದೆ ಎಂದು ಅವರು

> ಈ ಕಟ್ಟಡವನ್ನು ಸಾರ್ವಜನಿಕ ಗ್ರಂಥಾಲಯವಾಗಿ ಪರಿವರ್ತಿಸಬೇಕು ಎಂಬುದು ಗ್ರಾಮಸ್ಥರ ಹಲವು ವರ್ಷಗಳ ಬೇಡಿಕೆಯಾಗಿದೆ. ವಿದ್ಯಾರ್ಥಿಗಳು, ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳು ಹಾಗೂ ಓದುಗರಿಗೆ ಅನುಕೂಲವಾಗುವಂತೆ ಗ್ರಂಥಾಲಯ ಆರಂಭಿಸಿದರೆ ಗ್ರಾಮದಲ್ಲಿ ಶೈಕ್ಷಣಿಕ ವಾತಾವರಣ ಮತ್ತಷ್ಟು ಬಲಗೊಳ್ಳಲಿದೆ ಎಂದು ಸ್ಥಳೀಯರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಜೊತೆಗೆ ಮಹಿಳಾ ಸ್ವಸಹಾಯ ಸಂಘಗಳ ಸಭೆಗಳು, ಯುವಕರ ಕೌಶಲಾಭಿವೃದ್ಧಿ ತರಬೇತಿ, ಡಿಜಿಟಲ್ ಸೇವಾ ಕೇಂದ್ರ ಹಾಗೂ ವಿವಿಧ ಸರ್ಕಾರಿ ಕಾರ್ಯಕ್ರಮಗಳಿಗಾಗಿ ಈ ಕಟ್ಟಡವನ್ನು ಬಳಸಬಹುದಾಗಿದೆ.




ಸಲಹೆ ನೀಡಿದ್ದಾರೆ. ಸಾರ್ವಜನಿಕರ ತೆರಿಗೆ ಹಣದಿಂದ ನಿರ್ಮಿಸಲಾದ ಸರ್ಕಾರಿ ಕಟ್ಟಡಗಳು ನಿರುಪಯುಕ್ತವಾಗಿ ಉಳಿಯದೆ ಜನಸೇವೆಗೆ ಬಳಕೆಯಾಗಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ ಕಟ್ಟಡವನ್ನು ಸ್ವಚ್ಛಗೊಳಿಸಿ, ಅಗತ್ಯ ದುರಸ್ತಿ ಹಾಗೂ ನಿರ್ವಹಣೆ ಕೈಗೊಂಡು ಸಾರ್ವಜನಿಕ ಉಪಯೋಗಕ್ಕೆ ಮುಕ್ತಗೊಳಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಒಟ್ಟಾರೆ, ನಿರ್ಲಕ್ಷ್ಯಕ್ಕೆ ಒಳಗಾಗಿರುವ ಬೆಂಗನೂರು ಹಳೆಯ ಗ್ರಾಮ ಪಂಚಾಯಿತಿ ಕಟ್ಟಡ ಮತ್ತೆ ಜನಸೇವೆಯ ಕೇಂದ್ರವಾಗಿ ರೂಪುಗೊಂಡು ಗ್ರಾಮಾಭಿವೃದ್ಧಿಗೆ ನೆರವಾಗಬೇಕು ಎಂಬುದು ಗ್ರಾಮಸ್ಥರ ಬಹುಕಾಲದ ಆಶಯವಾಗಿದೆ.

# 'ಸಮಾಜ ಸೇವೆ, ಯುವ ನಾಯಕತ್ವಕ್ಕೆ ಒತ್ತು'




ದೇವನಹಳ್ಳಿ

ಜೆಸಿಐ ದೇವನಹಳ್ಳಿ ಸಂಸ್ಥೆಯ ವತಿಯಿಂದ ಜೆಸಿಐ ಭಾರತದ ರಾಷ್ಟ್ರೀಯ ಉಪಾಧ್ಯಕ್ಷ ಜೆಸಿ ಜಿತೇಶ್ ಅಧ್ವಾನಿ ಅವರ ಅಧಿಕೃತ ಭೇಟಿ ಹಾಗೂ ಮಲ್ಟಿ ಲೋಮ್ ಸಭೆಯನ್ನು ದೇವನಹಳ್ಳಿಯ ಜೆಡಿಎಸ್ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜೆಸಿ ಜಿತೇಶ್ ಅಧ್ವಾನಿ, ಸಮಾಜ ಸೇವೆಯ ಮೂಲಕ ಯುವಕರಲ್ಲಿ ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಜೆಸಿಐ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಹೇಳಿದರು. ಸಮಾಜ ಸೇವೆಯ ಮನೋಭಾವ ಹೊಂದಿರುವ ಯುವಕರನ್ನು ಗುರುತಿಸಿ, ಅವರಿಗೆ ಸೂಕ್ತ ತರಬೇತಿ ಮತ್ತು ಜವಾಬ್ದಾರಿಗಳನ್ನು ನೀಡುವ ಮೂಲಕ ಸಮಾಜದ ಮುಖ್ಯವಾಹಿನಿಗೆ ತರುವ ಕಾರ್ಯವನ್ನು ಜೆಸಿಐ ಯಶಸ್ವಿಯಾಗಿ ನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಜೆಸಿಐ ದೇವನಹಳ್ಳಿ ಸಂಸ್ಥೆಯ ಅಧ್ಯಕ್ಷ ಸುರೇಶ್ ಕುಮಾರ್ ಡಿ.ಎನ್. ಮಾತನಾಡಿ, ಯುವಜನತೆಗೆ ನಾಯಕತ್ವ, ವ್ಯಕ್ತಿತ್ವ ವಿಕಸನ ಹಾಗೂ ಸಾಮಾಜಿಕ ಜವಾಬ್ದಾರಿಗಳ ಬಗ್ಗೆ ತರಬೇತಿ ಮತ್ತು ಮಾರ್ಗದರ್ಶನ ನೀಡುವ ವಿಶ್ವದ ಪ್ರಮುಖ ಸಂಸ್ಥೆ ಜೆಸಿಐ ಆಗಿದೆ. ಪ್ರತಿಯೊಬ್ಬ ಸದಸ್ಯನಿಗೂ ನಾಯಕತ್ವ ಪ್ರದರ್ಶಿಸಲು ಹಾಗೂ ಜವಾಬ್ದಾರಿಯುತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಲು ಅವಕಾಶ ಕಲ್ಪಿಸುವ ಮೂಲಕ ಉತ್ತಮ ನಾಗರಿಕರನ್ನು ರೂಪಿಸುವ ಕಾರ್ಯವನ್ನು ಸಂಸ್ಥೆ ಮಾಡುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಲಯ 14ರ ಅಧ್ಯಕ್ಷ ಜೆಸಿ ಪ್ರಜ್ವಲ್ ಜೈನ್, ಉಪಾಧ್ಯಕ್ಷ ಜೆಸಿ ಜಗದೀಶ್, ನಿರ್ದೇಶಕ ಜೆಸಿ ಅಕ್ಷಯ್, ವಲಯ 14ರ ಎನ್‌ವಿಪಿ ಟೂರ್ ಸಂಯೋಜಕ ಉಮಾ ಮಹೇಶ್, ಜೆಸಿಐ ದೇವನಹಳ್ಳಿ ಸಂಸ್ಥೆಯ ಕಾರ್ಯದರ್ಶಿ ಶಶಿಕುಮಾರ್, ಸಂಸ್ಥೆಯ ಪೂರ್ವಾಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಹಾಗೂ ವಿವಿಧ ಸ್ಥಳೀಯ ಜೆಸಿಐ ಸಂಸ್ಥೆಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

# 'ಸ್ವರ್ಣ ಬಿಂದು ಪ್ರಾಶನ ಪರಿಣಾಮಕಾರಿ'

ಕೊರಟಗೆರೆ

ಮಕ್ಕಳ ಆರೋಗ್ಯ, ರೋಗನಿರೋಧಕ ಶಕ್ತಿ ಹಾಗೂ ಜ್ಞಾಪಕಶಕ್ತಿ ವೃದ್ಧಿಗೆ ಸ್ವರ್ಣ ಬಿಂದು ಪ್ರಾಶನ ಪರಿಣಾಮಕಾರಿಯಾಗಿದೆ ಎಂದು ವೈದ್ಯರಾದ ಡಾ. ಆತ್ಮರಾಮ್ ಎಂ. ಶೆಟ್ಟಿ ತಿಳಿಸಿದರು.

ಪಟ್ಟಣದ ತಾರಾನಾಥ ಚಿಕಿತ್ಸಾಲಯದಲ್ಲಿ ಮಕ್ಕಳ ತಜ್ಞ ಡಾ. ಮಲ್ಲಿಕಾರ್ಜುನ್ ಅವರ ಮಾರ್ಗದರ್ಶನದಲ್ಲಿ ಪುಷ್ಯ ನಕ್ಷತ್ರದ ಅಂಗವಾಗಿ ಮಕ್ಕಳಿಗೆ ಸ್ವರ್ಣ ಬಿಂದು ಪ್ರಾಶನ ನೀಡುವ ಕಾರ್ಯಕ್ರಮವನ್ನು ಡಾ. ಲಕ್ಷ್ಮೀಕಾಂತ್ ಹಾಗೂ ಡಾ. ಆತ್ಮರಾಮ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಆತ್ಮರಾಮ್, ಸ್ವರ್ಣ ಬಿಂದು ಪ್ರಾಶನವನ್ನು ನವಜಾತ ಶಿಶುಗಳಿಂದ 16 ವರ್ಷದೊಳಗಿನ ಮಕ್ಕಳಿಗೆ ಆಯುರ್ವೇದದಲ್ಲಿ ಶಿಫಾರಸು ಮಾಡಲಾಗಿದೆ. ಇದು ಚಿನ್ನದ ಭಸ್ಮ, ಜೇನುತುಪ್ಪ, ಹಸುವಿನ ತುಪ್ಪ ಹಾಗೂ ಬ್ರಾಹ್ಮಿ, ಅಶ್ವಗಂಧ ಸೇರಿದಂತೆ ಔಷಧೀಯ ಗಿಡಮೂಲಿಕೆಗಳ ಮಿಶ್ರಣವಾಗಿದ್ದು, ಮಕ್ಕಳ ರೋಗನಿರೋಧಕ ಶಕ್ತಿ ಮತ್ತು ಜ್ಞಾಪಕಶಕ್ತಿಯನ್ನು ವೃದ್ಧಿಸಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಪ್ರತಿ ತಿಂಗಳು ಬರುವ ಪುಷ್ಯ ನಕ್ಷತ್ರದ ದಿನದಂದು ಸ್ವರ್ಣ ಬಿಂದು ಪ್ರಾಶನ ನೀಡುವುದು ವಿಶೇಷ ಮಹತ್ವ ಹೊಂದಿದೆ. ತಾರಾನಾಥ ಚಿಕಿತ್ಸಾಲಯದಲ್ಲಿ ಪ್ರತಿ ತಿಂಗಳು ಪುಷ್ಯ ನಕ್ಷತ್ರದ ದಿನ ಮಕ್ಕಳಿಗೆ ಈ ಸೇವೆ ಲಭ್ಯವಿರಲಿದೆ ಎಂದು



ಮಾಹಿತಿ ನೀಡಿದರು.

ಡಾ. ಲಕ್ಷ್ಮೀಕಾಂತ್ ಮಾತನಾಡಿ, ಮಕ್ಕಳಲ್ಲಿ ರೋಗನಿರೋಧಕ ಶಕ್ತಿ ಹೆಚ್ಚಿಸಲು ಹಾಗೂ ಅವರ ಸಮಗ್ರ ಬೆಳವಣಿಗೆಗೆ ಸ್ವರ್ಣ ಬಿಂದು ಪ್ರಾಶನ ನೆರವಾಗಲಿದೆ. ಇದರಿಂದ ಏಕಾಗ್ರತೆ, ನೆನಪಿನ ಶಕ್ತಿ ಮತ್ತು ಕಲಿಕೆಯಲ್ಲಿ ಪ್ರಗತಿ ಸಾಧಿಸಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಆಯುರ್ವೇದದಲ್ಲಿ ಉಲ್ಲೇಖಿಸಿರುವಂತೆ ಸ್ವರ್ಣ ಬಿಂದು ಪ್ರಾಶನವು ಮಕ್ಕಳ ಆರೋಗ್ಯ ಕಾಪಾಡಲು, ದೈಹಿಕ ಬೆಳವಣಿಗೆಗೆ ನೆರವಾಗಲು ಹಾಗೂ ಕೆಲವು ಆರೋಗ್ಯ ಸಮಸ್ಯೆಗಳ ತಡೆಗಟ್ಟುವಿಕೆಗೆ ಸಹಕಾರಿ ಎಂದು ಪರಿಗಣಿಸಲಾಗಿದೆ. ಆದ್ದರಿಂದ ಆಸಕ್ತ ಪೋಷಕರು ಪ್ರತಿ ತಿಂಗಳು ಪುಷ್ಯ ನಕ್ಷತ್ರದ ದಿನ ತಮ್ಮ ಮಕ್ಕಳಿಗೆ ಸ್ವರ್ಣ ಬಿಂದು ಪ್ರಾಶನ ಹಾಕಿಸಿಕೊಳ್ಳುವಂತೆ ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಡಾ. ಆತ್ಮಿಕ ಸೇರಿದಂತೆ ಚಿಕಿತ್ಸಾಲಯದ ಸಿಬ್ಬಂದಿ ಉಪಸ್ಥಿತರಿದ್ದರು.

# ಕರಾಮುವಿ ಪ್ರವೇಶಾತಿಗೆ ಅರ್ಜಿ ಆಹ್ವಾನ

ರಾಮನಗರ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು 2026–27ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯ ಯುಜಿಸಿ ಅನುಮೋದಿತ ಹಾಗೂ ನ್ಯಾಕ್ ಎ+ ಮಾನ್ಯತೆಯೊಂದಿಗೆ ವಿವಿಧ ಶಿಕ್ಷಣ ಕ್ರಮಗಳ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸ್ನಾತಕ/ಸ್ನಾತಕೋತ್ತರ ಪದವಿಗಳಾದ ಬಿ.ಎ., ಬಿ.ಕಾಂ., ಬಿ.ಎಸ್ಸಿ., ಬಿ.ಬಿ.ಎ., ಬಿ.ಸಿ.ಎ., ಬಿ.ಎಸ್.ಡಬ್ಲ್ಯೂ., ಬಿ.ಲಿಬ್.ಐ.ಎಸ್ಸಿ., ಎಂ.ಎ., ಎಂ.ಕಾಂ., ಎಂ.ಬಿ.ಎ., ಎಂ.ಸಿ.ಎ., ಎಂ.ಎಸ್ಸಿ., ಎಂ.ಎಸ್.ಡಬ್ಲ್ಯೂ., ಎಂ.ಲಿಬ್.ಐ.ಎಸ್.ಸಿ., ಪಿ.ಜಿ. ಸರ್ಟಿಫಿಕೇಟ್ ಪ್ರೋಗ್ರಾಮ್, ಡಿಪ್ಲೊಮಾ ಪ್ರೋಗ್ರಾಮ್ ಮತ್ತು ಸರ್ಟಿಫಿಕೇಟ್ ಪ್ರೋಗ್ರಾಮ್‌ಗಳಿಗೆ ಪ್ರವೇಶಾತಿಯು ಈಗಾಗಲೇ ಪ್ರಾರಂಭವಾಗಿದ್ದು, ಪ್ರವೇಶಾತಿ ಬಯಸುವ ವಿದ್ಯಾರ್ಥಿಗಳು ಕರಾಮುವಿಯ ಅಧಿಕೃತ ವೆಬ್‌ಸೈಟ್ www.ksoumysuru.ac.in ನಲ್ಲಿ ಆನ್‌ಲೈನ್ ಅಡ್ಮಿಷನ್ ಪೋರ್ಟಲ್ ಮುಖಾಂತರ ಪ್ರವೇಶಾತಿ ಅರ್ಜಿಯನ್ನು ಭರ್ತಿ ಮಾಡಿ, ಅಗತ್ಯ ದಾಖಲೆಗಳನ್ನು ಕರಾಮುವಿ ರಾಮನಗರ ಪ್ರಾದೇಶಿಕ ಕೇಂದ್ರಕ್ಕೆ ಸಲ್ಲಿಸಿ ಪ್ರವೇಶಾತಿ ಪಡೆಯಬಹುದಾಗಿರುತ್ತದೆ.

ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ರವೇಶಾತಿ ಅಂತಿಮ ದಿನಾಂಕದವರೆಗೂ ಎಲ್ಲಾ ಭಾನುವಾರಗಳಂದು ಹಾಗೂ ಎರಡನೇ ಮತ್ತು ನಾಲ್ಕನೇ ಶನಿವಾರಗಳಂದು ರಾಮನಗರ ಪ್ರಾದೇಶಿಕ ಕೇಂದ್ರ ಕಚೇರಿಯು ಎಂದಿನಂತೆ ಕಾರ್ಯ ನಿರ್ವಹಿಸುತ್ತದೆ.

ಬಿ.ಎಡ್ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು 2026ರ ಆಗಸ್ಟ್ 8 ಅಂತಿಮ ದಿನಾಂಕವಾಗಿದ್ದು, ಸಿಇಟಿ ಪ್ರವೇಶ ಪರೀಕ್ಷೆಯನ್ನು ವಿವಿಯು ನಿಗದಿಪಡಿಸುವ ಕೇಂದ್ರಗಳಲ್ಲಿ 2026ರ ಆಗಸ್ಟ್ 16ರ ಭಾನುವಾರದಂದು ನಡೆಸಲಾಗುವುದು.

ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಅರ್ಹ ಮಹಿಳಾ ವಿದ್ಯಾರ್ಥಿಗಳಿಗೆ, ಡಿಫೆನ್ಸ್ ಹಾಗೂ ಎಕ್ಸ್ ಸರ್ವಿಸ್‌ಮನ್ ವಿದ್ಯಾರ್ಥಿಗಳಿಗೆ, ಆಟೋ ಮತ್ತು ಕ್ಯಾಬ್ ಚಾಲಕರು ಮತ್ತು ಅವರ ಪತಿ/ಪತ್ನಿ ಹಾಗೂ ಇಬ್ಬರು ಮಕ್ಕಳಿಗೆ ಮತ್ತು ಕೆಎಸ್‌ಆರ್‌ಟಿಸಿ/ಬಿಎಂಟಿಸಿ/ಎನ್‌ಡಬ್ಲ್ಯೂ ಕೆಆರ್‌ಟಿಸಿ/ಕೆಕೆಆರ್‌ಟಿಸಿ ಯಲ್ಲಿನ ನೌಕರರುಗಳಿಗೆ ಬೋಧನಾ ಶುಲ್ಕದಲ್ಲಿ ಮಾತ್ರ ಶೇ.10% ರಷ್ಟು ರಿಯಾಯಿತಿ ಇರುತ್ತದೆ (ಯುಜಿ ಮತ್ತು ಪಿಜಿ ಪದವಿ ಕಾರ್ಯಕ್ರಮಗಳಿಗೆ ಮಾತ್ರ), ಕೋವಿಡ್–2019 ಸಾಂಕ್ರಾಮಿಕ ರೋಗದಿಂದ ಮೃತರಾದ ಆ ತಂದೆ/ತಾಯಿಯ ಮಕ್ಕಳಿಗೆ ಅವರು ಅರ್ಹತೆ ಹೊಂದಿ ಪ್ರವೇಶ ಬಯಸುವ ಶಿಕ್ಷಣಕ್ರಮಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ಶೇ.50 ಕ್ಕೂ ಹೆಚ್ಚಿನ ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳಿಗೆ (ಬಿ.ಎಡ್ ಮತ್ತು ಎಂ.ಬಿ.ಎ ಕಾರ್ಯಕ್ರಮಗಳಿಗೆ ಹೊರತುಪಡಿಸಿ) ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ತೃತೀಯ ಲಿಂಗ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳನ್ನು ಒದಗಿಸಿ ಸರ್ಕಾರದ ಎಸ್‌ಎಸ್‌ಪಿ ಮುಖಾಂತರ ವಿದ್ಯಾರ್ಥಿ ವೇತನ ಪಡೆಯಬಹುದು.

ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ ಮಂಜೂರಾಗುವ ಶುಲ್ಕ ಪಾವತಿ ಸೌಲಭ್ಯದಡಿ ಕ.ರಾ.ಮು.ವಿ.ನಿಲಯದ ವಿವಿಧ ಕೋರ್ಸ್‌ಗಳಿಗೆ ಸೇರ ಬಯಸುವ ಅರ್ಹ ಅಲ್ಪ ಸಂಖ್ಯಾತ ಅಭ್ಯರ್ಥಿಗಳು (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬುದ್ಧಿಸ್ಟ್ ಮತ್ತು ಪಾರ್ಸಿ) https://dom.karnataka.gov.in ನಲ್ಲಿರುವ ಕೆಎಸ್‌ಒಯು ಪ್ರವೇಶಾತಿ ಪೋರ್ಟಲ್ ಲಿಂಕ್ https://minority.ksouportal.com/ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಜು. 31 ಅಂತಿಮ ದಿನಾಂಕವಾಗಿದ್ದು, ಅಗತ್ಯ ದಾಖಲೆಗಳೊಂದಿಗೆ ಪ್ರಾದೇಶಿಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ಪ್ರಾದೇಶಿಕ ನಿರ್ದೇಶಕರು, ಕರಾಮುವಿ ರಾಮನಗರ ಪ್ರಾದೇಶಿಕ ಕೇಂದ್ರ, ನಂ. 103, ಇ ಬ್ಲಾಕ್, ಶಾಂತಿನಿಕೇತನ ಸಮೂಹ ಶಿಕ್ಷಣ ಸಂಸ್ಥೆ, ಬಿ.ಎಂ.ರಸ್ತೆ, ವಿವೇಕಾನಂದನಗರ, ರಾಮನಗರ, ಬೆಂಗಳೂರು ದಕ್ಷಿಣ ಜಿಲ್ಲೆ.–562159. ದೂರವಾಣಿ ಸಂಖ್ಯೆ:– 9980740048, 8618501602, 9036366498, 9743184848 ಹಾಗೂ 9900356226 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಾದೇಶಿಕ

# 'ಬಿಎಲ್‌ಒಗಳ ಕಾರ್ಯ ಶ್ಲಾಘನೀಯ'



ತುಮಕೂರು

ರಾಜ್ಯ ಚುನಾವಣಾ ಆಯೋಗ ನಡೆಸುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯವು ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಉತ್ತಮ ರೀತಿಯಲ್ಲಿ ನಡೆಯುತ್ತಿದ್ದು, ಶೇ.99.72ರಷ್ಟು ಮತದಾರರಿಗೆ ಎನ್ಯೂಮರೇಷನ್ ನಮೂನೆಗಳನ್ನು ವಿತರಿಸಿರುವ ಬಿಎಲ್‌ಒಗಳು ಉತ್ತಮ ಕೆಲಸ ನಿರ್ವಹಿಸಿದ್ದಾರೆ ಎಂದು ಮಾಜಿ ಶಾಸಕ ಡಾ. ಎಸ್. ರಫೀಕ್ ಅಹಮದ್ ಮೆಚ್ಚುಗೆ ವ್ಯಕ್ತಪಡಿಸಿದರು.

ನಗರದ 7ನೇ ವಾರ್ಡ್‌ನ ಜಿ.ಸಿ.ಆರ್. ಕಾಲೋನಿಯ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿ ಎಸ್‌ಐಆರ್ ಪ್ರಕ್ರಿಯೆಯನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಆಯೋಗದಿಂದ ನೇಮಕಗೊಂಡಿರುವ ಬಿಎಲ್‌ಒಗಳು ಮನೆ ಮನೆಗೆ ತೆರಳಿ ನಮೂನೆಗಳನ್ನು ವಿತರಿಸುವುದರ ಜೊತೆಗೆ ಅವುಗಳನ್ನು ಭರ್ತಿ ಮಾಡುವಲ್ಲಿಯೂ ಮತದಾರರಿಗೆ ಸಹಕಾರ ನೀಡುತ್ತಿದ್ದಾರೆ ಎಂದು ಹೇಳಿದರು.

ಜೂನ್ 29ರಿಂದ ಆರಂಭವಾದ ಎಸ್‌ಐಆರ್ ಪ್ರಕ್ರಿಯೆ ತುಮಕೂರು ನಗರ 132ನೇ ವಿಧಾನಸಭಾ ಕ್ಷೇತ್ರದಲ್ಲಿ ತ್ವರಿತಗತಿಯಲ್ಲಿ ನಡೆಯುತ್ತಿದೆ. ಕ್ಷೇತ್ರದಲ್ಲಿ ಒಟ್ಟು 247 ಮತಗಟ್ಟೆಗಳಿದ್ದು, 2,83,800 ಮತದಾರರಿದ್ದಾರೆ. ಈ ಪೈಕಿ ಈಗಾಗಲೇ ಸುಮಾರು 2.73 ಲಕ್ಷ ಎನ್ಯೂಮರೇಷನ್ ನಮೂನೆಗಳನ್ನು ವಿತರಿಸಲಾಗಿದ್ದು, ಶೇ.99.72ರಷ್ಟು ಮತದಾರರಿಗೆ ನಮೂನೆಗಳು ತಲುಪಿವೆ. ಈಗಾಗಲೇ 80,500ಕ್ಕೂ ಹೆಚ್ಚು ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದ್ದು, ಉಳಿದವುಗಳ ಅಪ್‌ಲೋಡ್ ಕಾರ್ಯ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಒಬ್ಬ ಅಧಿಕಾರಿ ದಿನಕ್ಕೆ ಸುಮಾರು 45ರಿಂದ 50 ನಮೂನೆಗಳನ್ನು ಮಾತ್ರ ಡಿಜಿಟಲೀಕರಣಗೊಳಿಸಲು ಸಾಧ್ಯವಾಗುತ್ತಿರುವ ಹಿನ್ನೆಲೆಯಲ್ಲಿ ಚುನಾವಣಾ ಆಯೋಗವು ನಮೂನೆ ಸಲ್ಲಿಕೆಯ ಕೊನೆಯ ದಿನಾಂಕವನ್ನು ಜುಲೈ 30ರಿಂದ ಆಗಸ್ಟ್ 8ರವರೆಗೆ ವಿಸ್ತರಿಸಿದೆ. ಈ ಅವಧಿಯೊಳಗೆ ಮತದಾರರು ತಮ್ಮ ನಮೂನೆಗಳನ್ನು ಬಿಎಲ್‌ಒಗಳಿಗೆ ಸಲ್ಲಿಸಿ, ಸ್ವೀಕೃತಿ ಪತ್ರ ಪಡೆದು ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು. ನಂತರ ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆಯಾಗಿದೆಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಸಲಹೆ ನೀಡಿದರು.

ಎನ್ಯೂಮರೇಷನ್ ನಮೂನೆ ಭರ್ತಿ ಮಾಡುವಾಗ 2002ರ ಮತದಾರರ ಪಟ್ಟಿಯ ವಿವರಗಳು ಲಭ್ಯವಿದ್ದರೆ ಅವುಗಳನ್ನು ನಮೂದಿಸಬಹುದು. ಇಲ್ಲದಿದ್ದರೆ ಪ್ರಸ್ತುತ ಮಾಹಿತಿಯನ್ನು ಭರ್ತಿ ಮಾಡಿ ಸಹಿಯೊಂದಿಗೆ ಬಿಎಲ್‌ಒಗಳಿಗೆ ಸಲ್ಲಿಸಬೇಕು. ಕರಡು ಪಟ್ಟಿಯ ಪ್ರಕಟಣೆಯ ನಂತರ ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಅಂತಿಮ ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸುವ ಪ್ರಕ್ರಿಯೆ ನಡೆಯಲಿದೆ ಎಂದು ಹೇಳಿದರು.

ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಇನ್ನೂ ಸುಮಾರು 3,000 ಮತದಾರರಿಗೆ ಮಾತ್ರ ಎನ್ಯೂಮರೇಷನ್ ನಮೂನೆ ವಿತರಿಸುವುದು ಬಾಕಿಯಿದೆ. ಮನೆ ಬದಲಾಯಿಸಿರುವವರು ಹಾಗೂ ಮೃತಪಟ್ಟಿರುವ ಮತದಾರರ ಮಾಹಿತಿಯನ್ನು ದೃಢೀಕರಿಸಲು ಸ್ವಲ್ಪ ಸಮಯ ಬೇಕಾಗುತ್ತದೆ. ಆದರೂ ಅಧಿಕಾರಿಗಳು ಶೇ.100ರಷ್ಟು ಗುರಿ ಸಾಧಿಸುವ ವಿಶ್ವಾಸವಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಬಿಎಲ್‌ಒ ದೀಪಿಕಾ, ಬಿಎಲ್‌ಎ–2ಗಳಾದ ಜಾಕೀರ್ ಪಾಷ, ಹುಸ್ಮಾನ್ ಖಾನ್, ಫೈರೋಜ್, ಫಾರೂಕ್, ಮೆಹಬೂಬ್ ಪಾಷ, ಹಸ್ಮತ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೋಟ್ಪಾ ಮತ್ತು ಆಹಾರ ಸುರಕ್ಷತೆ ಕಾಯ್ದೆ ಉಲ್ಲಂಘನೆ ವಿರುದ್ಧ ಜಂಟಿ ಕಾರ್ಯಾಚರಣೆ

ಕೋಲಾರ

ಸಾರ್ವಜನಿಕರ ಆರೋಗ್ಯ ರಕ್ಷಣೆ ಹಾಗೂ ಆಹಾರ ಸುರಕ್ಷತಾ ನಿಯಮಗಳ ಕಟ್ಟುನಿಟ್ಟಿನ ಅನುಷ್ಠಾನದ ಉದ್ದೇಶದಿಂದ ಕೋಲಾರ ನಗರಸಭೆ ವ್ಯಾಪ್ತಿಯಲ್ಲಿ ಕೋಟ್ಪಾ–2003 (ತಂಬಾಕು ಉತ್ಪನ್ನಗಳ ನಿಯಂತ್ರಣ) ಕಾಯ್ದೆ ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಉಲ್ಲಂಘನೆಗಳ ವಿರುದ್ಧ ವಿವಿಧ ಇಲಾಖೆಗಳ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ, ಉಲ್ಲಂಘನೆ ಮಾಡಿದವರ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಸೂಲು ಮಾಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ತಂಬಾಕು ನಿಯಂತ್ರಣ ಘಟಕ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಸಮನ್ವಯದಲ್ಲಿ ಈ ಅನಿರೀಕ್ಷಿತ ತಪಾಸಣೆ ನಡೆಸಲಾಯಿತು. ನಗರದ ವಿವಿಧ ಭಾಗಗಳಲ್ಲಿನ ಅಂಗಡಿ ಹಾಗೂ ಆಹಾರ ಮಾರಾಟ ಕೇಂದ್ರಗಳನ್ನು ಪರಿಶೀಲಿಸಿದ ಅಧಿಕಾರಿಗಳ ತಂಡ, ನಿಯಮ ಉಲ್ಲಂಘಿಸಿ ವ್ಯಾಪಾರ ನಡೆಸುತ್ತಿದ್ದವರ ವಿರುದ್ಧ ಕಾನೂನು ಕ್ರಮ ಕೈಗೊಂಡಿತು.

ಕಾರ್ಯಾಚರಣೆಯ ವೇಳೆ ದಂಡ ವಿಧಿಸುವುದರ ಜೊತೆಗೆ ಕಳಪೆ ಹಾಗೂ ಕಲಬೆರಕೆ ಆಹಾರ ಸೇವನೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳು, ತಂಬಾಕು ಉತ್ಪನ್ನಗಳ ದುಷ್ಪರಿಣಾಮಗಳು ಹಾಗೂ ಆಹಾರ ಸುರಕ್ಷತಾ ನಿಯಮಗಳನ್ನು ಪಾಲಿಸುವ ಅಗತ್ಯದ ಕುರಿತು ವ್ಯಾಪಾರಸ್ಥರು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಸ್ವಚ್ಛತೆ ಕಾಪಾಡುವುದು, ಗುಣಮಟ್ಟದ ಆಹಾರವನ್ನು ಮಾತ್ರ ಮಾರಾಟ ಮಾಡುವುದು ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅಧಿಕಾರಿಗಳು ಸೂಚನೆ ನೀಡಿದರು.

ಈ ಕಾರ್ಯಾಚರಣೆಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪ್ರಭು ಎನ್. ಬಡಿಗೇರ್, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಂಕಿತ ಅಧಿಕಾರಿ ಡಾ. ರಾಕೇಶ್, ಪೊಲೀಸ್ ಇಲಾಖೆಯ ಸಹಾಯಕ ಪೊಲೀಸ್ ನಿರೀಕ್ಷಕ ವಿದ್ಯಾಧರ್, ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ಜಿಲ್ಲಾ ಸಲಹೆಗಾರ ಮಹಮ್ಮದ್ ಪಿ., ಆಪ್ತ ಸಮಾಲೋಚಕ ಮಂಜುನಾಥ್ ಜಿ.ಎನ್. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿದ್ದರು.


# ನ್ಯಾಯಾಂಗ ಬಡಾವಣೆ ರೈಲ್ವೆ ಅಂಡರ್‌ಪಾಸ್‌ಗೆ ಹೊಸ ಮೆರುಗು

ಬೆಂಗಳೂರು

ಸುರಕ್ಷಿತ ಹಾಗೂ ಸುಗಮ ಪಾದಚಾರಿ ಸಂಚಾರಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆ ನ್ಯಾಯಾಂಗ ಬಡಾವಣೆಯ ರೈಲ್ವೆ ಅಂಡರ್‌ಪಾಸ್‌ನಲ್ಲಿ ವಿಶೇಷ ಸ್ವಚ್ಛತಾ ಮತ್ತು ಸೌಂದರ್ಯೀಕರಣ ಅಭಿಯಾನ ಕೈಗೊಂಡಿದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ಮಾರ್ಗದರ್ಶನದಲ್ಲಿ ಹಾಗೂ ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ನೇತೃತ್ವದಲ್ಲಿ "ಸುರಕ್ಷಿತ ಪಾದಚಾರಿ ಮಾರ್ಗ" ಅಭಿಯಾನದ ಅಂಗವಾಗಿ ಈ ಕಾರ್ಯಾಚರಣೆ ನಡೆಯಿತು.

ಯಲಹಂಕ ಕ್ಷೇತ್ರದ ಶಾಸಕ ಎಸ್.ಆರ್. ವಿಶ್ವನಾಥ್ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್, ಬ್ಲಾಕ್ ಸ್ಪಾಟ್ ನಿರ್ಮೂಲನೆ ಹಾಗೂ



ನಗರ ಸೌಂದರ್ಯೀಕರಣಕ್ಕೆ ಆದ್ಯತೆ ನೀಡಲಾಗುತ್ತಿದ್ದು, ನಗರವನ್ನು ಸ್ವಚ್ಛ ಹಾಗೂ ಸುಂದರವಾಗಿಡಲು ಸಾರ್ವಜನಿಕರು ಸಹ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ರೈಲ್ವೆ ಹಳಿ ದಾಟುವ ಅಪಾಯವನ್ನು ತಪ್ಪಿಸಿ ಪಾದಚಾರಿಗಳು ಅಂಡರ್‌ಪಾಸ್ ಬಳಕೆ ಮಾಡುವಂತೆ ಉತ್ತೇಜಿಸುವ ಉದ್ದೇಶದಿಂದ ಈ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗಿದೆ. ಅಂಡರ್‌ಪಾಸ್‌ನಲ್ಲಿನ ಪಾದಚಾರಿ ಮಾರ್ಗವನ್ನು ಮರುಸ್ವಾಧೀನಪಡಿಸಿಕೊಂಡು ಸಾರ್ವಜನಿಕ ಬಳಕೆಗೆ ಅನುಕೂಲವಾಗುವಂತೆ ಅಭಿವೃದ್ಧಿಪಡಿಸಲಾಗುತ್ತಿದೆ.

ನ್ಯಾಯಾಂಗ ಬಡಾವಣೆ ನಿವಾಸಿಗಳು ಬಳಸುವ ಸರ್ವೀಸ್ ರಸ್ತೆಯನ್ನು ಸ್ವಚ್ಛಗೊಳಿಸಲಾಗಿದ್ದು, ಸುಮಾರು ಒಂದು ಕಿಲೋಮೀಟರ್ ಉದ್ದದ ಪಾದಚಾರಿ ಮಾರ್ಗ ಹಾಗೂ 500 ಮೀಟರ್ ಉದ್ದದ ರೈಲ್ವೆ ಕ್ರಾಸಿಂಗ್ ಸಂಪರ್ಕಿತ ಪಾದಚಾರಿ ಮಾರ್ಗವನ್ನು ಅಭಿವೃದ್ಧಿಪಡಿಸುವ ಯೋಜನೆ ರೂಪಿಸಲಾಗಿದೆ.

ನಗರದ ಅಂಡರ್‌ಪಾಸ್‌ಗಳು ಮತ್ತು ಸೇತುವೆಗಳ ಕೆಳಭಾಗದಲ್ಲಿ ಕಸ ಹಾಕುವುದು, ಪೋಸ್ಟರ್ ಅಂಟಿಸುವುದು ಹಾಗೂ ಅಸ್ವಚ್ಛತೆ ತಡೆಯಲು ವಿಶೇಷ ಸೌಂದರ್ಯೀಕರಣ ಕಾರ್ಯಕ್ರಮವನ್ನು ಪಾಲಿಕೆ ಆರಂಭಿಸಿದೆ.

ಅಂಡರ್‌ಪಾಸ್‌ನಲ್ಲಿ ಈಗಾಗಲೇ ಸಮರ್ಪಕ ಬೆಳಕಿನ ವ್ಯವಸ್ಥೆ ಕಲ್ಪಿಸಲಾಗಿದ್ದು, ಮಳೆಗಾಲದ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಎರಡೂ ಬದಿಗಳಲ್ಲಿ ನೀರಿನ ಮಟ್ಟ ಸೂಚಕಗಳನ್ನು ಅಳವಡಿಸಲಾಗುತ್ತಿದೆ. ಜೊತೆಗೆ ಮೂರು ಹಸಿರು ಬಣ್ಣಗಳ ಛಾಯೆಗಳಲ್ಲಿ ಅಂಡರ್‌ಪಾಸ್‌ಗೆ ಆಕರ್ಷಕ ರೂಪ ನೀಡುವ ಕಾಮಗಾರಿ ನಡೆಯುತ್ತಿದೆ.

ಸ್ವಚ್ಛತಾ ಅಭಿಯಾನದಲ್ಲಿ ಮಾನ್ಯತಾ ಟೆಕ್ ಪಾರ್ಕ್‌ನ ಖಾಸಗಿ ಸಂಸ್ಥೆಯ 150ಕ್ಕೂ ಹೆಚ್ಚು ಸ್ವಯಂಸೇವಕರು ಭಾಗವಹಿಸಿ ಸ್ವಚ್ಛತಾ ಕಾರ್ಯದಲ್ಲಿ ಕೈಜೋಡಿಸಿದರು.

ನಗರದಲ್ಲಿ ಪಾದಚಾರಿ ಸ್ನೇಹಿ ಮೂಲಸೌಕರ್ಯ ಅಭಿವೃದ್ಧಿಪಡಿಸಿ, ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ಸ್ವಚ್ಛ ವಾತಾವರಣ ಕಲ್ಪಿಸುವ ಉದ್ದೇಶದಿಂದ ಇಂತಹ ಅಭಿಯಾನಗಳನ್ನು ಮುಂದುವರಿಸಲಾಗುವುದು ಎಂದು ಪಾಲಿಕೆ ತಿಳಿಸಿದೆ.

## ಮಕ್ಕಳಿಗೆ ಅಸಾಧಾರಣ ಜಿಲ್ಲಾ ಮಟ್ಟದ ಪ್ರಶಸ್ತಿ: ಅರ್ಜಿ ಆಹ್ವಾನ

ತುಮಕೂರು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಯಾವುದೇ ಕ್ಷೇತ್ರದಲ್ಲಿ ನಾವೀನ್ಯತೆ, ತಾರ್ಕಿಕಸಾಧನೆ, ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿರುವ 5 ರಿಂದ 18 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಪ್ರತಿ ಕ್ಷೇತ್ರದಲ್ಲಿ ಇಬ್ಬರಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಯನ್ನು ನೀಡಲು ಅರ್ಜಿ ಆಹ್ವಾನಿಸಿದೆ.

ಪ್ರಶಸ್ತಿಯು 10,000 ರೂ.ಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗೆ ಆಯ್ಕೆಯಾಗುವ ಮಕ್ಕಳು ಅಪ್ರತಿಮ ಪ್ರತಿಭೆಯುಳ್ಳವರಾಗಿಬೇಕು. ಅರ್ಜಿಯನ್ನು ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ಅರ್ಜಿಯೊಂದಿಗೆ ಮಕ್ಕಳ ವಯಸ್ಸಿನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು.

ಪ್ರತಿಭೆ ಹೊಂದಿರುವ ಬಗ್ಗೆ ಪ್ರಮುಖ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುವ ಪತ್ರಿಕಾ ತುಣುಕು/ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. ಅಂತರಾಷ್ಟ್ರೀಯ/ ರಾಷ್ಟ್ರೀಯ/ರಾಜ್ಯ ಮಟ್ಟದಲ್ಲಿ ಭಾಗವಹಿಸಿರುವ/ ಪ್ರಶಸ್ತಿ ಪಡೆದಿರುವ ಮಾಹಿತಿಯನ್ನು ಲಗತ್ತಿಸಬೇಕು. ಹಿಂದಿನ ವರ್ಷಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ಪಡೆದ ಮಕ್ಕಳಿಗೆ ಪುನಃ ಪ್ರಶಸ್ತಿ ನೀಡಲು ಅವಕಾಶವಿರುವುದಿಲ್ಲ. ಸಾಧಿಸಿರುವ ಪ್ರತಿಭೆಯನ್ನು ಸಮರ್ಥಿಸಲು ಪೂರಕ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.

ಭರ್ತಿ ಮಾಡಿದ ಅರ್ಜಿಯನ್ನು ಜುಲೈ 31ರೊಳಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಆವರಣ, ಎಂ.ಜಿ.ರಸ್ತೆ, ತುಮಕೂರು ಇವರಿಗೆ ಸಲ್ಲಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಡಾ: ಎಸ್. ಸಿದ್ದರಾಮಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊಯ್ಸಳ, ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ: ಅರ್ಜಿಆಹ್ವಾನ

ತುಮಕೂರು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಮಕ್ಕಳ ದಿನಾಚರಣೆ–2026ರ ಅಂಗವಾಗಿ ಬಾಲಕರಿಗೆ “ಹೊಯ್ಸಳ” ಮತ್ತು ಬಾಲಕಿಯರಿಗೆ “ಕೆಳದಿ ಚೆನ್ನಮ್ಮ” ಶೌರ್ಯ ಪ್ರಶಸ್ತಿ ಪ್ರದಾನ ಮಾಡಲು ಅರ್ಹರಿಂದ ಅರ್ಜಿ ಆಹ್ವಾನಿಸಿದೆ.

ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6–18 ವರ್ಷದೊಳಗಿನ ಮಕ್ಕಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಸಾಹಸ ಪ್ರದರ್ಶಿಸಿದ ಪ್ರಕರಣವು 2025ರ ಆಗಸ್ಟ್ 1 ರಿಂದ 2026ರ ಜುಲೈ 31ರೊಳಗೆ ನಡೆದಿರಬೇಕು. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ 10,000 ರೂ.ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುವುದು.

ಅರ್ಜಿ ನಮೂನೆಯನ್ನು ಆಯಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ತುಮಕೂರು/ಮಧುಗಿರಿ ಶೈಕ್ಷಣಿಕ ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆ, ಯುವಜನ ಸೇವೆ ಮತ್ತು ಸಬಲೀಕರಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಪಡೆದು ಕನ್ನಡದಲ್ಲಿಯೇ ಭರ್ತಿ ಮಾಡಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಆವರಣ, ಎಂ.ಜಿ.ರಸ್ತೆ, ತುಮಕೂರು ಇವರಿಗೆ ಆಗಸ್ಟ್ 20ರೊಳಗೆ ಸಲ್ಲಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಡಾ: ಎಸ್. ಸಿದ್ದರಾಮಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 17 ರಿಂದ 19ರವರೆಗೆ ಇಲಾಖಾ ಪರೀಕ್ಷೆ: ನಿಷೇಧಾಜ್ಞೆ ಜಾರಿ

ತುಮಕೂರು

ಕರ್ನಾಟಕ ಲೋಕಸೇವಾ ಆಯೋಗವು 2026ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಯನ್ನು ಜಿಲ್ಲಾ ಕೇಂದ್ರಗಳಲ್ಲಿ ಜುಲೈ 17 ರಿಂದ 19ರವರೆಗೆ ನಡೆಸಲಿದ್ದು, ಪರೀಕ್ಷೆಯನ್ನು ಯಾವುದೇ ಲೋಪದೋಷ ಹಾಗೂ ಅಹಿತಕರ ಘಟನೆ ಸಂಭವಿಸದಂತೆ ನಡೆಸಲು ಪರೀಕ್ಷಾ ಕೇಂದ್ರದ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯೊಳಗಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶುಭ ಕಲ್ಯಾಣ್ ಅವರು ಆದೇಶ ಹೊರಡಿಸಿದ್ದಾರೆ.

ನಿಷೇಧಾಜ್ಞೆಯು ಜುಲೈ 17, 18 ಹಾಗೂ 19ರಂದು ಬೆಳಿಗ್ಗೆ 9.30 ರಿಂದ ಸಂಜೆ 4.30 ಗಂಟೆಯವರೆಗೆ ಜಾರಿಯಲ್ಲಿರುತ್ತದೆ. ಈ ನಿಷೇಧಾಜ್ಞೆಯನ್ವಯ ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಬೆರಳಚ್ಚು ಕೇಂದ್ರಗಳನ್ನು ಮುಚ್ಚತಕ್ಕದ್ದು. ನಿಷೇಧಾಜ್ಞೆ ಜಾರಿಯಲ್ಲಿರುವ ಅವಧಿಯಲ್ಲಿ ಅನಧಿಕೃತ ವ್ಯಕ್ತಿಗಳು ಯಾರೂ ನಿರ್ಬಂಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಹಾಗೂ ನಿಷೇಧಾಜ್ಞೆಯನ್ನು ಉಲ್ಲಂಘಿಸಿದವರನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ಆದೇಶಿಸಲಾಗಿದೆ.

ಜಿಲ್ಲೆಯಲ್ಲಿ ಪ್ರಶ್ನೆ ಪತ್ರಿಕೆಗಳ ಸೋರಿಕೆ ಮತ್ತು ಪರೀಕ್ಷಾ ಅಕ್ರಮಗಳಿಗೆ ಉತ್ತೇಜನ ನೀಡುವಂತಹ ವ್ಯಕ್ತಿಗಳು ಕಂಡು ಬಂದಲ್ಲಿ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸೂಚಿಸಿದ್ದಾರೆ.

### ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರ

ತುಮಕೂರು

ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವವರಿಗೆ ಕೌಶಲ್ಯಾಭಿವೃದ್ದಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್), ಜಿಲ್ಲಾ ಕೈಗಾರಿಕಾ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಜುಲೈ 22ರಂದು ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಬಳಿಯಿರುವ ಸಿಡಾಕ್ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸ ಬಯಸುವ ಆಸಕ್ತರಿಗೆ ಉದ್ಯಮಶೀಲತೆ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಯೋಜನೆಗಳ ಆಯ್ಕೆ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ಮತ್ತು ಮುಂದೆ ಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ದಿ ತರಬೇತಿ ಬಗ್ಗೆ ಮಾಹಿತಿ ನೀಡಲಾಗುವುದು.

ಸ್ವಂತ ಉದ್ಯಮ ಸ್ಥಾಪಿಸಲು ಆಸಕ್ತಿ ಇರುವ ತುಮಕೂರು ಜಲ್ಲೆಯ ವಿದ್ಯಾವಂತ ಯುವಕ/ಯುವತಿಯರು ಹಾಗು ನಿರುದ್ಯೋಗಿಗಳು ಈ ಶಿಬಿರದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಬಹುದಾಗಿದೆ.

ಕನಿಷ್ಠ 18 ವರ್ಷ ಮೇಲ್ಪಟ್ಟ ಹಾಗೂ ಕನಿಷ್ಠ 10ನೇ ತರಗತಿ ವ್ಯಾಸಂಗ ಮಾಡಿರುವ ಆಸಕ್ತರು ಜುಲೈ 20ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ, 1ನೇ ಮಹಡಿ, ಕೈಗಾರಿಕಾ ಎಸ್ಟೇಟ್, ರಿಸರ್ವ್ ಪೋಲೀಸ್ ಮೈದಾನದ ಎದುರು, ಎಸ್.ಐ.ಟಿ., ತುಮಕೂರು ಅಥವಾ ದೂರವಾಣಿ ಸಂಖ್ಯೆ 7022746755/ 7760145784ನ್ನು ಸಂಪರ್ಕಿಸಬೇಕೆಂದು ಪ್ರಕಟಣೆ ತಿಳಿಸಿದೆ.

# ‘ಸೃಜನಶೀಲ ಚಟುವಟಿಕೆಗಳು ಆತ್ಮಸಾಕ್ಷಾತ್ಕಾರದ ಅನುಭವ ನೀಡುತ್ತವೆ’



ಚಿಕ್ಕಬಳ್ಳಾಪುರ

ದೈನಂದಿನ ಜೀವನದಲ್ಲಿ ಸೃಜನಶೀಲತೆಯಿಂದ ಕೂಡಿದ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಾಗ ಆತ್ಮಸಾಕ್ಷಾತ್ಕಾರದ ಆಯಾಮವನ್ನು ಸ್ಪರ್ಶಿಸಿದ ಅನುಭವ ಪಡೆಯಬಹುದು ಎಂದು ಮುದ್ದೇನಹಳ್ಳಿ ಸತ್ಯಸಾಯಿ ಗ್ರಾಮದ ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.

ತಾಲ್ಲೂಕಿನ ಮುದ್ದೇನಹಳ್ಳಿಯಲ್ಲಿ ಆಯೋಜಿಸಿದ್ದ "ಸತ್ಯ ಸಂಗೀತ ಸಮ್ಮೇಳನ–2026" ರ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಸಂಗೀತ ಮತ್ತು ನೃತ್ಯದಂತಹ ಕಲೆಗಳ ಪರಿಚಯ ಪ್ರತಿಯೊಬ್ಬರಿಗೂ ಅಗತ್ಯವಾಗಿದೆ. ಮಕ್ಕಳಲ್ಲಿ ಬಾಲ್ಯದಿಂದಲೇ ಸಂಗೀತಾಸಕ್ತಿ ಬೆಳೆಸುವ ಉದ್ದೇಶದಿಂದ ನಮ್ಮ ಶಾಲೆಗಳಲ್ಲಿ ಆರನೇ ತರಗತಿಯಿಂದಲೇ ಭಜನೆಗಳನ್ನು ಕಲಿಸಲಾಗುತ್ತಿದೆ. ಜೊತೆಗೆ ಸಂಗೀತದ ಮೂಲ ರಾಗಗಳು ಹಾಗೂ ಭಜನೆಗಳು ಯಾವ ರಾಗಕ್ಕೆ ಸೇರಿವೆ ಎಂಬುದರ ಪರಿಚಯವನ್ನೂ ನೀಡಲಾಗುತ್ತಿದೆ. ಇಂತಹ ಕಲಿಕಾ ಪ್ರಕ್ರಿಯೆ ಪ್ರಾಥಮಿಕ ಹಂತದಿಂದಲೇ ಮಕ್ಕಳಿಗೆ ದೊರೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಖ್ಯಾತ ಸಂಗೀತ ಕಲಾವಿದರಾದ ಡಾ. ಎನ್. ರಾಜಮ್ ಹಾಗೂ ಪಂಡಿತ್ ಉಲ್ಲಾಸ್ ಕಾಶಲ್ಕರ್ ಅವರಿಗೆ "ಶ್ರೀ ಸತ್ಯ ಸಾಯಿ ಸಂಗೀತ ಶಿರೋಮಣಿ" ಪ್ರಶಸ್ತಿಯನ್ನು ಪ್ರದಾನ ಮಾಡಿ ಗೌರವಿಸಲಾಯಿತು.

ಸಮಾರೋಪ ಸಮಾರಂಭಕ್ಕೂ ಮುನ್ನ ನಡೆದ ವಿವಿಧ ಗೋಷ್ಠಿಗಳಲ್ಲಿ ಖ್ಯಾತ ಕಲಾವಿದರು ಹಾಗೂ ವಿದ್ವಾಂಸರಾದ ರಮಾ ಭಾರದ್ವಾಜ್, ಡಾ. ವೀಣಾ ಮೂರ್ತಿ ವಿಜಯ್, ತನೂಶ್ರೀ ಶಂಕರ್, ಮಧುಸೂದನ್ ಕಲೈಚೆಲ್ವನ್, ಹರ್ಷ್ ನಾರಾಯಣ್, ಡಾ. ಗಾಯತ್ರಿ ಗಿರೀಶ್ ಹಾಗೂ ಪ್ರೊ. ಲವ್ಲಿ ಶರ್ಮಾ ಅವರು ಸಂಗೀತ, ಸಂಸ್ಕೃತಿ ಮತ್ತು ಕಲಾ ಶಿಕ್ಷಣ ಕುರಿತಂತೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ನಾದ ಗುರುಕುಲಂ ನಿರ್ದೇಶಕಿ ರೇವತಿ ರಾಮಮಂದ್ರನ್, ಪ್ರಶಾಂತಿ ಬಾಲಮಂದಿರದ ಅಧ್ಯಕ್ಷ ಡಾ. ಬಿ.ಎನ್. ನರಸಿಂಹಮೂರ್ತಿ, ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ಆಡಳಿತ ವಿಭಾಗದ ರಿಜಿಸ್ಟ್ರಾರ್ ಹನುಮಂತ ರಾವ್ ನಾಯ್ಡು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಗಾನ ಕೋಗಿಲೆ ಎಸ್.ಜಾನಕಿಗೆ ನುಡಿ ನಮನ



ದೊಡ್ಡಬಳ್ಳಾಪುರ

ಭಾರತೀಯ ಚಿತ್ರರಂಗದ ಖ್ಯಾತ ಹಿನ್ನೆಲೆ ಗಾಯಕಿ, ಗಾನ ಕೋಗಿಲೆ ಎಸ್. ಜಾನಕಿ ಅವರಿಗೆ ನಗರದ ಕನ್ನಡ ಜಾಗೃತಿ ಭವನದಲ್ಲಿ ನುಡಿ ನಮನ ಕಾರ್ಯಕ್ರಮದ ಮೂಲಕ ಭಾವಪೂರ್ಣ ಗೌರವ ಸಲ್ಲಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಜಾಗೃತ ಪರಿಷತ್ತು ಹಾಗೂ ಸುಸ್ವರ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಎಸ್. ಜಾನಕಿ ಅಭಿಮಾನಿಗಳು ಹಾಗೂ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು, ಎಸ್. ಜಾನಕಿ ಅವರು ಭಾರತೀಯ ಚಿತ್ರರಂಗದ ಹೆಮ್ಮೆಯ ಗಾಯಕಿಯಾಗಿದ್ದು, ಕನ್ನಡ, ತೆಲುಗು, ತಮಿಳು, ಮಲಯಾಳಂ, ಹಿಂದಿ ಸೇರಿದಂತೆ 17ಕ್ಕೂ ಹೆಚ್ಚು ಭಾರತೀಯ ಭಾಷೆಗಳಲ್ಲಿ ಹಾಡುಗಳನ್ನು ಹಾಡಿ ಬಹುಭಾಷಾ ಗಾಯಕಿಯಾಗಿ ಅಪೂರ್ವ ಸಾಧನೆ ಮಾಡಿದ್ದಾರೆ ಎಂದು ಸ್ಮರಿಸಿದರು.

ಭಕ್ತಿಗೀತೆ, ಭಾವಗೀತೆ, ಜಾನಪದ ಹಾಗೂ ಚಿತ್ರಗೀತೆಗಳ ಮೂಲಕ ಲಕ್ಷಾಂತರ ಸಂಗೀತಾಸಕ್ತರ ಮನ ಗೆದ್ದಿದ್ದ ಎಸ್. ಜಾನಕಿ ಅವರು ತಮ್ಮ ಕಂಠಸಿರಿಯಿಂದ ಪ್ರೀತಿ, ವಿರಹ, ಸಂತೋಷ, ದುಃಖ, ಕೋಪ ಸೇರಿದಂತೆ ಎಲ್ಲ ಭಾವನೆಗಳನ್ನು ಜೀವಂತವಾಗಿ ಮೂಡಿಸುತ್ತಿದ್ದರು. ಮಕ್ಕಳ ಧ್ವನಿಯನ್ನು ಅನುಕರಿಸಿ ಹಾಡುವ ಅವರ ವಿಶಿಷ್ಟ ಶೈಲಿ ಭಾರತೀಯ ಸಂಗೀತ ಲೋಕದಲ್ಲಿ ಅವರಿಗೆ ವಿಶೇಷ ಸ್ಥಾನವನ್ನು ತಂದುಕೊಟ್ಟಿದೆ ಎಂದು ಅಭಿಪ್ರಾಯಪಟ್ಟರು.

ನುಡಿ ನಮನ ಕಾರ್ಯಕ್ರಮದ ಅಂಗವಾಗಿ ದೊಡ್ಡಬಳ್ಳಾಪುರ ತಾಲ್ಲೂಕಿನ ಕಲಾವಿದರು ಎಸ್. ಜಾನಕಿ ಹಾಡಿದ ಜನಪ್ರಿಯ ಚಿತ್ರಗೀತೆಗಳನ್ನು ಹಾಡುವ ಮೂಲಕ ಸಂಗೀತ ರಸಿಕರಿಗೆ ಗಾನರಸದೌತಣ ಉಣಬಡಿಸಿದರು.

ನಾಗರತ್ನ ಮಹಾಬಲೇಶ್ವರ್, ರಾಮಕೃಷ್ಣ, ರವಿರಾಜ್, ಚಂದ್ರಶೇಖರ್, ಸಿ. ನಟರಾಜ್, ಮಲ್ಲೇಶ್, ನಾಗರತ್ನ, ಪುಷ್ಪ, ಜಯಮ್ಮ ಹಾಗೂ ಸುಸ್ವರ ಬಳಗದ ಕಲಾವಿದರು ಎಸ್. ಜಾನಕಿ ಅವರ ಅಮರ ಗೀತೆಗಳನ್ನು ಹಾಡಿ ನೆರೆದಿದ್ದವರ ಮೆಚ್ಚುಗೆಗೆ ಪಾತ್ರರಾದರು.

ಕಾರ್ಯಕ್ರಮದಲ್ಲಿ ಕನ್ನಡಪರ ಹಿರಿಯ ಹೋರಾಟಗಾರ ತ.ನ. ಪ್ರಭುದೇವ್, ಸಂಜೀವ್ ನಾಯಕ್, ಕನ್ನಡ ಜಾಗೃತ ಪರಿಷತ್ತಿನ ಟ್ರಸ್ಟಿಗಳಾದ ಡಾ. ಎ.ಓ. ಆವಲಮೂರ್ತಿ, ಎಸ್. ಮಹಾಬಲೇಶ್ವರ್, ಕಾರ್ಯದರ್ಶಿ ಡಿ.ಪಿ. ಆಂಜನೇಯ, ದೊಡ್ಡಬಳ್ಳಾಪುರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪಿ. ಗೋವಿಂದರಾಜು, ಮಾಜಿ ಅಧ್ಯಕ್ಷ ಡಿ. ಶ್ರೀಕಾಂತ್, ನಿಕಟಪೂರ್ವ ಅಧ್ಯಕ್ಷೆ ಪ್ರಮೀಳಾ ಮಹಾದೇವ್, ಗೌರವ ಕಾರ್ಯದರ್ಶಿ ಎ. ಜಯರಾಮ್, ಕೋಶಾಧ್ಯಕ್ಷ ಜಿ. ಸುರೇಶ್, ಕನ್ನಡಪರ ಸಂಘಟನೆಗಳ ಮುಖಂಡರಾದ ಡಿ. ವೆಂಕಟೇಶ್, ನಾಗರಾಜ್, ಬಿ.ಜಿ. ಅಮರನಾಥ್ ಸೇರಿದಂತೆ ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಜಾಗೃತ ಪರಿಷತ್ತು, ಸುಸ್ವರ ಟ್ರಸ್ಟ್‌ನ ಪದಾಧಿಕಾರಿಗಳು ಹಾಗೂ ಎಸ್. ಜಾನಕಿ ಅಭಿಮಾನಿಗಳು ಭಾಗವಹಿಸಿದ್ದರು.

## ಸಾವಿರಾರು ಹಾವುಗಳನ್ನು ರಕ್ಷಿಸಿದ ವಿಜಯಪುರದ ಪರಮೇಶ್



ವಿಜಯಪುರ

ಜುಲೈ 16 ವಿಶ್ವ ಹಾವು ದಿನ. ಈ ದಿನದ ಅಂಗವಾಗಿ ವಿಜಯಪುರ ಪಟ್ಟಣದ ಹಾವು ರಕ್ಷಕ ಪರಮೇಶ್ ಅವರ ಸೇವೆ ಎಲ್ಲರ ಗಮನ ಸೆಳೆದಿದೆ. ಕಳೆದ ಹಲವು ವರ್ಷಗಳಿಂದ ಪರಮೇಶ್ ಅವರು ಸಾವಿರಾರು ಹಾವುಗಳ ಪ್ರಾಣ ರಕ್ಷಿಸಿದ್ದಾರೆ.

ಮನೆ, ಹೊಲ, ಶಾಲೆ, ಆಸ್ಪತ್ರೆ ಸೇರಿದಂತೆ ಜನವಸತಿ ಪ್ರದೇಶಗಳಲ್ಲಿ ಕಾಣಿಸಿಕೊಳ್ಳುವ ನಾಗರಹಾವು, ಕಟ್ಟುಹಾವು, ಕೆರೆಹಾವು, ಮಂಡಲಹಾವು ಸೇರಿದಂತೆ ವಿವಿಧ ಜಾತಿಯ ಹಾವುಗಳನ್ನು ಯಾವುದೇ ಹಾನಿ ಮಾಡದೆ ಹಿಡಿದು ಸುರಕ್ಷಿತ ಕಾಡು ಪ್ರದೇಶದಲ್ಲಿ ಬಿಡುವ ಕೆಲಸವನ್ನು ಪರಮೇಶ್ ಅವರು ಸ್ವಯಂಪ್ರೇರಣೆಯಿಂದ ಮಾಡುತ್ತಿದ್ದಾರೆ.

ಹಾವುಗಳನ್ನು ಕಂಡ ತಕ್ಷಣ ಕೊಲ್ಲುವ ಬದಲು ರಕ್ಷಿಸಬೇಕೆಂಬ ಜಾಗೃತಿ ಮೂಡಿಸುವುದೇ ತಮ್ಮ ಗುರಿ ಎಂದು ಪರಮೇಶ್ ಹೇಳುತ್ತಾರೆ. ಹಾವುಗಳು ಪರಿಸರದ ಸಮತೋಲನಕ್ಕೆ ಬಹಳ ಮುಖ್ಯ. ಅವು ರೈತರ ಸ್ನೇಹಿತರು. ಇಲಿ, ಕೀಟಗಳನ್ನು ನಿಯಂತ್ರಿಸುತ್ತವೆ ಎಂದು ಅವರು ತಿಳಿಸಿದ್ದಾರೆ.

ರಾತ್ರಿ–ಹಗಲು ನೋಡದೆ, ಫೋನ್ ಕರೆ ಬಂದ ಕೂಡಲೇ ಸ್ಥಳಕ್ಕೆ ಧಾವಿಸುವ ಪರಮೇಶ್ ಅವರ ಕಾರ್ಯಕ್ಕೆ ಸಾರ್ವಜನಿಕರು ಮತ್ತು ಅರಣ್ಯ ಇಲಾಖೆಯಿಂದ ಮೆಚ್ಚುಗೆ ವ್ಯಕ್ತವಾಗಿದೆ. ಇದುವರೆಗೆ ಅವರು ರಕ್ಷಿಸಿದ ಹಾವುಗಳ ಸಂಖ್ಯೆ ಸಾವಿರ ದಾಟಿದೆ.

ವಿಶ್ವ ಹಾವು ದಿನದಂದು ಪರಮೇಶ್ ಅವರ ಈ ಸಮಾಜಮುಖಿ ಸೇವೆಗೆ ಹಲವರು ಅಭಿನಂದನೆ ಸಲ್ಲಿಸಿದ್ದಾರೆ.

ಹಾವು ಕಂಡರೆ ಹೊಡೆಯಬೇಡಿ, ನನಗೆ ಕರೆ ಮಾಡಿ, ಇಲ್ಲವೇ ಅರಣ್ಯ ಇಲಾಖೆಯವರಿಗೆ ಕರೆ ಮಾಡಿ, ಹಾವುಗಳಿಗೆ ನಾವು ಹಾನಿ ಮಾಡದಿದ್ದರೆ, ಅವೂ ಕೂಡಾ ಯಾರಿಗೂ ತೊಂದರೆ ಕೊಡುವುದಿಲ್ಲ. ಪ್ರಾಣ ರಕ್ಷಣೆಗಾಗಿ, ಬುಸುಗುಡುತ್ತವೆ. ಕಚ್ಚುವುದಕ್ಕಾಗಿ ಮುಂದೆ ಬರುತ್ತವೆ. ಯಾರೂ ಹಾವುಗಳಿಗೆ ತೊಂದರೆ ಕೊಡಬೇಡಿ ಎಂದು ಪರಮೇಶ್ ಹೇಳುತ್ತಾರೆ. ಈ ಸಂಖ್ಯೆಗೂ ಕರೆ ಮಾಡಬಹುದಾಗಿದೆ. 9611091735.

## ಚೆಲುವರಾಯಸ್ವಾಮಿ ಟೀಕೆಗೆ ಕುಮಾರಸ್ವಾಮಿ ತಿರುಗೇಟು

ಬೆಂಗಳೂರು

ಜೆಡಿಎಸ್ 120 ವಿಧಾನಸಭಾ ಸ್ಥಾನಗಳನ್ನು ಗೆಲ್ಲುವ ದಿನ ಬರುತ್ತದೆ ಎಂದು ಕೇಂದ್ರ ಸಚಿವ ಹಾಗೂ ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಅವರು ಮಾಜಿ ಸಚಿವ ಚೆಲುವರಾಯಸ್ವಾಮಿ ಅವರ ಟೀಕೆಗೆ ತಿರುಗೇಟು ನೀಡಿದ್ದಾರೆ.

ಜೆಡಿಎಸ್ 120 ಸ್ಥಾನ ಗೆದ್ದು ತೋರಿಸಲಿ ಎಂಬ ಚೆಲುವರಾಯಸ್ವಾಮಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ಕಳೆದ ಹಲವು ವರ್ಷಗಳಿಂದ ತಮ್ಮ ವಿರುದ್ಧ ಟೀಕೆಗಳು ನಡೆಯುತ್ತಿವೆ. ಆದರೆ ರಾಜಕೀಯದಲ್ಲಿ ಏರುಪೇರು ಸಹಜವಾಗಿದ್ದು, ಜನರ ತೀರ್ಪೇ ಅಂತಿಮ ಎಂದು ಹೇಳಿದರು.

“20 ವರ್ಷಗಳಿಂದ ನನ್ನ ವಿರುದ್ಧ ಟೀಕೆ ಮಾಡುತ್ತಲೇ ಬಂದಿದ್ದಾರೆ. ನನ್ನ ಬಗ್ಗೆ ವಿಷ ಕಾರುವ ಕೆಲಸ ಮಾಡುತ್ತಿದ್ದಾರೆ. ಆದರೆ ಜೆಡಿಎಸ್ ಮತ್ತೆ ಬಲಿಷ್ಠವಾಗಿ ಬೆಳೆಯುವ ಕಾಲ ಬರುತ್ತದೆ. 120 ಸ್ಥಾನ ಗೆದ್ದು ತೋರಿಸುವ ದಿನವೂ ಬರಲಿದೆ. ಅಲ್ಲಿಯವರೆಗೆ ನಾನು ರಾಜಕೀಯದಲ್ಲೇ ಇರುತ್ತೇನೆ” ಎಂದು ಕುಮಾರಸ್ವಾಮಿ ಹೇಳಿದರು.

## ಎಂ.ಎ. ರಾಜ್ಯಶಾಸ್ತ್ರ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ



ಚಿಕ್ಕಬಳ್ಳಾಪುರ

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ನಾತಕೋತ್ತರ ಕೇಂದ್ರದಲ್ಲಿ ದ್ವಿತೀಯ ಎಂ.ಎ. ರಾಜ್ಯಶಾಸ್ತ್ರ ವಿದ್ಯಾರ್ಥಿಗಳಿಗೆ ಪ್ರಥಮ ಎಂ.ಎ. ರಾಜ್ಯಶಾಸ್ತ್ರ ವಿದ್ಯಾರ್ಥಿಗಳ ವತಿಯಿಂದ ಆತ್ಮೀಯ ಬೀಳ್ಕೊಡುಗೆ ಸಮಾರಂಭ ಆಯೋಜಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಡಾ. ಅಮೀರ್ ಪಾಷಾ ಮಾತನಾಡಿ, ರಾಜ್ಯಶಾಸ್ತ್ರವು ಸಮಾಜ ಮತ್ತು ಆಡಳಿತ ವ್ಯವಸ್ಥೆಯನ್ನು ಅರ್ಥಮಾಡಿಕೊಳ್ಳಲು ಪ್ರಮುಖ ವಿಷಯವಾಗಿದೆ. ಶಿಕ್ಷಣ ಜೀವನದಲ್ಲಿ ಆತ್ಮವಿಶ್ವಾಸ, ಪರಿಶ್ರಮ ಹಾಗೂ ಗುರಿನಿಷ್ಠತೆ ಅತ್ಯಗತ್ಯವಾಗಿದ್ದು, ಜ್ಞಾನ ಮತ್ತು ಮೌಲ್ಯಾಧಾರಿತ ಶಿಕ್ಷಣವೇ ವ್ಯಕ್ತಿತ್ವ ನಿರ್ಮಾಣಕ್ಕೆ ಭದ್ರ ಬುನಾದಿಯಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ರಾಜ್ಯಶಾಸ್ತ್ರ ವಿಭಾಗದ ಸಂಯೋಜಕ ಡಾ. ವೆಂಕಟೇಶ್ ಮಾತನಾಡಿ, ವಿದ್ಯಾರ್ಥಿಗಳು ಕಲಿಕೆಯ ಹಂತದಲ್ಲಿ ಯಾವುದೇ ಕಾರಣಕ್ಕೂ ಸಮಯ ವ್ಯರ್ಥ ಮಾಡದೆ ಗುಣಾತ್ಮಕ ಶಿಕ್ಷಣ ಪಡೆಯಬೇಕು. ಇಂದಿನ ತಂತ್ರಜ್ಞಾನಕ್ಕೆ ಹೊಂದಿಕೊಂಡು ಜ್ಞಾನವನ್ನು ವೃದ್ಧಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಉಪನ್ಯಾಸಕಿ ಡಾ. ಪ್ರಭಾ ಅವರು ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ ಹಾಗೂ ಶಿಸ್ತನ್ನು ಮೆಚ್ಚಿ, ಭವಿಷ್ಯದಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಮಾದರಿಯಾಗಲಿ ಎಂದು ಹಾರೈಸಿದರು.

ಪ್ರಾಧ್ಯಾಪಕ ಸತ್ಯನಾರಾಯಣ ಮಾತನಾಡಿ, ವಿದ್ಯಾರ್ಥಿಗಳೊಂದಿಗೆ ಕಳೆದ ಸ್ಮರಣೀಯ ಕ್ಷಣಗಳನ್ನು ಹಂಚಿಕೊಂಡು, ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಧೈರ್ಯದಿಂದ ಎದುರಿಸಿ ಯಶಸ್ಸಿನತ್ತ ಸಾಗುವಂತೆ ಪ್ರೇರೇಪಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರೊ. ವಸುಂದರಾ ಅವರು, ವಿದ್ಯಾರ್ಥಿಗಳು ಸಮಾಜದ ಬಗ್ಗೆ ಕಾಳಜಿ ಹೊಂದಿರುವ ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪ್ರಾಧ್ಯಾಪಕರಾದ ಡಾ. ನಂಜಪ್ಪ, ರಾಘವೇಂದ್ರ, ಮುರಳಿ, ಗೀತಾ, ವಿದ್ಯಾರ್ಥಿಗಳು, ಪೋಷಕರು ಹಾಗೂ ಕಾಲೇಜಿನ

# ರೈತರನ್ನು ಮುಟ್ಟಿದರೆ ಪೊಲೀಸ್ ಠಾಣೆಗೆ ಮುತ್ತಿಗೆ: ಆರ್.ಅಶೋಕ್ ಎಚ್ಚರಿಕೆ

ಬೆಂಗಳೂರು

ಬಿಡದಿ ಟೌನ್‌ಶಿಪ್ ಯೋಜನೆಗೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ. ರೈತರ ಜಮೀನು ರಕ್ಷಿಸಲು ಬಿಜೆಪಿ ಸದಾ ಬೆಂಬಲವಾಗಿ ನಿಲ್ಲಲಿದೆ. ರೈತರ ಮೇಲೆ ಪೊಲೀಸರು ದೌರ್ಜನ್ಯ ನಡೆಸಿದರೆ ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಲಾಗುವುದು ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಎಚ್ಚರಿಕೆ ನೀಡಿದ್ದಾರೆ.

ಬಿಡದಿ, ಬೈರಮಂಗಲ, ಮಂಡಲಹಳ್ಳಿ ಸೇರಿದಂತೆ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ರೈತರೊಂದಿಗೆ ಚರ್ಚೆ ನಡೆಸಿದ ಬಳಿಕ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ಯೋಜನೆ ವಿಚಾರದಲ್ಲಿ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಿದರು.

“ನಾನು ನಾಲ್ಕನೇ ಬಾರಿ ಬಿಡದಿಗೆ ಭೇಟಿ ನೀಡಿದ್ದೇನೆ. ಕಾನೂನು ಪ್ರಕಾರ ಭೂಸ್ವಾಧೀನಕ್ಕೆ ಮುನ್ನ ರೈತರಿಗೆ ನೋಟಿಸ್ ನೀಡಿ ಸಮಯ ನೀಡಬೇಕು. ಆದರೆ ಅಧಿಕಾರಿಗಳು ಮತ್ತು ಪೊಲೀಸರು ಏಕಾಏಕಿ ಆಗಮಿಸಿ ರೈತರ ಮೇಲೆ ದೌರ್ಜನ್ಯ ನಡೆಸಿದ್ದಾರೆ. ಮಹಿಳೆಯರ ಮೇಲೂ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ಹಲ್ಲೆ ನಡೆಸಲಾಗಿದೆ. ನಂತರ ರೈತರ ಮೇಲೆಯೇ ಕೊಲೆ ಬೆದರಿಕೆ ಪ್ರಕರಣ ದಾಖಲಿಸಿರುವುದು ಸರಿಯಲ್ಲ” ಎಂದು ಆರೋಪಿಸಿದರು.

ರೈತರು ತಮ್ಮ ಜಮೀನು ಉಳಿಸಿಕೊಳ್ಳಲು ಹೋರಾಟ ಮಾಡುತ್ತಿದ್ದಾರೆಯೇ ಹೊರತು ಯಾರ ಮೇಲೂ ದಾಳಿ ನಡೆಸಿಲ್ಲ. ತಲತಲಾಂತರಗಳಿಂದ ಬಂದಿರುವ ಜಮೀನನ್ನು ಕಳೆದುಕೊಳ್ಳುವ ಆತಂಕದಲ್ಲಿ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಆದರೆ ಸರ್ಕಾರ ಅವರನ್ನು ಅಪರಾಧಿಗಳಂತೆ ಬಿಂಬಿಸುವ ಪ್ರಯತ್ನ ಮಾಡುತ್ತಿದೆ ಎಂದು ಅಶೋಕ್ ದೂರಿದರು.

ಬೈರಮಂಗಲ ಸೇರಿದಂತೆ ಹಲವು ಪ್ರದೇಶಗಳಲ್ಲಿ ರೈತರು ವರ್ಷಗಳಿಂದ ಕೃಷಿ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ. ತೆಂಗು, ಮಾವು ಸೇರಿದಂತೆ ಹಲವು ಬೆಳೆಗಳನ್ನು ಬೆಳೆಯುತ್ತಿದ್ದಾರೆ. ಆದರೆ ಪ್ರದೇಶವನ್ನು ರೆಡ್ ಝೋನ್ ಎಂದು ಗುರುತಿಸಿರುವುದರಿಂದ ಜಮೀನು ಮಾರಾಟಕ್ಕೂ ಸಾಧ್ಯವಾಗುತ್ತಿಲ್ಲ ಎಂದು



ರೈತರು ಅಳಲು ತೋಡಿಕೊಂಡಿದ್ದಾರೆ. ಕೃಷಿಯನ್ನೇ ನಂಬಿಕೊಂಡಿರುವ ಕುಟುಂಬಗಳ ಹಿತಾಸಕ್ತಿಯನ್ನು ಸರ್ಕಾರ ರಕ್ಷಿಸಬೇಕು ಎಂದು ಅವರು ಒತ್ತಾಯಿಸಿದರು.

“ರೈತರಿಗೆ ಹಣದ ಆಮಿಷ ತೋರಿಸಿ ಜಮೀನು ಪಡೆಯುವ ಪ್ರಯತ್ನ ನಡೆಯುತ್ತಿದೆ. ಹೆಚ್ಚಿನ ಹಣ ನೀಡುತ್ತೇವೆ ಎಂದು ಹೇಳಿ ರೈತರನ್ನು ಒಪ್ಪಿಸುವ ಪ್ರಯತ್ನ ಮಾಡಲಾಗುತ್ತಿದೆ.

ಆದರೆ ರೈತರ ಇಚ್ಛೆಗೆ ವಿರುದ್ಧವಾಗಿ ಯಾವುದೇ ಕ್ರಮ ಕೈಗೊಳ್ಳಲು ಅವಕಾಶ ನೀಡುವುದಿಲ್ಲ” ಎಂದು ಅಶೋಕ್ ಹೇಳಿದರು.

ಬಿಡದಿ ಟೌನ್‌ಶಿಪ್ ಯೋಜನೆ ಕುರಿತು ಮುಂಬರುವ ಅಧಿವೇಶನದಲ್ಲಿ ಚರ್ಚೆ ನಡೆಸುವುದಾಗಿ ತಿಳಿಸಿದ ಅವರು, ರೈತರ ಮೇಲಿನ ಪ್ರಕರಣಗಳನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅಶೋಕ್, “ಹಿಂದಿನ ಸರ್ಕಾರಗಳ ಅವಧಿಯಲ್ಲೂ ಬಿಡದಿ ಟೌನ್‌ಶಿಪ್ ಬಗ್ಗೆ ಚರ್ಚೆಗಳು ನಡೆದಿದ್ದವು. ಆದರೆ ರೈತರ ಭೂಮಿ ಸ್ವಾಧೀನಕ್ಕೆ ಮುಂದಾಗಿರಲಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಮತ್ತೆ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಲಾಗಿದೆ” ಎಂದು ಆರೋಪಿಸಿದರು.

ಬೆಂಗಳೂರು ಸುತ್ತಮುತ್ತ ಸಾವಿರಾರು ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಯೋಜನೆ ರೂಪಿಸಲಾಗಿದೆ. ಸರ್ಕಾರದ ಉದ್ದೇಶ ಅಭಿವೃದ್ಧಿಯೇ ಅಥವಾ ಬೇರೆ ಉದ್ದೇಶವೇ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಅವರು ಆಗ್ರಹಿಸಿದರು.

ಗೋಮಾಳ ಭೂಮಿಯಲ್ಲಿ ಬಡಾವಣೆ ನಿರ್ಮಾಣದ ವಿಚಾರವನ್ನು ಪ್ರಸ್ತಾಪಿಸಿದ ಅವರು, ಸಾರ್ವಜನಿಕ ಬಳಕೆಗೆ ಮೀಸಲಾಗಿರುವ ಜಮೀನನ್ನು ಬೇರೆಯ ಉದ್ದೇಶಕ್ಕೆ ಬಳಸುವ ಬಗ್ಗೆ ಸರ್ಕಾರ ಉತ್ತರ ನೀಡಬೇಕು ಎಂದರು.

“ಅಭಿವೃದ್ಧಿಯ ಹೆಸರಿನಲ್ಲಿ ರೈತರ ಹಿತಾಸಕ್ತಿಯನ್ನು ಬಲಿ ಕೊಡಲು ಸಾಧ್ಯವಿಲ್ಲ. ರೈತರ ಜಮೀನು, ಜೀವನೋಪಾಯ ಮತ್ತು ಹಕ್ಕುಗಳ ರಕ್ಷಣೆಗೆ ಬಿಜೆಪಿ ಹೋರಾಟ ಮುಂದುವರಿಸಲಿದೆ” ಎಂದು ಆರ್. ಅಶೋಕ್ ಹೇಳಿದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಸಭೆ

ವಿಜಯಪುರ

ವಿಜಯಪುರ ಪುರಸಭೆ ಸಭಾಂಗಣದಲ್ಲಿ ಗುರುವಾರ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರಮೇಶ್ ಅವರ ನೇತೃತ್ವದಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳ ವಿಶೇಷ ಸಭೆ ನಡೆಯಿತು.

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ – 2026 ಕುರಿತು ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲಾಯಿತು.

ಈ ವೇಳೆ ಮಾತನಾಡಿದ ಅವರು, ಪ್ರಜಾಪ್ರಭುತ್ವದ ಆಧಾರವೇ ಮತದಾರರ ಪಟ್ಟಿ. ಆದ್ದರಿಂದ ಈ ಕಾರ್ಯವನ್ನು ಅತ್ಯಂತ ಜವಾಬ್ದಾರಿಯುತವಾಗಿ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮ್ಯಾಪಿಂಗ್ ಆದ ಬಳಿಕ ಮತಗಟ್ಟೆ ಅಧಿಕಾರಿಗಳ ಕೈ ಸೇರಿರುವ ಪ್ರತಿಯೊಂದು ಎನ್ಯುಮರೇಷನ್ ಫಾರಂಗಳನ್ನು ಪ್ರತಿ ಬಿ.ಎಲ್.ಓ ಕಡ್ಡಾಯವಾಗಿ ಮನೆ ಮನೆಗೆ ಭೇಟಿ ನೀಡಿ, ಖುದ್ದು ಮತದಾರರಿಗೆ ತಲುಪಿಸಬೇಕು. ಒಂದು ವೇಳೆ ಮತದಾರರು ಲಭ್ಯವಾಗದಿದ್ದಲ್ಲಿ ಅವರ ಕುಟುಂಬಸ್ಥರಿಗೆ ನೀಡಿ ಸಹಿ ಪಡೆದುಕೊಳ್ಳಬೇಕು. ಯಾವುದೇ ಮತದಾರರು ಈ ಪ್ರಕ್ರಿಯೆಯಿಂದ ಹೊರಗುಳಿಯಬಾರದು ಎಂದು ತಿಳಿಸಿದರು.

ಮನೆ ಭೇಟಿ ವೇಳೆ ಮತದಾರರಿಂದ ಸರಿಯಾದ ಮಾಹಿತಿ ಪಡೆದು ಫಾರಂ ಭರ್ತಿ ಮಾಡಿಸಬೇಕು. ಮೃತಪಟ್ಟವರು, ಸ್ಥಳಾಂತರಗೊಂಡವರು ಹಾಗೂ ನಕಲಿ ಮತದಾರರ ಬಗ್ಗೆ ನಿಖರ ಮಾಹಿತಿ ಸಂಗ್ರಹಿಸಬೇಕು. ನಿಗದಿತ ಸಮಯದೊಳಗೆ ಶೇ.100 ರಷ್ಟು ಗುರಿ ಸಾಧಿಸಬೇಕು. ಯಾರೊಬ್ಬರ ಶಿಫಾರಸ್ಸುಗಳನ್ನೂ ಪರಿಗಣನೆಗೆ ತೆಗೆದುಕೊಳ್ಳಬಾರದು ಎಂದರು.

ಮತದಾರರು 2002ರ ಮತದಾರರ ಪಟ್ಟಿಯಲ್ಲಿ ಹೆಸರು ಸಿಕ್ಕಿಲ್ಲ ಎನ್ನುವ ಕಾರಣಕ್ಕೆ ಎನ್ಯುಮರೇಷನ್ ಫಾರಂ ವಾಪಸ್ ಕೊಡದೇ ಇರಬಾರದು. ಅವರಿಂದ ಆಧಾರ್ ಕಾರ್ಡ್ ಜೊತೆಗೆ ಸೂಚಿಸಲಾಗಿರುವ ದಾಖಲಾತಿಗಳಲ್ಲಿ ಯಾವುದಾದರೂ ಒಂದನ್ನು ಪಡೆದು ಫಾರಂಗಳಿಗೆ ಸಹಿ ಮಾಡಿಸಿಕೊಳ್ಳಬೇಕು. ನಂತರ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಬಂದ ಬಳಿಕ, ಪೂರ್ಣ ವಿವರ ನೀಡದವರಿಗೆ ನೋಟಿಸ್ ಜಾರಿ ಮಾಡಲಾಗುತ್ತದೆ. ಆ ನಂತರ ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಬೇಕೋ ಅಥವಾ ಕೈಬಿಡಬೇಕೋ ಎಂಬುದನ್ನು ಚುನಾವಣಾ ಆಯೋಗ ನಿರ್ಧರಿಸುತ್ತದೆ.

ಎರಡು ಕಡೆ ಮತದಾನದ ಹಕ್ಕು ಹೊಂದಿರುವವರ ಕುರಿತು ಪರಿಶೀಲನೆ ನಡೆಸಿ ಮಹಜರಿಗೆ ಸಹಿ ಮಾಡಿಸಿಕೊಳ್ಳಬೇಕು. ಬಿ.ಎಲ್.ಎ–2 ಗಳ ಸಹಿಯನ್ನು ಪಡೆದು ಬಿ.ಎಲ್.ಓ ಗಳು ಸಹಿ ಮಾಡಿ, ಸಲ್ಲಿಸಬೇಕು ಎಂದು ಮತಗಟ್ಟೆ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು.

ಪುರಸಭೆ ಮುಖ್ಯಾಧಿಕಾರಿ ವೈ.ಎನ್. ಸತ್ಯನಾರಾಯಣ ಮಾತನಾಡಿ, ಬಿ.ಎಲ್.ಓ ಗಳಿಗೆ ಮತದಾರರ ಬಗ್ಗೆ ಗೊಂದಲವಿದ್ದರೆ ನೋಡಲ್ ಅಧಿಕಾರಿಗಳು ಮತ್ತು ಮೇಲ್ವಿಚಾರಕರ ಸಹಾಯ ಪಡೆದುಕೊಳ್ಳಿ. ಯಾರದೇ ಒತ್ತಡ ಬಂದರೂ ಚುನಾವಣಾ ಕೆಲಸವನ್ನು ಅತ್ಯಂತ ಜವಾಬ್ದಾರಿಯಿಂದ ಮಾಡಬೇಕು. ಎಲ್ಲಿಯೂ ಲೋಪದೋಷಗಳು ಕಂಡುಬರದಂತೆ ಕೆಲಸ ಮಾಡಿ ಎಂದರು.

# 36 ಗಂಟೆಯಲ್ಲೇ ಪ್ರಕರಣ ಭೇದಿಸಿದ ಪೊಲೀಸರು

ಕೋಲಾರ

ವೃದ್ಧೆಯೊಬ್ಬರ ಮಾಂಗಲ್ಯ ಸರ ಕಳವು ಪ್ರಕರಣವನ್ನು ಕೇವಲ 36 ಗಂಟೆಗಳಲ್ಲಿ ಭೇದಿಸಿರುವ ಶ್ರೀನಿವಾಸಪುರ ಪೊಲೀಸರು, ಕೃತ್ಯದಲ್ಲಿ ಭಾಗಿಯಾಗಿದ್ದ ಸಂಬಂಧಿಕರು ಹಾಗೂ ಬಾಲಕನನ್ನು ಪತ್ತೆಹಚ್ಚಿ ಬಂಧಿಸಿದ್ದಾರೆ. ಬಂಧಿತರಿಂದ ಸುಮಾರು 5 ಲಕ್ಷ ರೂ. ಮೌಲ್ಯದ ಚಿನ್ನಾಭರಣವನ್ನು ವಶಪಡಿಸಿಕೊಂಡಿದ್ದಾರೆ.

ಬಂಧಿತರನ್ನು ಸುಶೀಲಮ್ಮ (60), ಅತ್ತಿಕುಂಟೆ ಗ್ರಾಮ, ಯಲ್ದೂರು ಹೋಬಳಿ ಹಾಗೂ ಕಾನೂನು ಸಂಘರ್ಷಕ್ಕೆ ಒಳಗಾದ ಬಾಲಕ ಎಂದು ಗುರುತಿಸಲಾಗಿದೆ. ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಒಳಸಂಚು ರೂಪಿಸಿ, ಬಾಲಕನನ್ನು ಬಳಸಿಕೊಂಡು ವೃದ್ಧೆಯ ಮಾಂಗಲ್ಯ ಸರ ಕಳವು ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಂಧಿತರಿಂದ 45 ಗ್ರಾಂ ತೂಕದ ಬಂಗಾರದ ಮಾಂಗಲ್ಯ ಸರ, ದೇವರ ಕಾಸು, ಎರಡು ಗುಂಡುಗಳು ಹಾಗೂ ಕೃತ್ಯಕ್ಕೆ ಬಳಸಿದ್ದ ದ್ವಿಚಕ್ರ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ.

ಶ್ರೀನಿವಾಸಪುರ ತಾಲ್ಲೂಕಿನ ಯಲ್ದೂರು ಗ್ರಾಮದ ನಿವಾಸಿ 80 ವರ್ಷದ ಮುನಿಲಕ್ಷ್ಮಮ್ಮ ಅವರು ಜುಲೈ 13ರಂದು ಮನೆಯಲ್ಲಿ ಕುಳಿತಿದ್ದ ವೇಳೆ ಅಪರಿಚಿತ ಯುವಕನೊಬ್ಬ ಮನೆಗೆ ಆಗಮಿಸಿದ್ದ. ತನ್ನನ್ನು ಪರಿಚಯಿಸಿಕೊಂಡಿದ್ದ ಆತ, ನೀರು ಕುಡಿದು ಉಪಾಹಾರ ಸೇವಿಸಿ ಸುಮಾರು ಅರ್ಧ ಗಂಟೆ ಕಾಲ ವೃದ್ಧೆಯೊಂದಿಗೆ ಮಾತನಾಡಿದ್ದ.

ಬಳಿಕ ಸೂಕ್ತ ಸಮಯ ನೋಡಿಕೊಂಡು ವೃದ್ಧೆಯ ಕತ್ತಿನಲ್ಲಿದ್ದ ಸುಮಾರು 45 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದ. ಈ ಸಂಬಂಧ ಶ್ರೀನಿವಾಸಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ಗಂಭೀರತೆ ಅರಿತ ಕೋಲಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್ ಅವರ ಮಾರ್ಗದರ್ಶನದಲ್ಲಿ ವಿಶೇಷ ತನಿಖಾ ತಂಡಗಳನ್ನು ರಚಿಸಲಾಗಿತ್ತು.

ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ರವಿಶಂಕರ್, ಹೆಚ್.ಸಿ. ಜಗದೀಶ್ ಹಾಗೂ ಮುಳಬಾಗಿಲು ಉಪವಿಭಾಗದ ಅಧಿಕಾರಿ ಮನಿಶಾ ಅವರ ನಿರ್ದೇಶನದಲ್ಲಿ ಮೂರು ತಂಡಗಳು ಕಾರ್ಯಾಚರಣೆ ನಡೆಸಿದವು. ಶ್ರೀನಿವಾಸಪುರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಬಿ. ಶಂಕರಾಚಾರ್ ನೇತೃತ್ವದಲ್ಲಿ ಪೊಲೀಸರು 50ಕ್ಕೂ ಹೆಚ್ಚು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ, ಸ್ಥಳೀಯ ಮಾಹಿತಿದಾರರ ನೆರವಿನಿಂದ ತನಿಖೆ ನಡೆಸಿದರು. ತೀವ್ರ ಕಾರ್ಯಾಚರಣೆ ನಡೆಸಿದ ಪೊಲೀಸರು ಜುಲೈ 14ರಂದು ಶ್ರೀನಿವಾಸಪುರ ತಾಲ್ಲೂಕಿನ ಹರಳಕುಂಟೆ ಮತ್ತು ಅತ್ತಿಕುಂಟೆ ಗ್ರಾಮಗಳಲ್ಲಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾದರು.

# ಕಾನೂನು ವಿದ್ಯಾರ್ಥಿನಿ ಹತ್ಯೆ; ತಮ್ಮ ಸೇರಿ ಇಬ್ಬರು ಬಂಧನ

ಬೆಂಗಳೂರು

ಅಣ್ಣನ ಪ್ರೀತಿಯನ್ನು ನಿರಾಕರಿಸಿದ್ದ ಕಾನೂನು ವಿದ್ಯಾರ್ಥಿನಿಯನ್ನು ಆತನ ತಮ್ಮ ಚಾಕುವಿನಿಂದ ಇರಿದು ಹತ್ಯೆಗೈದ ಘಟನೆ ನಗರದ ಕೋಡಿಹಳ್ಳಿಯ ಹೆಚ್‌ಎಎಲ್ ರಸ್ತೆಯಲ್ಲಿ ನಡೆದಿದೆ. ಚಿಕಿತ್ಸೆ ಪಡೆಯುತ್ತಿದ್ದ ಯುವತಿ ಬುಧವಾರ ಸಂಜೆ ಮೃತಪಟ್ಟಿದ್ದಾಳೆ.

ಅಮೃತ ಮೃತ ಯುವತಿ. ಜುಲೈ 13ರಂದು ನಡೆದ ದಾಳಿಯಲ್ಲಿ ಆಕೆಯ ಬೆನ್ನು ಮತ್ತು ಎದೆ ಭಾಗಕ್ಕೆ ಚಾಕುವಿನಿಂದ ಇರಿಯಲಾಗಿತ್ತು. ತೀವ್ರವಾಗಿ ಗಾಯಗೊಂಡಿದ್ದ ಆಕೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದರೂ, ಚಿಕಿತ್ಸೆ ಫಲಿಸದೆ ಜುಲೈ 15ರ ಸಂಜೆ ಸಾವನ್ನಪ್ಪಿದ್ದಾಳೆ. ಪೊಲೀಸರ ಮಾಹಿತಿ ಪ್ರಕಾರ, ಓಂ ಶಕ್ತಿ ಮಾಲೆ ಧಾರಣೆ ಕಾರ್ಯಕ್ರಮದ ವೇಳೆ ಎರಡು ಕುಟುಂಬಗಳ ನಡುವೆ ಪರಿಚಯವಾಗಿತ್ತು. ಬಳಿಕ ಧನುಷ್ ಮತ್ತು ಅಮೃತ ಪರಸ್ಪರ ಆತ್ಮೀಯರಾಗಿದ್ದು, ಪ್ರೀತಿಸುತ್ತಿದ್ದರು ಎನ್ನಲಾಗಿದೆ.

# ಬಂಗಾರು ತಿರುಪತಿ ದೇಗುಲ ಹುಂಡಿಯಲ್ಲಿ ರೂ.13.88 ಲಕ್ಷ ಸಂಗ್ರಹ

ಬೇತಮಂಗಲ

ತಾಲ್ಲೂಕಿನ ಪ್ರಸಿದ್ಧ ಬಂಗಾರು ತಿರುಪತಿ (ಗುಟ್ಟಹಳ್ಳಿ) ಶ್ರೀ ವೆಂಕಟರಮಣ ಸ್ವಾಮಿ ದೇವಸ್ಥಾನದ ಹುಂಡಿ ಎಣಿಕೆ ಕಾರ್ಯದಲ್ಲಿ ಒಟ್ಟು ರೂ.13,88,605 ಸಂಗ್ರಹವಾಗಿದೆ.

ಜಿಲ್ಲಾಧಿಕಾರಿ ಕಚೇರಿ, ಕಂದಾಯ ಇಲಾಖೆ, ಮುಜರಾಯಿ ಇಲಾಖೆ ಹಾಗೂ ತಾಲೂಕು ಆಡಳಿತದ ಅಧಿಕಾರಿಗಳ ಸಮ್ಮುಖದಲ್ಲಿ ನಿಯಮಾನುಸಾರ ಹುಂಡಿ ಎಣಿಕೆ ಕಾರ್ಯ ನಡೆಯಿತು.

ಕಳೆದ ಎರಡು ವಾರಗಳಲ್ಲಿ ಭಕ್ತರು ಸಲ್ಲಿಸಿದ ಕಾಣಿಕೆಯಲ್ಲಿ ರೂ.12,58,905 ನೋಟುಗಳ ರೂಪದಲ್ಲಿ ಹಾಗೂ ರೂ.1,29,700 ನಾಣ್ಯಗಳ ರೂಪದಲ್ಲಿ ಸಂಗ್ರಹವಾಗಿದೆ ಎಂದು ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ್ ಮಾಹಿತಿ ನೀಡಿದರು.

ಹುಂಡಿ ಎಣಿಕೆ ನಡೆಯುತ್ತಿದ್ದ ವೇಳೆ ದೇವಸ್ಥಾನದಲ್ಲಿ ಡಿ–ಗ್ರೂಪ್ ಸಹಾಯಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ವೆಂಕಟೇಶ್ ಅಲಿಯಾಸ್ ಮಂಜುನಾಥ್ ಎಂಬಾತ ಹುಂಡಿ ಹಣದಲ್ಲಿ ರೂ.3,100 ಅನ್ನು ಕಳವು ಮಾಡಲು ಯತ್ನಿಸಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ಅನುಮಾನಗೊಂಡ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಆತನ ಜೇಬಿನಲ್ಲಿ ಹಣ ಪತ್ತೆಯಾಗಿದೆ ಎಂದು ತಿಳಿದುಬಂದಿದೆ. ಘಟನೆಯ ಬಳಿಕ ಅಧಿಕಾರಿಗಳು ಬೇತಮಂಗಲ ಪೊಲೀಸ್ ಠಾಣೆಗೆ ದೂರು ನೀಡಿ ಆರೋಪಿಯನ್ನು ಪೊಲೀಸರ ವಶಕ್ಕೆ ಒಪ್ಪಿಸಿದ್ದಾರೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ನಡೆಸುತ್ತಿದ್ದಾರೆ.

ಈ ಸಂಬಂಧ ಪ್ರತಿಕ್ರಿಯಿಸಿದ ಅಪರ ಜಿಲ್ಲಾಧಿಕಾರಿ ಮಂಗಳ, ಘಟನೆಯ ಕುರಿತು ಮುಜರಾಯಿ ಇಲಾಖೆಯ ಮೇಲಾಧಿಕಾರಿಗಳ ಗಮನಕ್ಕೆ ತಂದು ಸಂಬಂಧಪಟ್ಟ ಸಿಬ್ಬಂದಿಯನ್ನು ಅಮಾನತುಗೊಳಿಸುವ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಜೊತೆಗೆ ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ದೇವಸ್ಥಾನ ಆವರಣದಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗುವುದು ಎಂದು ತಿಳಿಸಿದರು. ದೇವಸ್ಥಾನದಲ್ಲಿ ಅಗತ್ಯ ಭದ್ರತಾ ಕ್ರಮಗಳು, ಸಿಸಿಟಿವಿ ವ್ಯವಸ್ಥೆ ಹಾಗೂ ಸಮರ್ಪಕ ಕಣ್ಗಾವಲು ಇಲ್ಲದಿರುವುದು ಈ ಘಟನೆಗೆ ಕಾರಣವಾಗಿರಬಹುದು ಎಂಬ ಆರೋಪಗಳೂ ಕೇಳಿಬಂದಿವೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸುವ ಸಾಧ್ಯತೆ ಇದೆ.



## ಹುಂಡಿ ಹಣ ಕಳವು ಆರೋಪ: ನೌಕರ ಅಮಾನತು

ಕೋಲಾರ



ಕೋಲಾರ ಜಿಲ್ಲೆಯ ಬೇತಮಂಗಲ ಸಮೀಪದ ಪುರಾಣ ಪ್ರಸಿದ್ಧ ಬಂಗಾರು ತಿರುಪತಿ ಶ್ರೀ ವೆಂಕಟರಮಣಸ್ವಾಮಿ ದೇವಾಲಯದಲ್ಲಿ ಹುಂಡಿ ಎಣಿಕೆ ವೇಳೆ ದೇವಾಲಯದ ನೌಕರನೇ ಹಣ ಕಳವು ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ಅವರನ್ನು ಸೇವೆಯಿಂದ ಅಮಾನತುಗೊಳಿಸಿರುವ ಘಟನೆ ಗುರುವಾರ ನಡೆದಿದೆ.

ಆರೋಪಿ ಎಚ್.ಆರ್. ಮಂಜುನಾಥ್ ಉರುಫ್ ವೆಂಕಟೇಶಪ್ಪ ವಿರುದ್ಧ ಹುಂಡಿ ಎಣಿಕೆ ಸಂದರ್ಭದಲ್ಲಿ ಹಣ ಕಳವು ಮಾಡಿದ ಆರೋಪ ಕೇಳಿಬಂದಿದ್ದು, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಮುಜರಾಯಿ ಇಲಾಖೆ ತಕ್ಷಣವೇ ಶಿಸ್ತು ಕ್ರಮ ಕೈಗೊಂಡಿದೆ.

ಇತ್ತೀಚೆಗಷ್ಟೇ ಕರ್ನಾಟಕ ಮುಜರಾಯಿ ಇಲಾಖೆ ಜಾರಿಗೆ ತಂದಿರುವ ಧಾರ್ಮಿಕ ದೇವಾಲಯಗಳ ಆಡಳಿತ ಮತ್ತು ಪಾರದರ್ಶಕತೆ ಸಂಬಂಧಿತ ಹೊಸ ನಿಯಮಗಳಿಗೆ ಅನುಗುಣವಾಗಿ, ಆರೋಪಿ ನೌಕರರನ್ನು ತಕ್ಷಣದಿಂದಲೇ ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ.

# ಮಳೆಯ ಕೊರತೆಯಿಂದ ಕಂಗೆಟ್ಟ ದೇವನಹಳ್ಳಿ ರೈತರು

ವಿಜಯಪುರ

ದೇವನಹಳ್ಳಿ ತಾಲೂಕಿನಲ್ಲಿ ಈ ಬಾರಿ ಮುಂಗಾರು ಮಳೆ ತೀವ್ರ ಕೊರತೆಯಾಗಿದ್ದು, ರೈತರು ಬಿತ್ತನೆ ಮಾಡಲಾಗದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಜೂನ್–ಜುಲೈ ತಿಂಗಳಲ್ಲಿ ಬಿತ್ತನೆ ಮಾಡಬೇಕಾಗಿದ್ದ ಪ್ರಮುಖ ಬೆಳೆಗಳನ್ನು ಬಿತ್ತನೆ ಮಾಡಲು ಸಾಧ್ಯವಾಗದ ಹಿನ್ನೆಲೆಯಲ್ಲಿ, ದೇವನಹಳ್ಳಿ ತಾಲೂಕನ್ನು ಕೂಡಲೇ ಬರಪೀಡಿತ ಪ್ರದೇಶ ಎಂದು ಘೋಷಿಸಬೇಕು ಎಂದು ಕರ್ನಾಟಕ ದಲಿತ ಜನಸೇನೆಯ ರಾಜ್ಯಾಧ್ಯಕ್ಷ ಟಿ.ಭರತ್ ಸರಕಾರಕ್ಕೆ ಒತ್ತಾಯಿಸಿದರು.

ಈ ಕುರಿತು, ಪಟ್ಟಣದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ ಸಾಮಾನ್ಯವಾಗಿ ಜೂನ್ ಮೊದಲ ವಾರದಿಂದಲೇ ಮುಂಗಾರು ಆರಂಭವಾಗಿ ರಾಗಿ, ಜೋಳ, ಮುಸುಕಿನ ಜೋಳ, ನೆಲಗಡಲೆ, ತೊಗರಿ ಬೆಳೆಗಳ ಬಿತ್ತನೆ ಕಾರ್ಯ ಆರಂಭವಾಗುತ್ತಿತ್ತು. ಆದರೆ ಈ ವರ್ಷ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗಿಲ್ಲ. ಹವಾಮಾನ ಇಲಾಖೆಯ ಮಾಹಿತಿ ಪ್ರಕಾರ ತಾಲೂಕಿನಲ್ಲಿ ವಾಡಿಕೆ ಮಳೆಗಿಂತ ಶೇ. 60 ಕ್ಕಿಂತ ಹೆಚ್ಚು ಕೊರತೆಯಾಗಿದೆ.

ಮಳೆಯಿಲ್ಲದೆ ಕೆರೆ–ಕಟ್ಟೆಗಳು ಬರಿದಾಗಿವೆ, ಅಂತರ್ಜಲ ಮಟ್ಟ ಕುಸಿದಿದೆ. ಹೊಲಗಳಲ್ಲಿ ತೇವಾಂಶವೇ ಇಲ್ಲದ ಕಾರಣ ಬಿತ್ತಿದ ಬೀಜಗಳು ಮೊಳಕೆಯೊಡೆಯದೆ ಹಾಳಾಗುತ್ತಿವೆ. ಕೆಲವು ಕಡೆ ಬಿತ್ತನೆ ಮಾಡಿದ್ದ ರೈತರ ಬೆಳೆಗಳು ಮಳೆ ಇಲ್ಲದೆ ಒಣಗಿ ಹೋಗಿವೆ. ಬಿತ್ತನೆಗೆ ತಂದಿದ್ದ ಬೀಜ, ಗೊಬ್ಬರದ ಸಾಲದ ಹೊರೆ ರೈತರ ಮೇಲಿದೆ. ಆದ್ದರಿಂದ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿ, ಕಂದಾಯ ಇಲಾಖೆಯಿಂದ ವರದಿ ತಯಾರಿಸಬೇಕು.

ಬಿತ್ತನೆ ವಿಫಲಗೊಂಡ ರೈತರಿಗೆ ಬೆಳೆ ವಿಮೆ ಮತ್ತು ಪ್ರತಿ ಎಕರೆಗೆ ಕನಿಷ್ಠ ರೂ. 25,000 ಪರಿಹಾರ ನೀಡಬೇಕು. ಜಾನುವಾರುಗಳಿಗೆ ಮೇವು ಬ್ಯಾಂಕ್ ತೆರೆಯಬೇಕು ಮತ್ತು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಟ್ಯಾಂಕರ್ ವ್ಯವಸ್ಥೆ ಮಾಡಬೇಕು.

ರೈತರ ಬೆಳೆ ಸಾಲ ಮನ್ನಾ ಮಾಡಿ, ಮುಂದಿನ ಹಂಗಾಮಿಗೆ ಉಚಿತವಾಗಿ ಬೀಜ ಮತ್ತು ಗೊಬ್ಬರ ವಿತರಿಸಬೇಕು. ನರೇಗಾ ಯೋಜನೆಯಡಿ, ಕೆಲಸದ ದಿನಗಳನ್ನು 200 ದಿನಗಳಿಗೆ ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.

# ಜೀತ ವಿಮುಕ್ತರಿಗೆ ನಿವೇಶನ, ವಸತಿ ಸೌಲಭ್ಯಕ್ಕೆ ಆದ್ಯತೆ ನೀಡಿ: ಜಿಲ್ಲಾಧಿಕಾರಿ ಜಿ.ಪ್ರಭು

ಚಿಕ್ಕಬಳ್ಳಾಪುರ



ಜೀತ ವಿಮುಕ್ತರಿಗೆ ನಿವೇಶನ ಮಂಜೂರು ಮಾಡುವುದರ ಜೊತೆಗೆ ಅವರಿಗೆ ಆದ್ಯತೆ ಮೇರೆಗೆ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಮಾಜದ ದುರ್ಬಲ ವರ್ಗಗಳ ಸಮಗ್ರ ಅಭಿವೃದ್ಧಿಗೆ ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ನಿವೇಶನ ರಹಿತ ಮತ್ತು ವಸತಿ ರಹಿತ ಕುಟುಂಬಗಳ ನಿಖರ ಮಾಹಿತಿಯನ್ನು ತಾಲೂಕುವಾರು ಸಂಗ್ರಹಿಸಿ ಒಂದು ವಾರದೊಳಗೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸಲ್ಲಿಸುವಂತೆ ಸೂಚಿಸಿದರು. ಈ ಮಾಹಿತಿಯ ಆಧಾರದ ಮೇಲೆ ಅರ್ಹ ಫಲಾನುಭವಿಗಳಿಗೆ ನಿವೇಶನ ಹಾಗೂ ವಸತಿ ಯೋಜನೆಗಳ ಸೌಲಭ್ಯಗಳನ್ನು ಆದ್ಯತೆ ಮೇರೆಗೆ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸುವ ಉದ್ದೇಶದಿಂದ ತಾಲೂಕು ಮಟ್ಟದಲ್ಲಿ ದಲಿತ ಕುಂದುಕೊರತೆ ಸಭೆಗಳನ್ನು ನಿಯಮಿತವಾಗಿ ನಡೆಸಬೇಕು ಎಂದು ಸೂಚಿಸಿದ ಅವರು, ಸಭೆಗಳಲ್ಲಿ ಪ್ರಸ್ತಾಪವಾಗುವ ಸಮಸ್ಯೆಗಳನ್ನು ಸಂಬಂಧಿತ ಇಲಾಖೆಗಳು ತ್ವರಿತವಾಗಿ ಪರಿಹರಿಸಬೇಕು ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಿದ ಜಿಲ್ಲಾಧಿಕಾರಿಗಳು, ಜಿಲ್ಲೆಯ ಎಲ್ಲಾ ಗ್ರಾಮಗಳಿಗೆ ಸ್ಮಶಾನಕ್ಕಾಗಿ ಅಗತ್ಯ ಭೂಮಿಯನ್ನು ಗುರುತಿಸಿ ಒದಗಿಸುವ ಕಾರ್ಯವನ್ನು ವಿಳಂಬವಿಲ್ಲದೆ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಹಾಗೂ ಇತರೆ ಇಲಾಖೆಗಳ ವ್ಯಾಪ್ತಿಯಲ್ಲಿರುವ ವಸತಿ ಶಾಲೆಗಳು ಮತ್ತು ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಎಲ್ಲಾ ವಸತಿ ಶಾಲೆಗಳು ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು. ವಿದ್ಯಾರ್ಥಿಗಳ ಆಗಮನ, ನಿರ್ಗಮನ ಸೇರಿದಂತೆ ದೈನಂದಿನ ಚಲನ–ವಲನದ ಮಾಹಿತಿಯನ್ನು ದಾಖಲಿಸುವ ವಹಿಯನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆಯೇ ಎಂಬುದನ್ನು ಮೇಲಧಿಕಾರಿಗಳು ನಿಯಮಿತವಾಗಿ ಪರಿಶೀಲಿಸಬೇಕು ಎಂದು ಸೂಚಿಸಿದರು.

ವಿದ್ಯಾರ್ಥಿಗಳ ಸುರಕ್ಷತೆಗೆ ಸಂಬಂಧಿಸಿದ ಯಾವುದೇ ನಿರ್ಲಕ್ಷ್ಯವನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಎಚ್ಚರಿಕೆ ನೀಡಿದ ಅವರು, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ವಸತಿ ನಿಲಯಗಳು, ಶಾಲಾ ಕಟ್ಟಡಗಳು ಹಾಗೂ ಇತರೆ ನಿರ್ಮಾಣ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರು ವಿವಿಧ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಉಪವಿಭಾಗಾಧಿಕಾರಿ ಡಿ.ಎಚ್. ಅಶ್ವಿನ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದ ರೆಡ್ಡಿ, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# 18ರಂದು ಸಮಾಜಮುಖಿ ಕಾರ್ಯಕ್ರಮ

ತಿಪಟೂರು

ನಿವೃತ್ತ ಎಸಿಪಿ ಹಾಗೂ ಬಿಜೆಪಿ ಮುಖಂಡ ಲೋಕೇಶ್ವರ ಅವರ ಜನ್ಮದಿನದ ಅಂಗವಾಗಿ ಜುಲೈ 18ರಂದು ತಾಲೂಕಿನಾದ್ಯಂತ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಲೋಕೇಶ್ವರ ಅಭಿಮಾನಿ ಬಳಗ ತಿಳಿಸಿದೆ.

ನಗರದ ಹೋಟೆಲ್ ಶಿವಂ ಕೆಫೆ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಭಿಮಾನಿ ಬಳಗದ ರೇಣು ಪಟೇಲ್, ಪ್ರತಿ ವರ್ಷದಂತೆ ಈ ವರ್ಷವೂ ಲೋಕೇಶ್ವರ ಅವರ ಜನ್ಮದಿನವನ್ನು ನಗರದ ವಿನಾಯಕನಗರದಲ್ಲಿರುವ ಅವರ ಸ್ವಗೃಹದ ಆವರಣದಲ್ಲಿ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಹುಟ್ಟುಹಬ್ಬದ ಅಂಗವಾಗಿ ತಾಲೂಕಿನ ಸುಮಾರು 3,000 ಬಡ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣೆ, ನಗರಸಭೆ ಪೌರ ಕಾರ್ಮಿಕರಿಗೆ ಸಮವಸ್ತ್ರ ವಿತರಣೆ, ಪತ್ರಿಕಾ ವಿತರಕರಿಗೆ ಬಟ್ಟೆ ವಿತರಣೆ, ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ಮತ್ತು ಬ್ರೆಡ್ ವಿತರಣೆ ಹಾಗೂ ರಕ್ತದಾನ ಶಿಬಿರ ಸೇರಿದಂತೆ ಹಲವು ಸಾಮಾಜಿಕ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಅಭಿಮಾನಿ ಬಳಗದ ಅಧ್ಯಕ್ಷ ನಾಗರಾಜು ಮಾತನಾಡಿ, ಜನ್ಮದಿನದ ಮುನ್ನಾದಿನವೇ 3,000 ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ ನಡೆಯಲಿದ್ದು, ರಕ್ತದಾನ ಶಿಬಿರದಲ್ಲಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಶಿಬಿರದಲ್ಲಿ ಭಾಗವಹಿಸುವವರಿಗೆ ಅಭಿಮಾನಿ ಬಳಗದ ವತಿಯಿಂದ ಊಟದ ವ್ಯವಸ್ಥೆಯನ್ನೂ ಮಾಡಲಾಗಿದೆ ಎಂದು ತಿಳಿಸಿದರು.

ನಗರ ಹಾಗೂ ತಾಲೂಕಿನ ವಿವಿಧ ಭಾಗಗಳಲ್ಲಿ ಅಭಿಮಾನಿಗಳು ಲೋಕೇಶ್ವರ ಅವರ ಜನ್ಮದಿನವನ್ನು ಸಮಾಜಮುಖಿ ಕಾರ್ಯಕ್ರಮಗಳೊಂದಿಗೆ ಆಚರಿಸಲು ಸಿದ್ಧತೆ ನಡೆಸಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ನಿವೃತ್ತ ಪೊಲೀಸ್ ಅಧಿಕಾರಿ ಲಿಂಗರಾಜು, ಶಶಿಭೂಷಣ್, ಮಂಜುನಾಥ್, ರೇಣು, ದಯಾನಂದ್ ಹಾಗೂ ಶಶಿಕುಮಾರ್ ಉಪಸ್ಥಿತರಿದ್ದರು.

# ಶಿಕ್ಷಕರನ್ನು ಗೌರವಿಸುವ ಸಂಸ್ಕಾರ ಮಕ್ಕಳಲ್ಲಿ ಬೆಳೆಸಬೇಕು: ಮಂಗಳಾನಂದ ಸ್ವಾಮೀಜಿ



ಶಿಡ್ಲಘಟ್ಟ

ಮಕ್ಕಳ ಜೀವನದಲ್ಲಿ ಗುರುಗಳ ಸ್ಥಾನ ಅತ್ಯಂತ ಶ್ರೇಷ್ಠವಾಗಿದ್ದು, ಪೋಷಕರು ಬಾಲ್ಯದಿಂದಲೇ ಮಕ್ಕಳಲ್ಲಿ ಶಿಕ್ಷಕರನ್ನು ಗೌರವಿಸುವ ಸಂಸ್ಕಾರವನ್ನು ಬೆಳೆಸಬೇಕು ಎಂದು ಆದಿಚುಂಚನಗಿರಿ ಮಠದ ಚಿಕ್ಕಬಳ್ಳಾಪುರ ಶಾಖಾ ಮಠದ ಶ್ರೀ ಮಂಗಳಾನಂದ ಸ್ವಾಮೀಜಿ ಹೇಳಿದರು.

ನಗರದ ಹೊರವಲಯದ ಹನುಮಂತಪುರ ಗೇಟ್ ಸಮೀಪದ ಬಿಜಿಎಸ್ ಶಾಲೆಯಲ್ಲಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪೋಷಕರಿಂದ ಆಯೋಜಿಸಿದ್ದ 'ಗುರು ನಮನ–2026' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉತ್ತಮ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವೂ ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸುತ್ತದೆ. ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣ ಹಾಗೂ ಯಶಸ್ವಿ ಬದುಕಿನ ರೂಪುಗೊಳಿಸುವಿಕೆಯಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಪೋಷಕರು ಮತ್ತು ಶಿಕ್ಷಕರ ನಡುವೆ ಉತ್ತಮ ಬಾಂಧವ್ಯ ಬೆಳೆದರೆ ಮಕ್ಕಳ ಶೈಕ್ಷಣಿಕ ಹಾಗೂ ನೈತಿಕ ಬೆಳವಣಿಗೆಗೆ ಮತ್ತಷ್ಟು ನೆರವಾಗುತ್ತದೆ ಎಂದು ಅವರು ತಿಳಿಸಿದರು.

ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್‌ನ ಆಡಳಿತಾಧಿಕಾರಿ ಎನ್. ಶಿವರಾಮರೆಡ್ಡಿ ಮಾತನಾಡಿ, ಶಿಕ್ಷಕರು ತಮ್ಮ ಕುಟುಂಬಕ್ಕಿಂತ ಸಮಾಜದ ಮಕ್ಕಳ ಭವಿಷ್ಯವನ್ನು ರೂಪಿಸುವ ಮಹತ್ತರ ಜವಾಬ್ದಾರಿಯನ್ನು ಹೊತ್ತು ಕಾರ್ಯನಿರ್ವಹಿಸುತ್ತಿದ್ದಾರೆ. ತಮ್ಮ ಸ್ವಂತ ಬದುಕಿಗಿಂತ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಶ್ರಮಿಸುವ ಶಿಕ್ಷಕರನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಹೇಳಿದರು.

ಶಾಲೆಯ ಪ್ರಾಂಶುಪಾಲ ಮಹದೇವ್ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯ ಯಶಸ್ಸಿನ ಹಿಂದೆ ತಂದೆ–ತಾಯಿ ಮತ್ತು ಗುರುಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಜೀವನದಲ್ಲಿ ಅವರನ್ನು ಎಂದಿಗೂ ಮರೆಯಬಾರದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪೋಷಕರಾದ ಹನುಮಂತಪುರ ಮುನೇಗೌಡ, ಶಿಡ್ಲಘಟ್ಟ ಬಾಲಕೃಷ್ಣ, ಬೋದಗೂರು ಚಂದ್ರಣ್ಣ ಸೇರಿದಂತೆ ಪೋಷಕರು ಶಿಕ್ಷಕರನ್ನು ಸನ್ಮಾನಿಸಿ ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪೋಷಕರು, ಶಿಕ್ಷಕರು, ಶಾಲೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 27ರಿಂದ ನಗರದಲ್ಲಿ ರಾಜ್ಯ ರ‍್ಯಾಂಕಿಂಗ್ ಬ್ಯಾಡ್ಮಿಂಟನ್ ಪಂದ್ಯಾವಳಿ

ತುಮಕೂರು



ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್‌ನ 75 ವರ್ಷಾಚರಣೆ ಅಂಗವಾಗಿ ಈ ತಿಂಗಳ 27ರಿಂದ ಆರು ದಿನಗಳ ಕಾಲ ನಗರದಲ್ಲಿ ಯೋನೆಕ್ಸ್–ಸನ್‌ರೈಸ್ ರಾಜ್ಯ ರ‍್ಯಾಂಕಿಂಗ್ ಬ್ಯಾಡ್ಮಿಂಟನ್ ಅಂಡರ್–11 ಮತ್ತು ಅಂಡರ್–13 ವಿಭಾಗಗಳ ಪಂದ್ಯಾವಳಿ ಏರ್ಪಾಟಾಗಿದೆ. ರಾಜ್ಯಾದ್ಯಂತ ಸುಮಾರು 600 ಆಟಗಾರರು ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದಾರೆ ಎಂದು ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಅಧ್ಯಕ್ಷರೂ ಆದ ಮಾಜಿ ಸಚಿವ ಕುಮಾರ್ ಬಂಗಾರಪ್ಪ ಹೇಳಿದರು.

ಗುರುವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬ್ಯಾಡ್ಮಿಂಟನ್‌ನಲ್ಲಿ ರಾಜ್ಯ ಮುಂಚೂಣಿಯಲ್ಲಿದೆ. ರಾಜ್ಯದ ಪ್ರತಿಭಾವಂತ ಬ್ಯಾಡ್ಮಿಂಟನ್ ಆಟಗಾರರು ವಿಶ್ವ ಮಟ್ಟದಲ್ಲಿ ಹೆಸರು ಮಾಡಿದ್ದಾರೆ. ಮುಂಬರುವ ಒಲಂಪಿಕ್ ಗುರಿ ಇಟ್ಟುಕೊಂಡು ಪ್ರತಿಭಾನ್ವಿತ ಬ್ಯಾಡ್ಮಿಂಟನ್ ಆಟಗಾರರನ್ನು ಗುರುತಿಸಲು, ಸಿದ್ಧಪಡಿಸಲು ಈ ಟೂರ್ನಮೆಂಟ್ ಉತ್ತಮ ವೇದಿಕೆ ಆಗಲಿದೆ. ಆರು ಅಂಕಣಗಳಲ್ಲಿ ಆರು ದಿನಗಳ ಕಾಲ ಪಂದ್ಯಾವಳಿ ನಡೆಯಲಿದೆ. ಆಗಸ್ಟ್ 1ರಂದು ಸಮಾರೋಪ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

27ರಂದು ತುಮಕೂರು ಬ್ಯಾಡ್ಮಿಂಟನ್ ಅಕಾಡೆಮಿ ಸ್ಥಳದಲ್ಲಿ ಬೆಳಿಗ್ಗೆ 10.45ಕ್ಕೆ ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿಗಳ ದಿವ್ಯಸಾನಿಧ್ಯದ ಸಮಾರಂಭದಲ್ಲಿ ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಅವರು ಯೋನೆಕ್ಸ್–ಸನ್‌ರೈಸ್ ರಾಜ್ಯ ಬ್ಯಾಂಕಿಂಗ್ ಬ್ಯಾಡ್ಮಿಂಟನ್ ಅಂಡರ್–11 ಮತ್ತು ಅಂಡರ್–13 ಪಂದ್ಯಾವಳಿ ಉದ್ಘಾಟಿಸುವರು. ಅಸೋಸಿಯೇಷನ್ ಅಧ್ಯಕ್ಷ ಕುಮಾರ್ ಬಂಗಾರಪ್ಪ ಅಧ್ಯಕ್ಷತೆವಹಿಸಿದರೆ ಕೇಂದ್ರ ಸಚಿವ ವಿ. ಸೋಮಣ್ಣ, ಜಿಲ್ಲೆಯ ಎಲ್ಲಾ ಶಾಸಕರು, ವಿಧಾನಪರಿಷತ್ ಸದಸ್ಯರು, ಹೆಸರಾಂತ ಕ್ರೀಡಾಪಟುಗಳು ಅತಿಥಿಗಳಾಗಿ ಭಾಗವಹಿಸುವರು ಎಂದು ಕುಮಾರ್ ಬಂಗಾರಪ್ಪ ತಿಳಿಸಿದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ 500ಕ್ಕೂ ಹೆಚ್ಚು ಪ್ರತಿಭಾವಂತ ಕಿರಿಯ ಬ್ಯಾಡ್ಮಿಂಟನ್ ಆಟಗಾರರು ಈ ಪಂದ್ಯಾವಳಿಯಲ್ಲಿ ಭಾಗವಹಿಸುವ ನಿರೀಕ್ಷೆಯಿದ್ದು, ಇದು ಅಂಡರ್–11 ಹಾಗೂ ಅಂಡರ್–13 ವಿಭಾಗಗಳ ರಾಜ್ಯದ ಪ್ರಮುಖ ಬ್ಯಾಡ್ಮಿಂಟನ್ ಪಂದ್ಯಾವಳಿಗಳಲ್ಲೊಂದಾಗಿದೆ ಎಂದ ಅವರು, ಕ್ರಿಕೆಟ್ ನಂತರ ಬ್ಯಾಡ್ಮಿಂಟ್ ಹೆಚ್ಚು ಜನಪ್ರಿಯ ಆಟವಾಗಿದೆ. ರಾಜ್ಯದಲ್ಲಿ ಪ್ರತಿನಿತ್ಯ ಸುಮಾರು ನಾಲ್ಕೂವರೆ ಸಾವಿರ ಜನ ಬ್ಯಾಡ್ಮಿಂಟನ್ ಅಭ್ಯಾಸ ಮಾಡುತ್ತಿದ್ದಾರೆ. ಹೊಸ ಪ್ರತಿಭೆಗಳು ಹೊರಹೊಮ್ಮಬೇಕು, ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬೇಕು. ಇಂತಹ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಎಲ್ಲಾ ಜಿಲ್ಲೆಗಳಲ್ಲೂ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ ಮಾಡಲು ಜಮೀನು ನೀಡಬೇಕು ಎಂದು ಸರ್ಕಾರಕ್ಕೆ ಕೋರಿಕೆ ಸಲ್ಲಿಸಿದ್ದು ಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದರು.

ರಾಜ್ಯ ಬ್ಯಾಂಡ್ಮಿಂಟನ್ ಅಸೋಸಿಯೇಷನ್ 1951ರಲ್ಲಿ ಮೈಸೂರು ಮಹಾರಾಜರ ನೇತೃತ್ವದಲ್ಲಿ ಆರಂಭವಾಯಿತು. ಇದರ 75ನೇ ವರ್ಷದ ಅಂಗವಾಗಿ ಎಲ್ಲಾ ಜಿಲ್ಲೆಗಳಲ್ಲೂ ಬ್ಯಾಡ್ಮಿಂಟನ್ ಚಟುವಟಿಕೆ ಹಮ್ಮಿಕೊಂಡು ಸ್ಥಳೀಯ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕುಮಾರ್ ಬಂಗಾರಪ್ಪ ಹೇಳಿದರು.

ಶಾಸಕ ಜಿ.ಬಿ. ಜ್ಯೋತಿಗಣೇಶ್ ಮಾತನಾಡಿ, ರಾಜ್ಯಮಟ್ಟದ ಪ್ರತಿಷ್ಠಿತ ಬ್ಯಾಡ್ಮಿಂಟನ್ ಟೂರ್ನಿ ತುಮಕೂರು ನಗರದಲ್ಲಿ ನಡೆಯುತ್ತಿರುವುದು ಅಭಿಮಾನದ ವಿಚಾರ. ನಗರದ ಎಲ್ಲಾ ಕ್ರೀಡಾಪಟುಗಳು ಬೆಂಬಲ ನೀಡಿ ಸಹಕರಿಸಬೇಕು, ನಾಗರೀಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪಂದ್ಯಾವಳಿ ವೀಕ್ಷಿಸಿ ಸಂಭ್ರಮಿಸಬೇಕು ಎಂದು ಮನವಿ ಮಾಡಿದರು.

ತುಮಕೂರು ಬ್ಯಾಡ್ಮಿಂಟನ್ ಅಕಾಡೆಮಿ ಅಧ್ಯಕ್ಷ ಪಿ. ಪ್ರವೀಣ್, ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಗೌರವ ಕಾರ್ಯದರ್ಶಿ ವಿ. ಮುರಳಿಧರ್, ಸದಸ್ಯರಾದ ಸುಧೀರ್, ಹರೀಶ್‌ಕುಮಾರ್, ಜಿಲ್ಲಾ ಆರ್ಯ ಈಡಿಗರ ಸಂಘದ ಗೌರವಾಧ್ಯಕ್ಷ ಅಜಯ್‌ಕುಮಾರ್, ಅಧ್ಯಕ್ಷ ಎಂ. ನಾಗರಾಜು, ಜಂಟಿ ಕಾರ್ಯದರ್ಶಿ ಊರುಕೆರೆ ಪುರುಷೋತ್ತಮ್, ಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಅಸೋಸಿಯೇಷನ್ ಕಾರ್ಯದರ್ಶಿ ಎ.ಎನ್. ಪ್ರಭಾಕರ್ ಮೊದಲಾದವರು ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy